ಸಂಪುಟ : 13 Volume ಸಂಚಿಕೆ : 211 Issue ಪುಟಗಳು : 08 Pages ಭಾನುವಾರ 05 ಅಕ್ಟೋಬರ್ 2025 ₹2 RNINO:KARKAN/2011/48371 BDR/054/2026-20274 www.mallammanudi.in mallammanudi@gmail.com 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

" ಶಕ್ತಿ ಇರುವುದು ಸಾಧು ಸ್ವಭಾವದಲ್ಲಿ ಹಾಗೂ ಚಾರಿತ್ರ ಶುದ್ಧಿಯಲ್ಲಿ "
ಸ್ವಾಮಿ ವಿವೇಕಾನಂದ

» 2 ದೈಹಿಕ ಸಮಸ್ಯೆಗೆ ಸೂಕ್ತ ಚಿಕಿತ್ಸೆ
» 7.ಮನುಷ್ಯ ಕಾಣೆ: ಪತ್ತೆಗಾಗಿ ಮನವಿ
» 8. ಮುಖ್ಯಮಂತ್ರಿಗಳ ಕೊಪ್ಪಳ ಜಿಲ್ಲಾ ಪ್ರವಾಸ

# ಜೀವ ತೆಗೆದ ಸಿರಪ್



## ಕೇಂದ್ರ ಆರೋಗ್ಯ ಇಲಾಖೆಯಿಂದ ಮಾರ್ಗಸೂಚಿ

ನವದೆಹಲಿ:ಅ.4: ಪೋಷಕರೇ ನಿಮ್ಮ ಮಕ್ಕಳಿಗೆ ಕೆಮ್ಮು, ಶೀತ ಅಂತ ಸಿರಾಪ್ ಕೊಡುವ ಮುನ್ನ ಹುಷಾರ್. ಅದೇ ಸಿರಾಪ್ ರಾಜಸ್ಥಾನ, ಮಧ್ಯಪ್ರದೇಶದಲ್ಲಿ 11 ಮಕ್ಕಳನ್ನ ಬಲಿ ಪಡೆದಿದ್ದು, ದೇಶದ್ಯಾಂತ ಆತಂಕ ಸೃಷ್ಟಿಸಿದೆ. ಇದೀಗ ಕೇಂದ್ರ ಆರೋಗ್ಯ ಇಲಾಖೆ 2 ವರ್ಷದೊಳಗಿನ ಮಕ್ಕಳಿಗೆ ಕೆಮ್ಮಿನ ಸಿರಪ್ ನೀಡದಂತೆ ಮಾರ್ಗಸೂಚಿ ಹೊರಡಿಸಿದೆ.

ರಾಜಸ್ಥಾನ, ಮಧ್ಯಪ್ರದೇಶದಲ್ಲಿ ಕೆಮ್ಮಿನ ಸಿರಪ್ ಕುಡಿದು ಮಕ್ಕಳು ಸಾವನ್ನಪ್ಪಿದ ಬೆನ್ನಲ್ಲೇ ಅಲರ್ಟ್ ಆದ ಕೇಂದ್ರ ಆರೋಗ್ಯ ಇಲಾಖೆ ರಾಜ್ಯಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದೆ. 2 ವರ್ಷಕ್ಕಿಂತ ಕೆಳಗಿನ ಮಕ್ಕಳಿಗೆ ಕೆಮ್ಮು, ಶೀತಗಳಿಗೆ ಸಿರಪ್‌ನ್ನು ಶಿಪಾರಸು ಮಾಡದಂತೆ ಸೂಚನೆ ನೀಡಲಾಗಿದೆ.

ಕೇಂದ್ರದ ಸೂಚನೆ ಬೆನ್ನಲ್ಲೇ ರಾಜ್ಯದಲ್ಲೂ ಆರೋಗ್ಯ ಇಲಾಖೆ ಅಲರ್ಟ್ ಆಗಿದೆ. ಎಲ್ಲಾ ಸರ್ಕಾರಿ ಆಸ್ಪತ್ರೆಗಳಿಗೆ ಮಕ್ಕಳ ಸಾವಿಗೆ ಕಾರಣವಾದ ಸಿರಪ್ ಲಭ್ಯವಿರುವ ಬಗ್ಗೆ ಮಾಹಿತಿ ಕೇಳಿದೆ. ರಾಜಸ್ಥಾನದಲ್ಲಿ ಸಾವಿಗೆ ಕಾರಣವಾದ ಸಿರಪ್‌ನ ಬ್ಯಾಚ್ ನಮ್ಮ ಕರ್ನಾಟಕದಲ್ಲಿ ಲಭ್ಯವಿಲ್ಲ ಅಂತ ರಾಜ್ಯ ಔಷಧ ನಿಯಂತ್ರಣ ಇಲಾಖೆ ಮಾಹಿತಿ ನೀಡಿದೆ. ಈ ಬಗ್ಗೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಪ್ರತಿಕ್ರಿಯಿಸಿ, ನಮ್ಮ ರಾಜ್ಯದ ಔಷಧಿ ನಿಯಂತ್ರಣ ಅಧಿಕಾರಿಗಳಿಗೆ ನಿಗಾ ವಹಿಸಲು ಹೇಳಿದ್ದೇನೆ. ನಮ್ಮ ರಾಜ್ಯಕ್ಕೆ ಆ ಕೋಲ್ಡ್ ಸಿರಪ್ ಸಪ್ಲೈ ಇಲ್ಲ. ಖಾಸಗಿಯಾಗಿ ತರಿಸಿಕೊಂಡಿದ್ದಾರಾ ಎಂಬ ಬಗ್ಗೆ ಪರೀಶೀಲನೆ ಮಾಡುವಂತೆ ಸೂಚಿಸಿದ್ದೇನೆ. ನಮ್ಮ ರಾಜ್ಯದ ಔಷಧಿ ನಿಯಂತ್ರಣ ಇಲಾಖೆ ಪ್ರತಿ ತಿಂಗಳು ಗುಣಮಟ್ಟದ ಪರೀಕ್ಷೆ ಮಾಡುತ್ತದೆ. ನಾವು ತೆಗೆದುಕೊಂಡಿರುವಷ್ಟುರು ಕ್ರಮ ಬೇರೆ ಯಾವ ರಾಜ್ಯದವರು ತೆಗೆದುಕೊಂಡಿಲ್ಲ. ಹೀಗಾಗಿ ಪೋಷಕರು ಆತಂಕಗೊಳ್ಳುವ ಅಗತ್ಯ ಇಲ್ಲ ಎಂದಿದ್ದಾರೆ.

ಇನ್ನು ಕೆಮ್ಮಿನ ಸಿರಪ್‌ನಿಂದಾಗಿ ಸಾವು ಪ್ರಕರಣದ ಸಂಬಂಧ ಕೇಂದ್ರದ ಮಾರ್ಗಸೂಚಿಗೆ ಸಚಿವ ಮಹದೇವಪ್ಪ ಟೀಕಿಸಿದ್ದಾರೆ. ಮಕ್ಕಳ ಸಾವು ವಿಷಾದಕರ, ಮಕ್ಕಳ ಸಾವಿನ ಮೊದಲೇ ಈ ಕ್ರಮ ತೆಗೆದುಕೊಳ್ಳಬೇಕಿತ್ತು. ಮಾರುಕಟ್ಟೆಗೆ ಔಷಧ ಬಿಡುವ ಮುನ್ನವೇ ಪರೀಕ್ಷೆ ಮಾಡಬೇಕಿತ್ತು. ಈಗ ಅದನ್ನ ಬಳಸಬೇಡಿ ಎಂದು ಕೇಂದ್ರ ಹೇಳಿರುವುದು ಸರಿಯಾದ ಕ್ರಮ ಅಲ್ಲ ಎಂದಿದ್ದಾರೆ. ಪೋಷಕರಿಗೆ ಮಕ್ಕಳ ತಜ್ಞರ ಸಲಹೆ ಎರಡು ರಾಜ್ಯಗಳಲ್ಲಿ ಕೆಮ್ಮಿನ ಸಿರಪ್‌ನಿಂದ ಮಕ್ಕಳು ಸಾವನ್ನಪ್ಪಿರುವ ಬೆನ್ನಲ್ಲೇ ಪೋಷಕರಿಗೆ ಮಕ್ಕಳ ತಜ್ಞರು ಸಲಹೆ ನೀಡಿದ್ದಾರೆ. 6 ವರ್ಷದೊಳಗಿನ ಮಕ್ಕಳಿಗೆ ಕೆಮ್ಮು ಎಂದಾಕ್ಷಣ ಯಾವುದೇ ಸಿರಪ್ ತಂದು ಕೊಡಬೇಡಿ. ವೈದ್ಯರನ್ನು ಸಂಪರ್ಕಿಸಿಯೇ ಮಕ್ಕಳಿಗೆ ಸಿರಪ್ ಕೊಡಿ. ಇಲ್ಲವಾದಲ್ಲಿ ಮಕ್ಕಳ ಜೀವಕ್ಕೆ ಅಪಾಯ ಎದುರಾಗಬಹುದು ಎಂದು ಮಕ್ಕಳ ತಜ್ಞ ಡಾ. ಸುರೇಂದ್ರ ಸಲಹೆ ನೀಡಿದ್ದಾರೆ.

### ಕೇಂದ್ರ ಆರೋಗ್ಯ ಇಲಾಖೆ ಶಿಪಾರಸು :

» * ಮಕ್ಕಳ ಆರೈಕೆಯಲ್ಲಿ ಔಷಧ ಬಗ್ಗೆ ತೀವ್ರ ಎಚ್ಚರಿಕೆಯಿಂದ ಇರಬೇಕು
» * 2 ವರ್ಷಕ್ಕಿಂತ ಕೆಳಗಿನ ಮಕ್ಕಳಿಗೆ ಕೆಮ್ಮು, ಶೀತಕ್ಕೆ ಸಿರಪ್ ಬೇಡ
» * ವೈದ್ಯರು ಸಿರಪ್ ಶಿಫಾರಸು ಮಾಡದಂತೆ ಆರೋಗ್ಯ ಇಲಾಖೆ ಸೂಚನೆ
» * ಕೆಮ್ಮು ಹೆಚ್ಚಿದ್ರೆ ವೈದ್ಯರ ಮಾರ್ಗದರ್ಶನದಲ್ಲಿ ಡೊಸೇಜ್ ಮೀರದಂತೆ ಬಳಕೆ
» * ಮಾಮೂಲಿ ಶೀತ ಜ್ವರಗಳಿಗೆ ಸಿರಪ್ ಬಳಕೆ ಬೇಡ
» * 5 ವರ್ಷಕ್ಕಿಂತ ಕಡಿಮೆ ವಯಸ್ಸಿನವರಿಗೆ ಶಿಫಾರಸು ಮಾಡುವಂತಿಲ್ಲ
» * ಶೀತ, ಕೆಮ್ಮು ವೇಳೆ ಮಕ್ಕಳು ಡಿಹೈಡ್ರೇಟ್ ಆಗದಂತೆ ನೋಡಿಕೊಳ್ಳಬೇಕು
» * ಶೀತ, ಕೆಮ್ಮು ತೀವ್ರ ಇದ್ರೆ ಮಾತ್ರ ವೈದ್ಯರ ಸಲಹೆಯಂತೆ ಸಿರಪ್ ಬಳಸಬೇಕು.

ರಾಜಸ್ಥಾನ ಸರ್ಕಾರದಿಂದ ಮಹತ್ವದ ನಿರ್ಧಾರ

ರಾಜಸ್ಥಾನದಲ್ಲಿ ಮಕ್ಕಳ ಸಾವಿಗೆ ಕಾರಣವಾದ ಕೆಮ್ಮಿನ ಸಿರಪ್‌ಗೆ ನಿಷೇಧ ಹೇರಲಾಗಿದೆ. ರಾಜಸ್ಥಾನ ಸರ್ಕಾರ ಹಲವು ಔಷಧಿಗಳನ್ನ ನಿಷೇಧಿಸಿ ಆದೇಶ ಹೊರಡಿಸಿದೆ ಜೊತೆಗೆ ಕೆಮ್ಮಿನ ಸಿರಪ್‌ಗಳ ವಿತರಣೆಯನ್ನು ನಿರ್ಬಂಧಿಸಲಾಗಿದೆ.

ಹೆಚ್ಚುವರಿಯಾಗಿ, ವಿವಾದದ ಕೇಂದ್ರಬಿಂದುವಾಗಿರುವ

ಕೇಸನ್ಸ್ ಫಾರ್ಮಾ ಕಂಪನಿಯು ಪೂರೈಸುವ ಎಲ್ಲಾ 19 ವಿಧದ ಔಷಧಿಗಳ ವಿತರಣೆಯನ್ನು ಮುಂದಿನ ಆದೇಶದವರೆಗೆ ಸರ್ಕಾರ ನಿಷೇಧಿಸಿದೆ. 2012ರಿಂದ ಕೇಸನ್ಸ್ ಫಾರ್ಮಾ

ದಿಂದ 10,000ಕ್ಕೂ ಹೆಚ್ಚು ಮಾದರಿಗಳನ್ನು ಪರೀಕ್ಷಿಸಲಾಗಿದೆ. ಅವುಗಳಲ್ಲಿ 42 ಗುಣಮಟ್ಟದ ಮಾನದಂಡಗಳನ್ನು ಪೂರೈಸಲು ವಿಫಲವಾಗಿವೆ ಎಂದು ಸರ್ಕಾರಿ ದತ್ತಾಂಶವು ಬಹಿರಂಗಪಡಿಸಿದೆ.

ಔಷಧ ಗುಣಮಟ್ಟದ ಮಾನದಂಡಗಳಿಗೆ ಸಂಬಂಧಿಸಿದ ನಿರ್ಧಾರಗಳ ಮೇಲೆ ಪ್ರಭಾವ ಬೀರಿದ ಆರೋಪದ ಮೇಲೆ ರಾಜಸ್ಥಾನ ಸರ್ಕಾರ ರಾಜ್ಯ

ಔಷಧ ನಿಯಂತ್ರಕ ರಾಜಾರಾಮ್ ಶರ್ಮಾರನ್ನು ಅಮಾನತುಗೊಳಿಸಲಾಗಿದೆ. ಮುನ್ನೆಚ್ಚರಿಕೆ ಕ್ರಮವಾಗಿ ರಾಜ್ಯಾದ್ಯಂತ ಸಾಮಾನ್ಯ ಕೆಮ್ಮು ನಿವಾರಕ ಡೆಕ್ಸ್ಟ್ರೋಮೆಥೋರ್ಫಾನ್ ಹೊಂದಿರುವ ಎಲ್ಲಾ ಕೆಮ್ಮಿನ ಸಿರಪ್‌ಗಳ ವಿತರಣೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ.

## ಪ್ರತಿ ಜಿಲ್ಲೆಗೆ ಒಂದು ಸರ್ಕಾರಿ ಮೆಡಿಕಲ್ ಕಾಲೇಜು, ಒಂದು ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ನನ್ನ ಗುರಿ: ಸಿಎಂ



ಬೆಂಗಳೂರು:ಅ.4: ಸರ್ಕಾರಿ ಆಸ್ಪತ್ರೆಗೆ ಬರುವವರೆಲ್ಲಾ ಬಡ–ಮಧ್ಯಮ ವರ್ಗದವರು. ಇವರಿಗೂ ಅತ್ಯುತ್ತಮ ಆರೋಗ್ಯ ಸೇವೆ ಒದಗಿಸಲು ಪ್ರತಿ ಜಿಲ್ಲೆಗೆ ಒಂದು ಸರ್ಕಾರಿ ಮೆಡಿಕಲ್ ಕಾಲೇಜು, ಒಂದು ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಿಸುವುದು ನನ್ನ ಗುರಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರಣದಲ್ಲಿ ನಿರ್ಮಿಸಿರುವ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಟ್ಟಡದ ಉದ್ಘಾಟನೆ ಹಾಗೂ ಗೃಹ ವೈದ್ಯರ ವಸತಿ ನಿಲಯ ಕಟ್ಟಡ ನಿರ್ಮಾಣ ಕಾಮಗಾರಿಯ ಉದ್ಘಾಟನೆ, ಬೆಳಗಾವಿ ಸ್ಮಾರ್ಟ್ ಸಿಟಿ ಅನುದಾನದಲ್ಲಿ ನಿರ್ಮಾಣಗೊಂಡ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬೆಳಗಾವಿ ಬಸ್ ನಿಲ್ದಾಣದ ಉದ್ಘಾಟನೆ, ರಾಣಿ ಚನ್ನಮ್ಮ ವಿವಿಯ ಹಿರೇಬಾಗೇವಾಡಿ ಹೊಸ ಆವರಣದಲ್ಲಿ ಪಿ.ಎಂ ಉಷಾ ವಿವಿಧ ಕಟ್ಟಡಗಳ ಹಾಗೂ ರಾಷ್ಟ್ರೀಯ ಹೆದ್ದಾರಿಯಿಂದ ವಿವಿಯ ನೂತನ ಆವರಣಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಕಾಮಗಾರಿಗಳ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು.

ಬರೀ ಆಸ್ಪತ್ರೆ ಕಟ್ಟಡ ಕಟ್ಟಿದರೆ ಸಾಲದು. ಅದಕ್ಕೆ ತಕ್ಕಂತೆ ತಜ್ಞ ವೈದ್ಯರನ್ನೂ ನೇಮಿಸುತ್ತೇವೆ. ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ತೀರ್ಮಾನಿಸಿದ್ದೇವೆ ಎಂದರು. ಸದ್ಯ ಪ್ರಭಾಕರ್ ಕೋರೆ ಅವರ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯ ವೈದ್ಯರು

2ನೇ ಪುಟನೋಡಿ

## ನ. 15 ರಿಂದ ಹೊಸ ಟೋಲ್ ನಿಯಮ



ನವದೆಹಲಿ:ಅ.4:ಕೇಂದ್ರಸರ್ಕಾರ ಫಾಸ್ಟ್‌ಟ್ಯಾಗ್ ಇಲ್ಲದವರಿಗೆ ಒಳ್ಳೆ ಸುದ್ದಿ ನೀಡಿದ್ದು, ನವೆಂಬರ್ 15 ರಿಂದ, ಫಾಸ್ಟ್‌ಟ್ಯಾಗ್ ಇಲ್ಲದ ವಾಹನಗಳ ಮಾಲೀಕರು ದುಪ್ಪಟ್ಟು ಹಣ ಪಾವತಿಸಬೇಕಾಗಿಲ್ಲ.

ಕೇಂದ್ರಸರ್ಕಾರ ಫಾಸ್ಟ್‌ಟ್ಯಾಗ್ ಇಲ್ಲದವರು ದುಪ್ಪಟ್ಟು ಹಣ ಪಾವತಿಸಬೇಕು ಎಂಬ ನಿಯಮವನ್ನು ಸಡಿಲಿಸಿದ್ದು, ನಗದು ರೂಪದಲ್ಲಿ ಪಾವತಿ ಆಯ್ಕೆ ಮಾಡಿಕೊಂಡರೆ ಟೋಲ್ ಶುಲ್ಕವನ್ನು ದುಪ್ಪಟ್ಟು ಪಾವತಿಸಬೇಕಾಗುತ್ತದೆ. ಆದರೆ UPI ಮೂಲಕ ಪಾವತಿ ಮಾಡಿದರೆ ಶುಲ್ಕದ 1.25 ಪಟ್ಟು ಟೋಲ್ ಪಾವತಿಸಬೇಕಾಗುತ್ತದೆ.

ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯ ರಾಷ್ಟ್ರೀಯ ಹೆದ್ದಾರಿ ಶುಲ್ಕ(ದರಗಳು ಮತ್ತು ಸಂಗ್ರಹದ ನಿರ್ಣಯ) ನಿಯಮಗಳು, 2008 ಅನ್ನು ತಿದ್ದುಪಡಿ ಮಾಡಿದ್ದು, ಫಾಸ್ಟ್‌ಟ್ಯಾಗ್ ಇಲ್ಲದ ಬಳಕೆದಾರರಿಗೆ

2ನೇ ಪುಟನೋಡಿ

## ಮುಂಬೈಗೆ ಸೈಕ್ಲೋನ್ 'ಶಕ್ತಿ'ಯ ಭೀತಿ



ಮುಂಬೈ:ಅ.4: ಅರಬ್ಬಿ ಸಮುದ್ರದಲ್ಲಿ ಶಕ್ತಿ ಚಂಡಮಾರುತ ಅಬ್ಬರ ಹಿನ್ನೆಲೆ ಭಾರತೀಯ ಹವಾಮಾನ ಇಲಾಖೆ ಅ.7ರ ವರೆಗೆ ಮಹಾರಾಷ್ಟ್ರದಲ್ಲಿ ಭಾರೀ ಮಳೆಯ ಎಚ್ಚರಿಕೆ ನೀಡಿದೆ. ಇದು ಮುಂಗಾರು ಬಳಿಕ ಅರಬ್ಬಿ ಸಮುದ್ರದಲ್ಲಿ ಅಪ್ಪಳಿಸುವ ಮೊದಲ ಚಂಡಮಾರುತವಾಗಿದೆ.

ಚಂಡಮಾರುತ ಬೀಸುವ ಹಿನ್ನೆಲೆ ಮುಂಬೈ , ಥಾಣೆ, ಪಾಲ್ಘರ್, ರಾಯಗಡ್, ರತ್ನಗಿರಿ ಮತ್ತು ಸಿಂಧುದುರ್ಗ ಸೇರಿದಂತೆ ಮಹಾರಾಷ್ಟ್ರದ ಹಲವಾರು ಪ್ರದೇಶಗಳಲ್ಲಿ ಭಾರೀ ಮಳೆಯಾಗುವ ನಿರೀಕ್ಷೆಯಿದೆ. ಹವಾಮಾನ ಇಲಾಖೆಯು ಮಹಾರಾಷ್ಟ್ರದ ಒಳಭಾಗಗಳಲ್ಲಿ, ಅದ್ರಲ್ಲೂ ಮುಖ್ಯವಾಗಿ ಪೂರ್ವ ವಿದರ್ಭ ಮತ್ತು ಮರಾಠವಾಡದ ಕೆಲ ಭಾಗಗಳಲ್ಲಿ ಭಾರೀ ಮಳೆಯ ಮುನ್ಸೂಚನೆ ನೀಡಿದೆ. ಉತ್ತರ ಕೊಂಕಣದ ತಗ್ಗು ಪ್ರದೇಶಗಳಲ್ಲಿ ಪ್ರವಾಹ ಉಂಟಾಗುವ ಸಾಧ್ಯತೆಯಿದೆ ಎಂದು ಎಚ್ಚರಿಕೆ ನೀಡಿದೆ.

2ನೇ ಪುಟನೋಡಿ



ಬೆಂಗಳೂರು: ಎಂ.ಎಸ್. ರಾಮಯ್ಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡು ತಮ್ಮ ನಿವಾಸದಲ್ಲಿ ವಿಶ್ರಾಂತಿ ಪಡೆಯುತ್ತಿರುವ ಎಐಸಿಸಿ ಅಧ್ಯಕ್ಷರು , ರಾಜ್ಯಸಭೆಯ ವಿರೋಧ ಪಕ್ಷದ ನಾಯಕರಾಗಿರುವ ಮಲ್ಲಿಕಾರ್ಜುನ ಖರ್ಗೆ ಅವರನ್ನು ಇಂದು ಭೇಟಿ ಮಾಡಿ ಮಾಜಿ ಸಚಿವ ರಾಜಶೇಖರ ಪಾಟೀಲರು ಆರೋಗ್ಯ ವಿಚಾರಿಸಿದರು ಹಾಗೂ ಶೀಘ್ರ ಗುಣಮುಖರಾಗುವಂತೆ ಶುಭ ಕೋರಿದರು. ಈ ಸಂದರ್ಭದಲ್ಲಿ ಎಂಎಲ್‌ಸಿ ಡಾ.ಚಂದ್ರಶೇಖರ ಪಾಟೀಲ, ಮಾಜಿ ಶಾಸಕ ಅರವಿಂದ ಕುಮಾರ ಅರಳಿ ಹಾಗೂ ಇತರ ಮುಖಂಡರು ಉಪಸ್ಥಿತರಿದ್ದರು.




**ಪ್ರಥಮ ಟೆಸ್ಟ್:ವಿಂಡೀಸ್ ವಿರುದ್ಧ ಭಾರತಕ್ಕೆ ಇನ್ನಿಂಗ್ಸ್ ಮತ್ತು 140 ರನ್ ಭರ್ಜರಿ ಜಯ**

# ಗೋರಟಾ ಗ್ರಾಮದ ಲಿಂಗಾಯತ ಸೇವಾದಳದ ಅಧ್ಯಕ್ಷರಾಗಿ ಸುಪ್ರೀತ ಪತಂಗೆ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:–ಅ 4 ಹುಲಸೂರು : ತಾಲೂಕಿನ ಲಿಂಗಾಯತ ಮಹಾಮಠ ಗೋರ್ಟಾ (ಬಿ ) ದಲ್ಲಿ ನಡೆದ ಮರಣವೆ ಮಹಾನವಮಿ ಮಹೋತ್ಸವ ಹಾಗೂ ಕಲ್ಯಾಣ ಕ್ರಾಂತಿ ವಿಜಯೋತ್ಸವ ಕಾರ್ಯಕ್ರಮದಲ್ಲಿ ಪೂಜ್ಯಶ್ರೀ ಪ್ರಭುದೇವ ಮಹಾಸ್ವಾಮೀಜಿ ಲಿಂಗಾಯತ ಸೇವಾದಳದ ಅಧ್ಯಕ್ಷರಾಗಿ ಸುಪ್ರೀತ ಪತಂಗೆ ನೇಮಕ ಮಾಡಿ ಮಾತನಾಡಿದ ಅವರು

ಯುವಕರನ್ನು ಧರ್ಮ ಮಾರ್ಗದ ಕಡೆಗೆ ಕರೆತರಬೇಕೆಂದು ಹಳ್ಳಿ ಹಳ್ಳಿಗಳಲ್ಲಿ ಲಿಂಗಾಯತ ಸೇವಾದಳಗಳನ್ನು ಹುಟ್ಟುಹಾಕಿ ಯುವಕರನ್ನು ಧರ್ಮದ ಮಾರ್ಗದ ಕಡೆಗೆ ಕರೆತರುವ ಕಾರ್ಯ ಈಗಾಗಲೇ ಭರದಿಂದ ಸಾಗುತ್ತಿದೆ ಎಂದು ತಿಳಿಸಿದ ಅವರು ಸೇವಾಧಾರಿಯಾದ ಬಸವನಿಷ್ಠರಾದ ಲಿಂಗಾಯತ ಮಹಾಮಠದ ನಿಷ್ಠಾವಂತ ಕಾರ್ಯಕರ್ತರಾಗಿ ಸೇವೆ ಸಲ್ಲಿಸಿದ ಸುಪ್ರೀತ ಪತಂಗೆಯವರು ಯುವಕರನ್ನು ಪ್ರೇರೇಪಿಸಿ ಧರ್ಮದ ಕಡೆಗೆ ಕರೆತರುವವರೆಂಬ ಭರವಸೆ ತಮಗಿದೆ ಎಂದು ತಿಳಿಸಿದರು.

ಕಾರ್ಯದರ್ಶಿಯಾಗಿ ದರ್ಶನ ಬಿರಾದರ ಅಲ್ಲದೆ

ಸದಸ್ಯರಾಗಿ

ಪ್ರಜ್ವಲ ಪತಂಗೆ.

ವಿಶ್ವ ಚೇತನ ರಾಜೋಳೆ.

ವೈಭವ ಬಿರಾದಾರ.

ಗುರುರಾಜ ಪತಂಗೆ.

ಪ್ರಜ್ವಲ ರಾಜೋಳೆ.

ಶಾಶ್ವತ ರಾಜೇಶ್ವರ್.

ಅಭಿಷೇಕ ರಾಜೋಳೆ

ಸುಜಿತ ರಾಜೇಶ್ವರೆ

ಆಯುಷ್ಯ ಪತಂಗೆ.

ಇವರನ್ನು ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದರು.

# ಮಳೆಯಿಂದ ಅಪಾರ ಹಾನಿ ತುರ್ತು ಪರಿಹಾರಕ್ಕೆ:ಚೆನ್ನಪ್ಪ ಎ. ಹೊಳಕರ್ ಒತ್ತಾಯ



ಮಲ್ಲಮ್ಮನುಡಿವಾರ್ತೆ ಬಸವಕಲ್ಯಾಣ :– ಅ 4 ಸೆಪ್ಟೆಂಬರ್ ತಿಂಗಳಲ್ಲಿ ಕೆಲವು ದಿನಗಳಿಂದ ಸುರಿದ ಭಾರಿ ಪ್ರಮಾಣದ ಮಳೆಯಿಂದ ಸಾಕಷ್ಟು ರೈತರು ತಮ್ಮ ಹೊಲಗಳಲ್ಲಿ ಬೆಳೆದ ಬೆಳೆ ಗಳು ಅಪಾರ ಪ್ರಮಾಣದ ಹಾನಿ ಯಾಗಿದೆ ಎಂದು ಹಾರಕೂಡ ಗ್ರಾಮ ಪಂಚಾಯತ್ ಸದಸ್ಯರಾದ ಚನ್ನಪ್ಪ ಎ. ಹೊಳಕರ್ ಮನವಿ ಮಾಡಿದ್ದಾರೆ. ತಾಲ್ಲೂಕಿನಲ್ಲಿ ಸುಮಾರು ಎರಡು ವಾರಗಳ ಕಾಲ ಎಡೆ ಬಿಡದೆ ಹಾಗೂ ಹಗಲು ರಾತ್ರಿ ಎನ್ನದೆ ಸುರಿದಿರುವ ಭಾರಿ ಪ್ರಮಾಣದ ಮಳೆಯಿಂದಾಗಿ ಬೆಳೆ ಕಳೆದುಕೊಂಡ ರೈತರು ಸಂಕಷ್ಟಕ್ಕೆ ಸಿಲುಕಿದ ರೈತರಿಗೆ ತಕ್ಷಣ ಬೆಳೆ ಪರಿಹಾರ ಕೊಡಬೇಕು ಎಂದು ರಾಜ್ಯ ಸರ್ಕಾರಕ್ಕೆ ಒತ್ತಾಯಿಸಿದ್ದಾರೆ. ಅತಿವೃಷ್ಟಿಯಿಂದ ಬೀದರ ಜಿಲ್ಲೆಯ ರೈತರ ಮಳೆಯಿಂದ ಬೆಳೆ ಹಾನಿಯಾಗಿದೆ ಕೆಲವೆಡೆ ಪ್ರವಾಹದಿಂದಾಗಿ ರೈತರ ಜಮೀನಿನಲ್ಲಿಯ ಫಲವತ್ತಾದ ಮಣ್ಣು ಸಹಿತ ಬೆಳೆಗಳು ಕೊಚ್ಚಿಕೊಂಡು ಹೋಗಿವೆ ಕೆಲವು ಗ್ರಾಮಗಳಲ್ಲಿ ಮನೆಗಳು ನೆಲಸಮಗೊಂಡಿದ್ದು. ಪ್ರವಾಹಕ್ಕೆ ಸಿಲುಕಿ ಧನ ಕರುಗಳು ಪ್ರಾಣ ಕಳೆದುಕೊಂಡಿವೆ ಎಂದರು. ಬೆಳೆ ಕಳೆದುಕೊಂಡ ರೈತರಿಗೆ ಸೂಕ್ತ ಪರಿಹಾರ ಕಲ್ಪಿಸಬೇಕು ಅದೇರಿತಿ ಮಳೆಯಿಂದ ಕುಸಿತ ಗೊಂಡ ಗೋಡೆಗಳ ದುರಸ್ತಿಗೆ ಹಾಗೂ ಮರು ನಿರ್ಮಾಣಕ್ಕೆ ನೆರವು ಕಲ್ಪಿಸಬೇಕು. ಧನ ಕರುಗಳು ಕಳೆದ ಕೊಂಡ ರೈತರಿಗೆ ಪರಿಹಾರ ನೀಡಬೇಕು ಎಂದು ಮನವಿ ಮೂಲಕ ಹಾರಕೂಡ ಗ್ರಾಮ ಪಂಚಾಯತ ಸದಸ್ಯರಾದ ಚೆನ್ನಪ್ಪ ಎ. ಹೊಳಕರ್ ಒತ್ತಾಯಿಸಿದ್ದಾರೆ.

# ದೇಶದ ಅಪಸವ್ಯಗಳಿಗೆ ಲೇಖಕರು ಸ್ಪಂದಿಸಬೇಕು:ಕುಂ.ವೀರಭದ್ರಪ್ಪ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.4–ಬಹಳ ಭಿನ್ನ ಹಾಗೂ ಬಹು ಸಂಸ್ಕೃತಿ ಹಿನ್ನೆಲೆಯ ಬಹುತ್ವ ದೇಶ ನಮ್ಮದಾಗಿದ್ದರೂ ಜಾತಿ ವ್ಯವಸ್ಥೆಯಿಂದಾಗಿ ಮುಟ್ಟಿಸಿಕೊಳ್ಳದ ದೇಶವಾಗಿದ್ದು, ಪರಸ್ಪರ ಸೇರದವರಾಗಿದ್ದೇವೆ. ಈ ಹಿನ್ನೆಲೆಯಲ್ಲಿ ಬಹುತ್ವ ಭಾರತವನ್ನು ಉಳಿಸಿಕೊಳ್ಳುವ ಜವಾಬ್ದಾರಿ ಲೇಖಕರ ಮೇಲಿದೆ ಎಂದು ಹಿರಿಯ ಲೇಖಕ ಕುಂ.ವೀರಭದ್ರಪ್ಪ ಹೇಳಿದರು.

ನಗರದ ಸಕ್ರಿ ಪದವಿ ಪೂರ್ವ ಕಾಲೇಜಿನ ಸರಳಬಾಯಿ ಭಾಗವತ ಸಭಾಭವನದಲ್ಲಿ ಭಾನುವಾರ ಸಾಹಿತಿ ಉಮೇಶ ತಿಮ್ಮಾಪುರ ಅವರ 'ಕಗ್ಗಲ್ಲ ಕ್ರಾಸ್' ಕಥಾಸಂಕಲನ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ನಮ್ಮನ್ನು ಆಳುವ ವ್ಯವಸ್ಥೆ ದಂತಕಥೆಗಳನ್ನು ಸೃಷ್ಟಿಸುತ್ತಿದೆ. ಹೀಗಾಗಿ ದೇವಾಲಯಗಳು ಆಕರ್ಷಕ ಕೇಂದ್ರಗಳಾಗುತ್ತಿವೆ. ದೇವರ ಹೆಸರಿನಲ್ಲಿ, ಕಥೆಗಳ ಹೆಸರಿನಲ್ಲಿ ಜನರನ್ನು ಮೋಸಗೊಳಿಸುವ ವ್ಯವಸ್ಥಿತ ಸಂಚು ನಡೆಯುತ್ತಿದೆ ಎಂದ ವೀರಭದ್ರಪ್ಪ, ದೇಶದ ಅಪಸವ್ಯಗಳಿಗೆ ಲೇಖಕರು ಸ್ಪಂದಿಸದಿದ್ದರೆ ಅಂಥವರು ಲೇಖಕರೇ ಅಲ್ಲ ಎಂದು ಅಭಿಪ್ರಾಯಪಟ್ಟರು.

ಉಮೇಶ ತಿಮ್ಮಾಪುರ ಕಥೆಗಳಲ್ಲಿ ಸರಳತೆಯಿದ್ದು, ಗ್ರಾಮೀಣ ಭಾಷೆಯನ್ನು ಉಳಿಸಿಕೊಳ್ಳುವುದರ ಜೊತೆಗೆ ಭಿನ್ನವಾದ ಬದುಕನ್ನು ಕಟ್ಟಿಕೊಡುವ ಕೆಲಸವನ್ನು ಅವರು ಸಮರ್ಥವಾಗಿ ನಿರ್ವಹಿಸಿದ್ದಾರೆ ಎಂದ ಅವರು, ಗ್ರಾಮೀಣ ಕಥೆಗಾರರು ಹಾದಿಗಳಿಲ್ಲದ ಕಡೆ ಹಾದಿ ಸೃಷ್ಟಿಸುತ್ತಾರೆ. ಕಲ್ಲುಮುಳ್ಳಿನ ನಡುವೆ ಸಾಗುತ್ತಾರೆ ಎಂದರು.

ಎಡಪಂಥೀಯರು, ಅರ್ಬನ್ ನಕ್ಸಲರನ್ನು ಯಾವಾಗ ಜೈಲಿಗೆ ಹಾಕುತ್ತೀರಿ ಎಂದು ಪತ್ರಿಕೆಗಳ ಮೂಲಕ ಕೇಳುವವರು ಈಗ ಹೆಚ್ಚಿದ್ದಾರೆ. ಆದರೆ ನೊಬೆಲ್ ಪುರಸ್ಕೃತರಾದ ಶೇ.70ರಷ್ಟು ಲೇಖಕರು ಎಡಪಂಥೀಯರು ಎಂದು ನೆನಪಿಟ್ಟುಕೊಳ್ಳಬೇಕು ಎಂದು ಕುಂ.ವೀರಭದ್ರಪ್ಪ ಹೇಳಿದರು.

ಕಥೆಗಾರ ಪ್ರಕಾಶ ಖಾಡೆ ಸಂವಿಧಾನ ಪೀಠಿಕೆ ಓದುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಕೃತಿ ಕುರಿತು ಲೇಖಕ ಡಾ.ವೈ. ಎಂ.ಯಾಕೊಳ್ಳಿ ಮಾತನಾಡಿದರು. ವಿದ್ಯಾಪ್ರಸಾರಕ ಮಂಡಳದ ಗೌರವ ಕಾರ್ಯದರ್ಶಿ ಡಾ.ಗಿರೀಶ ಮಾಸೂರಕರ ಅಧ್ಯಕ್ಷತೆ ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಡಾ.ಶೇಖರ ಮಾನೆ, ರಾಜು ನಾಯ್ಕರ ಭಾಗವಹಿಸಿದ್ದರು. ಕಿರಣ ಬಾಳಗೋಳ ಆಶಯ ನುಡಿ ಹೇಳಿದರು. ಕವಿತಾ ಪ್ರಕಾಶನದ ಗಣೇಶ ಅಮೀನಗಡ, ಕೃತಿಕಾರ ಉಮೇಶ ತಿಮ್ಮಾಪುರ ಮಾತನಾಡಿದರು.

ಬಸವಲಿಂಗಯ್ಯ ಮಠಪತಿ ಪ್ರಾರ್ಥನೆ ಹಾಡಿದರು. ಸಕ್ರಿ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯ ಅಶೋಕ ಕಂದಗಲ್ಲ ಸ್ವಾಗತಿಸಿದರು. ಚಂದ್ರಶೇಖರ ದೇಸಾಯಿ ವಂದಿಸಿದರು. ರವಿ ಕಂಗಳ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಅಧ್ಯಕ್ಷ ಪಾಂಡುರಂಗ ಸಣ್ಣಪ್ಪನವರ, ಸಾಹಿತಿಗಳಾದ ಎ.ಎಸ್.ಪಾವಟೆ, ಸಿದ್ಧರಾಮ ಮನಹಳ್ಳಿ, ಗೀತಾ ದಾನಶೆಟ್ಟಿ, ಡಾ.ಎಚ್.ಎಫ್. ಯೋಗಪ್ಪನವರ, ವಿಜಯಲಕ್ಷ್ಮಿ ತಿಮ್ಮಾಪುರ, ಮಹಾಬಳೇಶ ಗುಡಗುಂಟಿ, ಚಾಮರಾಜ ಪಾಟೀಲ, ಪ್ರಶಾಂತ ಹೊಸಮನಿ, ಮೋಹನ ಕಟ್ಟಿಮನಿ, ಎಂ.ಎಸ್.ಶೆಟವಾಜಿ ಇದ್ದರು.

# ರೈತರು ಚನ್ನಾಗಿದ್ದರೆ ನಾವೆಲ್ಲರೂ ಚೆನ್ನಾಗಿರುತ್ತೆವೆ : ಹಾರಕೂಡ ಶ್ರೀ



ಮಲ್ಲಮ್ಮನುಡಿವಾರ್ತೆ ಬಸವಕಲ್ಯಾಣ:– ಅ 4 ತಾಲೂಕಿನ ಸುಕ್ಷೇತ್ರ ಹಾರಕೂಡ ಸಂಸ್ಥಾನ ಹಿರೇಮಠದ ಶ್ರೀ ಚನ್ನ ರೇಣುಕ ಬಸವ ಮಂಟಪದಲ್ಲಿ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರ ದಿವ್ಯ ಸನ್ನಿಧಾನದಲ್ಲಿ ಲಿಂ ಶ್ರೀ ಗುರುಲಿಂಗ ಶಿವಾಚಾರ್ಯರ 56ನೇ ಪುಣ್ಯ ಸ್ಮರಣೋತ್ಸವ ಹಾಗೂ ಶ್ರೀ ಚನ್ನರೇಣುಕ ಬಸವ ಪ್ರಶಸ್ತಿ ಪ್ರಧಾನ ಹಾಗೂ 39ನೇ ಅನುಭಾವ ಪ್ರಚಾರ ಉಪಾನ್ಯಾಸ ಮಾಲೆ ಕಾರ್ಯಕ್ರಮ ಜರುಗಿತು.

ಸಮಾರಂಭದ ಉದ್ಘಾಟನೆ ಹಾಬಾಳ ಟಿ. ಅಭಿಷೇಕರಡ್ಡಿ ದೇಶಮುಖ ನೆರವೇರಿಸಿದರು.

ಅಧ್ಯಕ್ಷತೆ ಶಾಸಕರಾದ ಶರಣು ಸಲಗರ ವಹಿಸಿದ್ದರು.

ಹಾರಕೂಡ ಶ್ರೀಮಠದಿಂದ ನೀಡುವ ಪ್ರತಿಷ್ಠಿತ ರಾಷ್ಟಮಟ್ಟದ ಶ್ರೀ ಚನ್ನ ರೇಣುಕ ಬಸವ ಪ್ರಶಸ್ತಿಯನ್ನು

ನಾಡಿನ ಖ್ಯಾತ ಹಿರಿಯ ಸಾಹಿತಿಗಳಾದ ಶ್ರೀ ಡಾ.ಎಸ್. ಎಮ್. ಹಿರೇಮಠ ಅವರಿಗೆ ಶ್ರೀ ಮಠದ ಪೀಠಾಧಿಪತಿಗಳಾದ ಶ್ರೀ ಷ. ಬ್ರ. ಡಾ. ಚನ್ನವೀರ ಶಿವಾಚಾರ್ಯರು, ಒಂದು ಲಕ್ಷ ನಗದು 2 ತೊಲೆ ಚಿನ್ನದ ಪದಕ ದೊಂದಿಗೆ ಪ್ರಶಸ್ತಿ ಪ್ರಧಾನ ಮಾಡಿ ಆಶೀರ್ವಚನ ನೀಡಿದ ಅವರು ರೈತರು ಚೆನ್ನಾಗಿದ್ದರೆ ಮಾತ್ರ ನಾವೆಲ್ಲರೂ ಚೆನ್ನಾಗಿರಲು ಸಾಧ್ಯ. ಇಂದು ರೈತರು ಬಹಳಷ್ಟು ಕಷ್ಟದಲಿದ್ದಾರೆ ಆದರಿಂದ ಸರ್ಕಾರ ಅವರ ಬೆಳೆಗೆ ಸೂಕ್ತ ಬೆಲೆ ನೀಡಬೇಕು. ಮುಂದಿನ ದಿನಮಾನಗಳಲ್ಲಿ ರೈತರಿಗೆ ಒಳ್ಳೆಯ ದಿನಗಳು ಬರಲಿ ಎಂದು ದೇವರಲ್ಲಿ ವಿಶೇಷವಾಗಿ ಪ್ರಾರ್ಥಿಸಿದರು.. ಈ ಸಂದರ್ಭದಲ್ಲಿ ಕಾಡ ಅಧ್ಯಕ್ಷರಾದ ಬಾಬು ಹೊನ್ನನಾಯಕ. ಪ್ರಮುಖರಾದ ಸುಭಾಷಚಂದ್ರ ನಾಗರಾಳೆ. ಜಗನ್ನಾಥ ಪಾಟೀಲ ಮಂಠಾಳ. ಶಿವರಾಜ ನರಶೆಟೆ. ಬಿ. ಕೆ. ಹಿರೇಮಠ. ಪಿ. ಕೆ. ಹಿರೇಮಠ. ಮಲ್ಲಿನಾಥ ಹಿರೇಮಠ. ಸಿದ್ರಾಮಪ್ಪ ಗುದಗೆ. ಮೇಘರಾಜ ನಾಗರಳೆ. ಶಿವಶರಣಪ್ಪ ಸಿರಿ. ಶರಣ ಭೂಪಾಲ ರೆಡ್ಡಿ. ಡಾ.ಗವಿಸಿದ್ಧಪ್ಪ ಪಾಟೀಲ. ರಾಜಕುಮಾರ ಸಿರಗಾಪುರ. ವೀರಣ್ಣ ಮೂಲಗೆ. ಶರಣಪ್ಪಾ ಬಿರಾದಾರ. ಸಂಜುಕುಮಾರ ದೇಗಾಂವ್. ವೀರಣ್ಣ ದುರ್ಗೆ. ಬಸವರಾಜ ಕುಂಬಾರ. ಸಂದೀಪ್ ಬುಯೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಸುಭಾಷ ಮುರುಡ ಸ್ವಾಗತಿಸಿದರು. ಶಿಕ್ಷಕ ಅಂಬಾರಾಯ ಉಗಾಜಿ ನಿರೂಪಿಸಿದರು. ಹಾಗೂ ಸಿದ್ರಾಮಪ್ಪ ಸ್ವಾಮಿ ಗೋರ್ಟಾ ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು. ಜನಾರ್ದನ ವಾಘಮಾರೆ. ನವಲಿಂಗ ಪಾಟೀಲ. ರಾಜಕುಮಾರ ಹೂಗಾರ. ಗುರುಲಿಂಗಯ್ಯಾ ಹಿತ್ತಲ ಸಿರೂರ ಹಾಗೂ ರಾಜ ಶ್ರೀ ಸ್ವಾಮಿ ಸಾಥ್ ನೀಡಿದರು.

# ಭಕ್ತಾದಿಗಳಿಗೆ ಮೂಲ ಸೌಕರ್ಯ ಕಲ್ಪಿಸಲು ಹಗಲಿರುಳು ಶ್ರಮಿಸುವುದು ನಮ್ಮೆಲ್ಲರ ಕರ್ತವ್ಯ




ಮಲ್ಲಮ್ಮ ನುಡಿ ವಾರ್ತೆ ಬೀದರ: ಅ.4 :ಚಾಂಗಲೇರಾದಲ್ಲಿ ಬೇಡಿ ಬರುವ ಭಕ್ತಾದಿಗಳ ಕಷ್ಟಗಳನ್ನು ಪರಿಹರಿಸಿ ಇಷ್ಟಾರ್ಥಗಳನ್ನು ನೀಡಿ ಹರಸುವ ಜಾಗೃತ ಪೀಠವಾಗಿದೆ. ಕೋಟ್ಯಂತರ ಭಕ್ತರ ಆರಾಧ್ಯ ವೈವವಾಗಿರುವ ವೀರಭದ್ರೇಶ್ವರ ಜಾತ್ರಾ ಮಹೋತ್ಸವಕ್ಕೆ ಬರುವ ಭಕ್ತಾದಿಗಳಿಗೆ ಮೂಲ ಸೌಕರ್ಯ ಕಲ್ಪಿಸಲು ನಾವೆಲ್ಲರೂ ಹಗಲಿರುಳು ಶ್ರಮಿಸುವುದು ನಮ್ಮೆಲ್ಲರ ಕರ್ತವ್ಯ ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಹೇಳಿದರು.

ಬೀದರ್ ದಕ್ಷಿಣ ಕ್ಷೇತ್ರದ ಚಾಂಗಲೇರ ಗ್ರಾಮದ ಸುಪ್ರಸಿದ್ಧ ಚಾಂಗಲೇರ ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ ಚಾಂಗಲೇರಾ, ಚಿಟಗುಪ್ಪ ಅಯ್ಯಪ್ಪಸ್ವಾಮಿ ಹಿರೇಮಠದ ಗುರುಲಿಂಗ ಶಿವಾಚಾರ್ಯರು, ಮರುಳಾರಾಧ್ಯ ಶಿವಾಚಾರ್ಯರ ನೇತೃತ್ವದಲ್ಲಿ ಜಾತ್ರಾ ಮಹೋತ್ಸವದ ಪ್ರಯುಕ್ತ ನಡೆದ ಪೂರ್ವಭಾವಿ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು.

ಸಭೆಯಲ್ಲಿ ಜಾತ್ರೆಯ ಸಿದ್ಧತಾ ಹಾಗೂ ಖರ್ಚು, ವೆಚ್ಚ ಕುಂದು ಕೊರತೆ ಕುರಿತು ಚರ್ಚಿಸಲಾಯಿತು. ಜಾತ್ರಾ ಮಹೋತ್ಸವಕ್ಕೆ ಭಾಗವಹಿಸುವ ಭಕ್ತರಿಗೆ ಸೂಕ್ತ ಸೌಕರ್ಯಗಳನ್ನು ಕಲ್ಪಿಸಿಕೊಡಬೇಕೆಂದು ಪ್ರತಿ ವರ್ಷದಂತೆ ಈ ವರ್ಷವೂ ಸಹ ಸಭೆ ನಡೆಸಲಾಗುತ್ತಿದೆ. ಎಲ್ಲಾ ಗ್ರಾಮಸ್ಥರು, ಭಕ್ತರು ತಮ್ಮ ಅನಿಸಿಕೆಗಳನ್ನು, ಸಲಹೆ ಸೂಚನೆಗಳನ್ನು ಮುಕ್ತವಾಗಿ ತಿಳಿಸಿ ಎಂದರು.

ಹಲವು ಭಾಗಗಳಿಂದ ಹೆಚ್ಚು ಸಂಖ್ಯೆಯಲ್ಲಿ ಭಕ್ತಾಧಿಗಳು ಬರುತ್ತಾರೆ. ಈಗಾಗಲೇ ದೇವಸ್ಥಾನದ ಅನುದಾನ ಹಾಗೂ ನನ್ನ ಅನುದಾನದಲ್ಲಿ ಸೂಕ್ತ ಮೂಲ ಸೌಕರ್ಯ ಒದಗಿಸಲು ಕ್ರಮ ಕೈಗೊಳ್ಳಲಾಗಿದೆ. ಶುದ್ಧ ಕುಡಿಯುವ ನೀರಿನ ಪೂರೈಕೆಗೆ ಮಾಡಲಾಗಿರುವ ವ್ಯವಸ್ಥೆಗಳ ಬಗ್ಗೆ, ಶೌಚಾಲಯ ಸೇರಿದಂತೆ ದೇವಸ್ಥಾನದಲ್ಲಿ ಸ್ವಚ್ಛತೆಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ತುರ್ತು ಸಂದರ್ಭಗಳಲ್ಲಿ ಅವಶ್ಯಕತೆ ಇರುವ ಕಡೆ ನೆರಳಿಗೆ ಸೂಕ್ತ ಕ್ರಮವಹಿಸಬೇಕು. ಸ್ನಾನಘಟ್ಟದಲ್ಲಿ ನೈರ್ಮಲ್ಯ ಕಾಪಾಡಿಕೊಳ್ಳಬೇಕು. ಕಾಯಂ ಶೌಚಗೃಹ ಜತೆಗೆ ತಾತ್ಕಾಲಿಕ ಶೌಚಗೃಹಗಳ ವ್ಯವಸ್ಥೆ ಸಹ ಮಾಡಬೇಕು. ಸ್ನಾನ ಗೃಹ ಹಾಗೂ ಶೌಚಗೃಹಗಳ ನಿರಂತರ ಸ್ವಚ್ಛತೆಗೆ ಸಿಬ್ಬಂದಿ ನಿಯೋಜಿಸಬೇಕು ಎಂದು ತಿಳಿಸಿದರು.

ನಿತ್ಯ ದಾಸೋಹದ ಜತೆಗೆ ವಿಶೇಷ ದಾಸೋಹ ಇರಬೇಕು. ಇದಕ್ಕೆ ಪೂರಕವಾದ ಎಲ್ಲ ವ್ಯವಸ್ಥೆಗಳನ್ನು ಪೂರ್ಣಗೊಳಿಸಬೇಕು. ವಿವಿಧ ಭಾಗಗಳಿಂದ ಹೆಚ್ಚು ಸಂಖ್ಯೆಯಲ್ಲಿ ಕೆಕೆಆರ್‌ಟಿಸಿ ಬಸ್ಸುಗಳ ಕಾರ್ಯಾಚರಣೆಯಾಗಬೇಕು. ಬಸ್ಸುಗಳ ಸಂಖ್ಯೆ ಹೆಚ್ಚಳವಾಗಬೇಕು ಎಂದು ಸೂಚಿಸಲಾಯಿತು. ಭಕ್ತಾದಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಸಮರ್ಪಕವಾಗಿ ಇರಬೇಕು. ಪ್ಲಾಸ್ಟಿಕ್ ನಿಷೇಧದ ಬಗ್ಗೆ ಭಕ್ತರಿಗೆ ಮನವರಿಕೆ ಮಾಡಿಕೊಡಬೇಕು ಎಲ್ಲಾ ಸ್ಥಳಗಳಲ್ಲಿ ಡಸ್ಟ್ ಬೀನ್ ಅಳವಡಿಸಬೇಕು. ಚಾಂಗಲೇರಾ ಗ್ರಾಮಕ್ಕೆ ಆಗಮಿಸಲು ಎಲ್ಲ ಕಡೆಗಳಿಂದಲ್ಲೂ ಬಸ್ ಸೌಕರ್ಯ ವಿದ್ದು, ಜಾತ್ರೆ ವಿಶೇಷವಾಗಿ ಕೆಕೆಆರ್ ಟಿಸಿ ಸಂಸ್ಥೆ ವಿಶೇಷ ಬಸ್ ಸಂಚಾರ ಆರಂಭಿಸಬೇಕು.

ಪೊಲೀಸ ವ್ಯವಸ್ಥೆ: ಜಾತ್ರಾ ಮಹೋತ್ಸವದಲ್ಲಿ ಭಕ್ತಾದಿಗಳಿಗೆ ತೊಂದರೆಯಾಗದಂತೆ ಹೆಚ್ಚಿನ ನಿಗಾ ವಹಿಸಲು ಹೆಚ್ಚಿನ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಬೇಕು ಎಂದು ಪಿಎಸ್ಐ ಅವರಿಗೆ ಸೂಚಿಸಿದರು. ದಿ. ನ. 3ರಂದು ಥೇರ ಕಳಸಾರೋಹಳ, ದಿ. 4 ಅಗ್ನಿ ಪೂಜೆ, ನೈವೇದ್ಯ, ಸಂಗೀತ ದರ್ಬಾರ, ದಿ. 5 ಅಗ್ನಿ ಪ್ರವೇಶ ಹಾಗೂ 11 ಗಂಟೆಗೆ ರತೋತ್ಸವ ಪ್ರಾರಂಭವಾಗಲಿದೆ. ಈ ಸಂದರ್ಭದಲ್ಲಿ ತಹಶೀಲ್ದಾರ ಮಂಜುನಾಥ ಪಾಂಚಾಳ, ದೇವಸ್ಥಾನ ಅಧಿಕಾರಿ ಅನಂತರಾವ ಕುಲಕರ್ಣಿ, ಪಿಎಸ್ಐ ನಿಂಗಪ್ಪ, ಮುಖಂಡರಾದ ಮಾಣಿಕಪ್ಪ ಖಾಶೆಂಪುರ, ರಾಮಲು ಮಂತ್ರಿ, ವಿಜಯಕುಮಾರ ವಾಲಿ, ವಿಜಯಕುಮಾರ ಕಾರಕಂಪಳ್ಳಿ, ಅಶೋಕ ರೆಡ್ಡಿ, ಲಾಲಪ್ಪ, ಸೂರ್ಯಕಾಂತ, ರವಿಕುಮಾ, ಸುಭಾಷ, ಸಣ್ಮುಕಪ್ಪ, ಜಗನ್ನಾಥ ಮಜಗೆ, ಕರಬಸಯ್ಯಾ ಮಠ, ರಾಜಶೇಖರ್, ದೇವೀಂದ್ರ, ತುಕಾರಾಮ, ಜಗನ್ನಾಥ, ರಮೇಶ, ಅಂಬ್ರೀಷ್, ರಾಜಶೇಖರ್ ವಿವಿಧ ಇಲಾಖೆ ಅಧಿಕಾರಿಗಳು ಮತ್ತಿತರರು ಉಪಸ್ಥಿತರಿದ್ದರು.

# ಮೃತ ಶಿಕ್ಷಕಿ ಕುಟುಂಬಕ್ಕೆ 1 ಕೋಟಿ ರೂ.ಪರಿಹಾರಕ್ಕೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.4–ಸಾಮಾಜಿಕ, ಶೈಕ್ಷಣಿಕ ಗಣತಿ ಕಾರ್ಯ ಮುಗಿಸಿ ಮನೆಗೆ ತೆರಳುತ್ತಿರುವಾಗ ಅಪಘಾತದಲ್ಲಿ ಮೃತಪಟ್ಟ ಶಿಕ್ಷಕಿ ದಾನಮ್ಮ ನಂದರಗಿ ಕುಟುಂಬಕ್ಕೆ 1 ಕೋಟಿ ರೂ.ಗಳ ಪರಿಹಾರ ನೀಡಬೇಕು ಎಂದು ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಜಿಲ್ಲಾ ಸಂಘಟನೆ ಶನಿವಾರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿತು. ಸಂಘಟನೆಯ ಪದಾಧಿಕಾರಿಗಳು ಜಿಲ್ಲಾಧಿಕಾರಿಗಳ ಕಚೇರಿಗೆ ತೆರಳಿ ಅಪರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ, ಗಣತಿ ಸಮಯದಲ್ಲಿ ಒತ್ತಡದಿಂದಾಗಿ ಇಲ್ಲವೇ ಅಪಘಾತಕ್ಕೆ ಒಳಗಾಗಿ ಅನೇಕ ಶಿಕ್ಷಕರು ಸಾವಿಗೀಡಾದ ಘಟನೆಗಳು ನಡೆಯುತ್ತಿವೆ. ಶುಕ್ರವಾರ ಗಣತಿ ಮುಗಿಸಿ ಬಾಗಲಕೋಟೆಗೆ ತೆರಳುವಾಗ ರಸ್ತೆ ಅಪಘಾತದಲ್ಲಿ ರಾಂಪುರ ಶಾಲೆಯ ಶಿಕ್ಷಕಿ ದಾನಮ್ಮ ನಂದರಗಿ ಮೃತಪಟ್ಟಿದ್ದು, ಅವರ ಕುಟುಂಬಕ್ಕೆ ಪರಿಹಾರ ಒದಗಿಸಬೇಕು ಎಂದು ಹೇಳಿದರು. ಹಿಂದೆ ನಾಗಮೋಹನದಾಸ್ ಒಳಮೀಸಲಾತಿ ಸಮೀಕ್ಷೆ ಸಂದರ್ಭದಲ್ಲಿ ಇಂತಹ ಘಟನೆಗಳು ಸಂಭವಿಸಿದ್ದು ಸಮಾಜ ಕಲ್ಯಾಣ ಇಲಾಖೆಯ ಆಯುಕ್ತರು ಮೃತರ ಕುಟುಂಬಕ್ಕೆ ಪರಿಹಾರ ನೀಡಿದ್ದು, ಈಗಲೂ ಶಿಕ್ಷಕಿ ಕುಟುಂಬಕ್ಕೆ 1 ಕೋಟಿ ರೂ. ಪರಿಹಾರ ನೀಡಬೇಕು ಎಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಅಧ್ಯಕ್ಷ ಬಸವರಾಜ ಬಾಗೇನವರ, ಪ್ರಧಾನ ಕಾರ್ಯದರ್ಶಿ ಗೌಸಮೋಹಿದ್ದೀನ ಮುಲ್ಲಾ, ಎಸ್.ಸಿ, ಎಸ್.ಟಿ ಶಿಕ್ಷಕರ ಸಂಘದ ಜಿಲ್ಲಾ ಅಧ್ಯಕ್ಷ ಲಕ್ಷ್ಮಣ ಯಂಕಂಚಿ, ಶಿಕ್ಷಕರ ಸಂಘದ ತಾಲ್ಲೂಕು ಅಧ್ಯಕ್ಷ ಯೋಗಾನಂದ ಕಿರಸೂರ, ಕಾರ್ಯದರ್ಶಿ ಹುಚ್ಚೇಶ ಲಾಯದಗುಂದಿ, ಎಚ್.ಟಿ.ಕೊಡ್ಡಣ್ಣವರ, ಎಲ್.ಎಸ್.ಕಾಯಿ, ಎ.ಎಂ.ಮೋಮಿನ ಮತ್ತಿತರರು ಇದ್ದರು.

# ಅ.7 ರಂದು ಬಾಗಲಕೋಟೆಯಲ್ಲಿ ವಾಲ್ಮೀಕಿ ಜಯಂತಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.4–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಸಮಾಜ ಕಲ್ಯಾಣ ಇಲಾಖೆ, ನಗರಸಭೆ ಬಾಗಲಕೋಟೆ ಹಾಗೂ ಮಹರ್ಷಿ ವಾಲ್ಮೀಕಿ ಸಮಾಜ ಮತ್ತು ವಿವಿಧ ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಅಕ್ಟೋಬರ 7 ರಂದು ಆಚರಿಸಲಾಗುತ್ತಿದೆ.

ಅಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾಡಳಿತ ಭವನದಲ್ಲಿ ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಮೆರವಣಿಗೆಗೆ ಚಾಲನೆ ನೀಡಲಾಗುತ್ತದೆ. ಮೆರವಣಿಗೆ ಎಲ್.ಐಸಿ ಕಚೇರಿ, ಎಸ್.ಪಿ ಕಚೇರಿ ಮುಖಾಂತರ ಮಹರ್ಷಿ ವಾಲ್ಮೀಕಿ ಭವನಕ್ಕೆ ಮುಕ್ತಾಯಗೊಳ್ಳಲಿದೆ. ನಂತರ 10 ಗಂಟೆಗೆ ವೇದಿಕೆ ಕಾರ್ಯಕ್ರಮ ವಾಲ್ಮೀಕಿ ಭವನದಲ್ಲಿ ನಡೆಯಲಿದ್ದು, ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಕಾರ್ಯಕ್ರಮ ಉದ್ಘಾಟಿಸಲಿದ್ದು, ಅಧ್ಯಕ್ಷತೆಯನ್ನು ಶಾಸಕ ಎಚ್. ವಾಯ್.ಮೇಟಿ ವಹಿಸುವರು.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಪ್ರಕಾಶ ಹುಕ್ಕೇರಿ, ಬೀಳಗಿ ಶಾಸಕ

ಜೆ.ಟಿ.ಪಾಟೀಲ, ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ, ಸಂಸದ ಪಿ.ಸಿ.ಗದ್ದಿಗೌಡರ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಸೇರಿದಂತೆ ವಿಧಾನ ಸಭೆ, ವಿಧಾನ ಪರಿಷತ್ ಶಾಸಕರು, ಹಾಗೂ ಇತರೆ ಗಣ್ಯಮಾನ್ಯರು ಆಗಮಿಸಲಿದ್ದಾರೆ. ಧಾರವಾಡ ವಿದ್ಯಾರಣ್ಯ ಪದವಿ ಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯೆ ಡಾ.ಶರಣಮ್ಮ ಗೋರೇಬಾಳ ಉಪನ್ಯಾಸ ನೀಡಲಿದ್ದಾರೆ.

# ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಜಿಲ್ಲಾ ಅಧ್ಯಕ್ಷರಾಗಿ ಅನಿಲಕುಮಾರ ನೇಮಕ

ಮಲ್ಲಮ್ಮನುಡಿವಾರ್ತೆ ಬಾಗಲಕೋಟೆ,ಅ.4– ಜಿಲ್ಲೆಯ ಬಾದಾಮಿ ತಾಲೂಕಿನ ಅನಿಲಕುಮಾರ ದಡ್ಡಿ ಬಾಗಲಕೋಟೆ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗೆ ಅಧ್ಯಕ್ಷರಾಗಿ ನೇಮಕಗೊಂಡಿದ್ದಾರೆ. ಡಾ.ಎಚ್. ಎಚ್.ತೆಕ್ಕೆನ್ನವರ ನಿಧನದಿಂದಾಗಿ



ತೆರವಾಗಿದ್ದ ಅಧ್ಯಕ್ಷ

ಸ್ಥಾನಕ್ಕೆ ರಾಜ್ಯದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ವಿಮಲಾಕ್ಷಿ ಅವರು ಅನಿಲಕುಮಾರ ದಡ್ಡಿ ಅವರನ್ನು ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

# ಅ.6 ಹಿರಿಯ ನಾಗರಿಕರ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.4–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಜಿಲ್ಲಾ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಲ್ಲಿ ಅಕ್ಟೋಬರ 6 ರಂದು ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಅಂದು ಬೆಳಿಗ್ಗೆ 10 ಗಂಟೆಗೆ ನವನಗರದ ಡಾ.ಬಿ.ಆರ್. ಅಂಬೇಡ್ಕರ ಭವನದಲ್ಲಿ ಜರುಗುವ ಕಾರ್ಯಕ್ರಮವನ್ನು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಕಾರ್ಯಕ್ರಮವನ್ನು ಉದ್ಘಾಟಿಸುವರು. ಶಾಸಕ ಎಚ್. ವಾಯ್.ಮೇಟಿ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಪ್ರಕಾಶ ಹುಕ್ಕೇರಿ, ಬೀಳಗಿ ಶಾಸಕ ಜೆ.ಟಿ.ಪಾಟೀಲ, ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ, ಸಂಸದ ಪಿ.ಸಿ.ಗದ್ದಿಗೌಡರ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಸೇರಿದಂತೆ ವಿಧಾನ ಸಭೆ, ವಿಧಾನ ಪರಿಷತ್ ಶಾಸಕರು, ಹಾಗೂ ಇತರೆ ಗಣ್ಯಮಾನ್ಯರು ಆಗಮಿಸಲಿದ್ದಾರೆ.

# ನಾಡಿನ ಕಲೆ, ಪರಂಪರೆಗೆ ಶರಣಸಿರಸಗಿ ಕೊಡುಗೆ ಅಪಾರ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಅ.4:ಶರಣಸಿರಸಗಿ ಗ್ರಾಮವು ಪುರಾತನ ನಂದಿ ಬಸವಣ್ಣ, ಮಲ್ಲಿಕಾರ್ಜುನ,ಗಣೇಶ,ಹನುಮಾನ ದೇವಸ್ಥಾನ, ವೀರಗಲ್ಲುಗಳನ್ನು ಹೊಂದಿವೆ. ಇಲ್ಲಿನ ಕಲೆ,ಪರಂಪರೆ ಪ್ರಮುಖವಾಗಿದೆ. ಮಹಾದಾಸೋಹಿ ಶ್ರೀ ಶರಣಬಸವೇಶ್ವರರು ಮೆಟ್ಟಿದ ಪವಿತ್ರ ಭೂಮಿ ಇದಾಗಿದೆ ಎಂದು ಸಂಶೋಧಕ–ಸಾಹಿತಿ ಮುಡುಬಿ ಗುಂಡೇರಾವ ಅಭಿಮತ ವ್ಯಕ್ತಪಡಿಸಿದರು.

ತಾಲೂಕಿನ ಶರಣಸಿರಸಗಿ ಗ್ರಾಮದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗುತ್ತಿರುವ ಜಿಲ್ಲೆಯ ಐತಿಹಾಸಿಕ ಸ್ಮಾರಕಗಳ ಪರಿಚಯಾತ್ಮಕ–40ರ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿ ಅವರು

ಮಾತನಾಡುತ್ತಿದ್ದರು.

ಜ ಪ್ರಾಚೀನ ಕಾಲದಲ್ಲಿ ಈ ಗ್ರಾಮವು ಕಲೆ, ಸಾಹಿತ್ಯ, ಸಂಗೀತ, ಧರ್ಮ, ಆಧ್ಯಾತ್ಮಿಕತೆ,ಶಿಕ್ಷಣ ಕ್ಷೇತ್ರಕ್ಕೆ ಅಪಾರವಾದ ಕೊಡುಗೆಯನ್ನು ನೀಡಿದೆ. ಜೈನ ತೀರ್ಥಂಕರ ಮೂರ್ತಿ, ಶಿವನ ವಿಗ್ರಹ, ವೀರಗಲ್ಲು ಸೇರಿದಂತೆ ಮುಂತಾದ ಐತಿಹಾಸಿಕ ಕುರುಹುಗಳು ನಾಡಿನ ಇತಿಹಾಸವನ್ನು ಸಾರುತ್ತವೆ. ಇವುಗಳ ಸಂರಕ್ಷಣೆ ಮಾಡಬೇಕು ಎಂದರು.

ಕಾರ್ಯಕ್ರಮದಲ್ಲಿ ಬಳಗದ ಅಧ್ಯಕ್ಷ ಎಚ್.ಬಿ.ಪಾಟೀಲ್,ಗ್ರಾಮಸ್ಥರಾದ ಗುರುಬಸಪ್ಪ ಅವರಾದ, ಜಗದೀಶ ಗುತ್ತೇದಾರ, ಶರಣು, ಮಾದೇಶ್, ಸಿದ್ಧಾರೂಡ, ಶಿವು, ಜೈಪ್ರಕಾಶ ಸೇರಿದಂತೆ ಇನ್ನಿತರರಿದ್ದರು.



ಕಲಬುರಗಿ:ಜಿಲ್ಲಾಡಳಿತ, ಪ್ರವಾಸೋದ್ಯಮ ಇಲಾಖೆ ಹಾಗೂ ಕನ್ನಡ ಸಾಹಿತ್ಯ ಪರಿಷತ್ತು ಕಲಬುರಗಿ ಘಟಕ ಸಹಯೋಗದೊಂದಿಗೆ ವಿಶ್ವ ಪ್ರವಾಸೋದ್ಯಮ ದಿನಾಚರಣೆ 2025 ಕಲಬುರಗಿ ಜಿಲ್ಲೆಯ ಪ್ರವಾಸಿ ತಾಣಗಳ ಛಾಯಾಚಿತ್ರ ಪ್ರದರ್ಶನವನ್ನು ಕಲಾಸೌಧ ಭವನದಲ್ಲಿ ಆಯೋಜಿಸಲಾಗಿತ್ತು. ಜಿಲ್ಲಾ ಪ್ರವಾಸೋದ್ಯಮ ಇಲಾಖೆ ಜಂಟಿ ನಿರ್ದೇಶಕ ತಿಪ್ಪೇಸ್ವಾಮಿ ಅವರು ಹಿರಿಯ ಛಾಯಾಗ್ರಾಹಕ ಚಂದ್ರಶೇಖರ ಬ್ಯಾಕೋಡ ಸನ್ಮಾನಿಸಿ ಕಾಣಿಕೆ ನೀಡಿದರು.ಛಾಯಾಚಿತ್ರ ಪ್ರದರ್ಶನ ಸಂಚಾಲಕ ಮಹ್ಮದ ಅಯ್ಯಾಜುದ್ದೀನ ಪಟೇಲ್, ಖಾಜಿ ರಿಜವಾನ್ ಸಿದ್ದಕಿ, ಪ್ರವಾಸೋದ್ಯಮ ಉಪನಿದೇಶಕಿ ಬೇಬಿ ಮೊಗೆರ ಉಪಸ್ಥಿತರಿದ್ದರು.

# ಅಳಿವಿನಂಚಿನ ವನ್ಯಜೀವಿಗಳ ಉಳಿಸುವ ಕಾರ್ಯವಾಗಲಿ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಅ.4:ಮಾನವ ತನ್ನ ಸ್ವಾರ್ಥಕ್ಕಾಗಿ ಅರಣ್ಯವನ್ನು ನಾಶಮಾಡಿ ಅಲ್ಲಿನ ಅನೇಕ ವನ್ಯಜೀವಿಗಳನ್ನು ಬೇಟೆಯಾಡಿ ನಾಶಮಾಡುತ್ತಿದ್ದಾನೆ. ಇದರಿಂದ ಕೆಲವು ಸಂತತಿ ನಾಶಹೊಂದಿದ್ದು, ಮತ್ತೆ ಕೆಲವು ಅಳಿವುನಂಚಿನಲ್ಲಿವೆ. ಅರಣ್ಯ ಸಂಪತ್ತು, ಪ್ರಾಣಿ ಸಂಕುಲದ ರಕ್ಷಣೆ ಅಗತ್ಯವಾಗಿದೆ ಎಂದು ವಲಯ ಅರಣ್ಯ ಅಧಿಕಾರಿ ನಾಗೇಶ್ ಹೇಳಿದರು. ನಗರದ ಪಬ್ಲಿಕ್ ಸಾರ್ವಜನಿಕ ಉದ್ಯಾನವನದಲ್ಲಿರುವ 'ಕಿರು ಮೃಗಾಲಯ'ದಲ್ಲಿ 'ಅರಣ್ಯ ಇಲಾಖೆ','ಕಿರು ಮೃಗಾಲಯ ಮತ್ತು ಮಕ್ಕಳ ಉದ್ಯಾನವನ' ಮತ್ತು 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಶನಿವಾರ ಜರುಗಿದ '71ನೇ ವಿಶ್ವ ವನ್ಯಜೀವಿ ಸಪ್ತಾಹ' ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.



ಉಪನ್ಯಾಸಕ, ಪರಿಸರ ಪ್ರೇಮಿ ಎಚ್.ಬಿ.ಪಾಟೀಲ್ ಮಾತನಾಡಿ, ಪರಿಸರದ ಜೈವಿಕ ವ್ಯವಸ್ಥೆಯ ಸರಪಣಿಯಲ್ಲಿ ಒಂದು ಯಾವುದೇ ಜೀವಿಯ ಸಂತತಿ ನಾಶವಾದರೆ ಅದರ ನೇರ ಪರಿಣಾಮದ ಪರಿಸರದ ಮೇಲಾಗಿ,ಅಸಮತೋಲನೆಯಾಗುತ್ತದೆ. ಆದ್ದರಿಂದ ಸಸ್ಯ ಸಂಪತ್ತು, ಪ್ರಾಣಿ ಸಂಪತ್ತು,ವನ್ಯಜೀವಿಗಳ ಸಂರಕ್ಷಣೆ ಮಾಡುವುದರಿಂದ ಪರಿಸರ ಸಮತೋಲನ ಕಾಪಾಡಲು ಸಾಧ್ಯವಿದೆ. ವನ್ಯಜೀವಿಗಳು ಜೀವ ವೈವಿಧ್ಯತೆಯನ್ನು ಕಾಪಾಡುತ್ತವೆ. ಜೀವಿಗಳ ನಾಶಗಳನ್ನು ತಡೆಗಟ್ಟುತ್ತವೆ. ಪ್ರವಾಸೋದ್ಯಮದ ಮೂಲಕ ಆರ್ಥಿಕ ಬೆಳವಣಿಗೆಯಾಗುತ್ತದೆ. ವನೀಕರಣಕ್ಕೆ ಉತ್ತೇಜನಕಾರಿಯಾಗಿವೆ ಎಂದರು.

ಕಾರ್ಯಕ್ರಮದಲ್ಲಿ ಉಪವಲಯ ಅರಣ್ಯ ಅಧಿಕಾರಿ ಜಟ್ಟೆಪ್ಪ ನಾವಿ, ಅರಣ್ಯ ರಕ್ಷಕ ಕಾಂತಪ್ಪ ಪೂಜಾರಿ, ಅರಣ್ಯ ವೀಕ್ಷಕಿ ಶಿವಲೀಲಾ ತೆಗನೂರ್, ಪ್ರಾಣಿ ಪಾಲಕರಾದ ಅಂಬಿಕಾ, ಮಲ್ಲಮ್ಮ,ಶರಣಬಸಪ್ಪ,ಪ್ರಮುಖರಾದ ಮಲ್ಲಿಕಾರ್ಜುನ ಕಿಣ್ಣಿ ಸುಲ್ತಾನ್, ವಿಕ್ರಾಂತ್, ವಿಕಾಸ, ರತಿಕಾಂತ ಸೇರಿದಂತೆ ವಿವಿಧ ಪ್ರದೇಶಗಳ ಮಕ್ಕಳು,ನಾಗರಿಕರು ಭಾಗವಹಿಸಿದ್ದರು.

# ದೌರ್ಜನ್ಯದಿಂದ ಮೃತಪಟ್ಟ ಎಸ್ಸಿ ಎಸ್ಟಿ ಕುಟುಂಬದ

## ಅವಲಂಬಿತರಿಗೆ ಸ್ಪಂದನೆ ನೀಡಲು ಜಿಲ್ಲಾಧಿಕಾರಿಗಳ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರುಅ.04:ದೌರ್ಜನ್ಯದಿಂದ ಮೃತಪಟ್ಟ ಪ್ರಕರಣಗಳಲ್ಲಿ ಮೃತರ ಕುಟುಂಬದ ಅವಲಂಬಿತರಿಗೆ ಸರ್ಕಾರದಿಂದ ನಿಯಮಾನುಸಾರ ಕೆಲವು ಸೌಲಭ್ಯಗಳು ಸಿಗುತ್ತವೆ ಎಂಬುದು ಬಹುತೇಕ ಜನತೆಗೆ ಅರಿವಿಲ್ಲ. ಆಯಾ ತಾಲೂಕಿನ ಅಧಿಕಾರಿಗಳು ಅಂತಹ ಕುಟುಂಬದ ಅವಲಂಬಿತರು, ಸಂತ್ರಸ್ತರಿಗೆ ಭೇಟಿ ಮಾಡಿ ಅವರಿಗೆ ಸ್ಪಂದನೆ ನೀಡಬೇಕು ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅ.4ರಂದು ನಡೆದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ದೌರ್ಜನ್ಯ ನಿಯಂತ್ರಣ ಜಿಲ್ಲಾ ಮಟ್ಟದ ಜಾಗೃತಿ ಮತ್ತು ಮೇಲುಸ್ತುವಾರಿ ಸಮಿತಿ ಸಭೆಯಲ್ಲಿ ಅವರು ಮಾತನಾಡಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರು ದೌರ್ಜನ್ಯಕ್ಕೊಳಗಾಗಿ ಮೃತಪಟ್ಟಿದ್ದಾರೆ ಎಂಬುದು ಸಾಬೀತಾದಲ್ಲಿ ಅಂತಹ ಪ್ರಕರಣದಲ್ಲಿ ಮೃತನ/ಳ ಕುಟುಂಬದ ಅವಲಂಬಿತರು,ಸಂತ್ರಸ್ಥರಿಗೆ ಪರಿಹಾರ ಮತ್ತು ಸರ್ಕಾರಿ ನೌಕರಿ ಸಿಗುತ್ತದೆ ಎಂಬುದಾಗಿ ಅಧಿಕಾರಿಗಳು, ಮೃತರ ಕುಟುಂಬದ ಸಂತ್ರಸ್ಥರಿಗೆ ತಿಳಿಸಿ, ಮನವರಿಕೆ ಮಾಡಿ ಅವರಿಗೆ ದಾಖಲಾತಿ ಸಿದ್ದಪಡಿಸಲು, ಸಲ್ಲಿಸಲು ಮಾರ್ಗದರ್ಶನ ಮಾಡಬೇಕು. ಇಂತಹ ಪ್ರಕರಣದಲ್ಲಿ ಚಾರ್ಜಸೀಟ್ ಸಲ್ಲಿಕೆ ವಿಳಂಬವಾಗದಂತೆ ಜಿಲ್ಲಾ ಪೊಲೀಸ್ ಇಲಾಖೆಯ ಜೊತೆಗೆ ಸಮನ್ವಯ ಮಾಡಬೇಕು. ಈ ಬಗ್ಗೆ ಸಮಿತಿಯಲ್ಲಿರುವ ಸದಸ್ಯರು ಸಹ ಗಮನ ಹರಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ರಾಯಚೂರು ಜಿಲ್ಲೆಯಲ್ಲಿ ದಾಖಲಾದ,ದೌರ್ಜನ್ಯ ಪ್ರಕರಣಗಳಿಗೆ ಸಂಬಂಧಿಸಿದಂತೆ ಪ್ರಾದೇಶಿಕ ಆಯುಕ್ತರಿಗೆ ವರದಿ ಸಲ್ಲಿಸಲು ಜಿಲ್ಲಾಧಿಕಾರಿಗಳು, ಸಂಬಂಧಿಸಿದ ಅಧಿಕಾರಿಗಳಿಗೆ ಒಂದು ತಿಂಗಳ ಅವಧಿಯ ಗಡುವು ವಿಧಿಸಿದರು.

ರಾಯಚೂರ ಜಿಲ್ಲೆಯ ವಿವಿಧೆಡೆ ದಾಖಲಾದ ದೌರ್ಜನ್ಯ ಪ್ರಕರಣಗಳಲ್ಲಿ ಪರಿಹಾರ ಸಲ್ಲಿಕೆ ಮತ್ತು ಕೆಲ ಬಾಕಿ ಪ್ರಕರಣಗಳ ಬಗ್ಗೆ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಸಭೆಗೆ ವಿವರಿಸಿದರು.

ಜನತೆಗೆ ಜಾಗೃತಿ ಮೂಡಿಸಿ:ನಗರದ ಹೊರ ವಲಯದಲ್ಲಿ ನಿರ್ಮಾಣ ಹಂತದಲ್ಲಿರುವ ವಿಮಾನ ನಿಲ್ದಾಣದ ಹತ್ತಿರದಲ್ಲಿ ನಿರ್ಮಿಸಲಾಗುತ್ತಿರುವ ವಸತಿ ಸಮುಚ್ಚಯದಲ್ಲಿ ಒಂದು ಮನೆಗೆ ಒಟ್ಟು 9 ಲಕ್ಷ ರೂ ಖರ್ಚಾಗುತ್ತದೆ. ಈ ಪೈಕಿ 3 ಲಕ್ಷ ರೂ.ವನ್ನು ಸರ್ಕಾರವೇ ಭರಿಸುತ್ತದೆ. ಎಸ್ಸಿಎಸ್ಟಿ ಜನರು ಇಂತಹ ವಸತಿ ಯೋಜನೆಯ ಲಾಭ ಪಡೆದುಕೊಳ್ಳಲು ಜನತೆಗೆ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿಗಳು ಸಲಹೆ ಮಾಡಿದರು. ಸ್ಲಂ ಪ್ರದೇಶದಲ್ಲಿ ವಾಸಿಸುವ ಎಸ್ಸಿ ಎಸ್ಟಿ ಜನರಿಗೆ ಈ ವಸತಿ ಯೋಜನೆಯ ಮನೆಗಳು ಸಿಗುವಂತಾಗಬೇಕು ಎಂದು ಸಮಿತಿಯ ಸದಸ್ಯರು ಸಲಹೆ ಮಾಡಿದರು.

ಸ್ಮಶಾನ ಜಾಗ ಸಂರಕ್ಷಿಸಿ: ಎಸ್ಸಿ ಎಸ್ಟಿ ಜನರಿಗೆ ಗುರುತಿಸಿದ ಸ್ಮಶಾನ ಜಾಗದ ಬಗ್ಗೆ ಸಮಿತಿಯ ಸದಸ್ಯರಾದ ರಘುವೀರ ನಾಯಕ ಅವರು ಸಭೆಯಲ್ಲಿ ಪ್ರಸ್ತಾಪಿಸಿದರು. ಸರ್ಕಾರವು ಸ್ಮಶಾನಕ್ಕೆ ಗುರುತಿಸಿದ ಜಮೀನು

ಒತ್ತುವರಿಯಾಗದಂತೆ ಆಯಾ ಕಡೆಗಳಲ್ಲಿ ಸದ್ಯಕ್ಕೆ ಕಾಂಪೌಂಡ್ ನಿರ್ಮಾಣಕ್ಕೆ ಕೂಡಲೇ ಕ್ರಮವಹಿಸಲು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಕಲಿ ಜಾತಿ ಪತ್ರ ಸೃಷ್ಟಿಸಿದರೆ ಕ್ರಮ: ಒಬಿಸಿ, ಎಸ್ಸಿ, ಎಸ್ಟಿ ಯಾರೇ ಇರಲಿ ನೌಕರಿ ಮತ್ತು ಇನ್ನಿತರ ಕೆಲಸಕ್ಕಾಗಿ ಕಾನೂನು ಬಾಹಿರವಾಗಿ ನಕಲಿ ಜಾತಿಪತ್ರ ಸಿದ್ಧಪಡಿಸಿ ಸಲ್ಲಿಸುವುದು ಕಂಡು ಬಂದಲ್ಲಿ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು. ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಗಮನ ಹರಿಸಿ, ಜಾತಿ ಪರಿಶೀಲನಾ ಸಮಿತಿಯಲ್ಲಿಟ್ಟು,ಪ್ರಾಥಮಿಕ ಹಂತದ ಪರಿಶೀಲನೆ ಬಳಿಕ ಸಂಬಂಧಿಸಿದ ವ್ಯಕ್ತಿಗಳ ಹೇಳಿಕೆ ದಾಖಲಿಸಲು ಅವರಿಗೆ ಕೋರ್ಟಗೆ ಹಾಜರಾಗಲು ತಿಳಿಸಲು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪುಟ್ಟಮಾದಯ್ಯ ಎಂ., ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಐಎಎಸ್ ಪ್ರೊಬೆಷನರಿ ಅಧಿಕಾರಿ ಪುರುರಾಜ್ ಸಿಂಗ್,ನಾಮನಿರ್ದೇಶಿತ ಸದಸ್ಯರಾದ ರವೀಂದ್ರ ಜಲ್ದಾರ್, ಕೆ ಇ ಕುಮಾರ, ಹೇಮರಾಜ ಅಸ್ಕಿಹಾಳ,ರವಿಕುಮಾರ ಅಸ್ಕಿಹಾಳ, ಎನ್ ರಘುವೀರ ನಾಯಕ,ಪವನ್ ಕಿಶೋರ ಪಾಟೀಲ, ಬಸವರಾಜ ನಕ್ಕುಂದಿ,ಟಿ ಸುಧಾಮ ಸೇರಿದಂತೆ ವಿವಿಧ ಇಲಾಖೆಗಳ ಇದ್ದರು.

# ತುಂಗಭದ್ರಾ : ಸಿಡಿಲು ಬಡಿದು ಮೃತಪಟ್ಟ ವ್ಯಕ್ತಿಗೆ 5 ಲಕ್ಷ ರೂ ಪರಿಹಾರ ವಿತರಣೆ



ಮಲ್ಲಮ್ಮನುಡಿ ವಾರ್ತೆ ರಾಯಚೂರು ಅ 04:ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಶಾಸಕರಾದ ಬಸನಗೌಡ ದದ್ದಲ್ ಅವರು ಅಕ್ಟೋಬರ್ 4ರಂದು ರಾಯಚೂರು ಗ್ರಾಮೀಣ ಕ್ಷೇತ್ರ ವ್ಯಾಪ್ತಿಯ ತುಂಗಭದ್ರಾ ಗ್ರಾಮಕ್ಕೆ ಭೇಟಿ ನೀಡಿ, ಸಿಡಿಲು ಬಡಿದು ಮೃತಪಟ್ಟ ವ್ಯಕ್ತಿಯ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.

ಗ್ರಾಮದ ದೇವಪ್ಪ ತಂದೆ ನರಸಪ್ಪ ಅವರ ಕುಟುಂಬದವರಿಗೆ ಶಾಸಕರು 5 ಲಕ್ಷ ರೂ. ಪರಿಹಾರದ ಚೆಕ್ ವಿತರಿಸಿದರು.ಈ ಸಂದರ್ಭದಲ್ಲಿ ಬ್ಲಾಕ್ ಅಧ್ಯಕ್ಷರು,ಸುತ್ತಲಿನ ಗ್ರಾಮಗಳ ಹಿರಿಯ ಮುಖಂಡರು, ನಾಮ ನಿರ್ದೇಶಿತ ಸದಸ್ಯರು, ಗ್ರಾಮ ಪಂಚಾಯತ್ ಸದಸ್ಯರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

# ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿಗೆ ಅರ್ಜಿ ಸಲ್ಲಿಸಲು ಅ.14ರವರೆಗೆ ಅವಧಿ ವಿಸ್ತರಣೆ

ರಾಯಚೂರು ಅ 04:ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2025–26ನೇ ಸಾಲಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿಯ ಅವಧಿಯ ಅಕ್ಟೋಬರ್ 14ರವರೆಗೆ ವಿಸ್ತರಿಸಲಾಗಿದೆ.

ವಿದ್ಯಾರ್ಥಿನಿಲಯಕ್ಕೆ ಪ್ರವೇಶ ಬಯಸುವ ಅರ್ಹ ಅಭ್ಯರ್ಥಿಗಳು, ಪ್ರವರ್ಗ–1, 2ಎ, 3ಎ, ಮತ್ತು 3ಬಿ, ಪ.ಜಾ ಮತ್ತು ಪ.ವರ್ಗದ ವೃತ್ತಿಪರ ಪದವಿ ಮತ್ತು ಸ್ನಾತ–ಕೋತ್ತರ ಕೋರ್ಸಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು,ಮತ್ತು ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯದ ಮಿತಿ, ಪ್ರವರ್ಗ–1, ಎಸ್.ಸಿ & ಎಸ್.ಟಿ 2.50 ಲಕ್ಷ ರೂ. ಪ್ರವರ್ಗ– 2ಎ, 2ಬಿ, 3ಎ, 3ಬಿ, ರೂ. 1.00 ಲಕ್ಷ ಹೊಂದಿದ ವಿದ್ಯಾರ್ಥಿಗಳು https://shp.karnataka.gov.in/bcwd ಗೆ ಭೇಟಿನೀಡಿ ಅಕ್ಟೋಬರ್ 14ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇಲಾಖೆಯ ವೆಬ್‌ಸೈಟ್ https://bcwd.karnataka.gov.in ನ್ನು ನೋಡಬಹುದಾಗಿದ್ದು, ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಇ–ಮೇಲ್ ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕ ಮಾಡಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:8050770004, 8050770005ಗೆ ಸಂಪರ್ಕಿಸುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೆಸ್ಕಾಂನಿಂದ ಅ ೦೬ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅ 04 : ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ 01ರ 11 ಕೆವಿ ಹೊಸ ಲಿಂಕ್ ಲೈನ್ ಮಾರ್ಗ ಕಾಮಗಾರಿ ಮತ್ತು ಎಫ್5 ಎಫ್ 8 ಲೋಡ್ ಬೈಫರ್ ಕೇಷನ್ ನಿರ್ವಹಿಸುತ್ತಿರುವ ಪ್ರಯುಕ್ತ ಅಕ್ಟೋಬರ್ 06ರ ಬೆಳಿಗ್ಗೆ 11 ಗಂಟೆಯಿಂದ ಸಂಜೆ 05 ಗಂಟೆವರೆಗೆ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ.

ಅಂದು ಬೆಳಿಗ್ಗೆ 11ಗಂಟೆಯಿಂದ ಏಗನೂರು ಟೆಂಪಲ್, ಆರ್.ಡಿ.ಎ ಲೇಔಟ್,ಕೃಷ್ಣದೇವರಾಯ ಕಾಲೋನಿ, ತಿರುಮಲ ಹಿಲ್ಸ್,ಸುಚಿತ್ರ ಕಾಲೋನಿ, ಆಶೀರ್ವಾದ ಕಾಲೋನಿ, ಟೌನ್ ಶಿಪ್,ನವೋದಯ ಇಂಜಿನೀಯರ್ ಕಾಲೇಜ್, ಸಿದ್ರಾಮಪೂರು, ಅಮರ್ಖೇಡ್ ಲೇಔಟ್, ಲಕ್ಷ್ಮಣ್ ಲೇಔಟ್, ವಿಜಯಲಕ್ಷ್ಮಿ ಲೇಔಟ್, ಯಾಸಿನ್ ಜಿಮ್,ಕೆ.ಎಸ್‌ಆರ್.ಟಿ.ಸಿ ಬಸ್ ಡಿಪೋ–3, ಎ.ಎಮ್. ಇಡೆಂಟಲ್ ಕಾಲೇಜ್, ಮಾಣಿಕ್ ಪ್ರಭು ಲೇಔಟ್, ಮಾಣಿಕ್ ನಗರ, ಸರಕಾರಿ ಪಾಲಿಟೆಕ್ನಿಕ್ ಕಾಲೇಜ್, ಸರಕಾರಿ ಐ.ಟಿ.ಐ ಕಾಲೇಜ್ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:08532–226386,08532–231999ಗೆ ಸಂಪರ್ಕಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ 01ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶೋಷಿತ ಮುಕ್ತ ಸಮಾಜ ನಿರ್ಮಾಣದ ಕನಸುಗಾರ ಹೆಗಡೆ:ಡಾ.ಡಿ.ಜಿ.ಸಾಗರ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಅ.4:ಸರ್ವ ಮಾನವ ಕುಲಕ್ಕೆ ಬುದ್ದನ ತತ್ವ ಸಿದ್ಧಾಂತಗಳು ಆದರ್ಶವಾಗಬೇಕು, ಬುದ್ದನ ಸತ್ಯ ಅರಿವುವಾಗಬೆಕು ಎಂದು ಬುದ್ಧಘೋಷ ದೇವಿಂದ್ರ ಹೆಗಡೆಯವರ ತುಡಿತ ಆವೇಶಭರಿತವಾದ ಹೋರಾಟವಾಗಿತ್ತು, ಅವರು ಶೋಷಿತ ಮುಕ್ತ ಸಮಾಜ ನಿರ್ಮಾಣದ ಕನಸುಗಾರರಾಗಿದ್ದರು ಎಂದು ಕ,ರಾ, ದ,ಸಂ,ಸ ರಾಜ್ಯ ಸಂಚಾಲಕರಾದ ಡಾ,ಡಿ,ಜಿ,ಸಾಗರವರು ಅಭಿಪ್ರಾಯ ವ್ಯಕ್ತಪಡಿಸಿದರು, ಅವರು ಶಹಾಪುರ ನಗರದ ಶುಭಶ್ರೀ ಹೋಟೇಲ್ ಸಭಾಂಗಣದಲ್ಲಿ ನಡೆದ ದಲಿತಪರ ಸಂಘಟನೆಗಳು ಏರ್ಪಡಿಸಲಾದ ಬುದ್ದವಾಸಿ, ದಲಿತ ಸಾಹಿತಿ, ಬುದ್ಧಘೋಷ ದೇವೆಂದ್ರ ಹೆಗಡೆಯವರ ನುಡಿನಮನ ಕಾರ್ಯಕ್ರಮದಲ್ಲಿ ಭಾವ ಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು, ಮುಂದುವರೆದು ಮಾತನಾಡಿದ ಅವರು, ಜಾತಿಗಳ ಸಂಕೋಲೆಯಲ್ಲಿ ಬೌದ್ಧ ಧರ್ಮ ಸಿಲುಕಿಸಿ ಇಂದು ಬುದ್ದನ ತತ್ವಗಳು ಮಾರೆಮಾಚುತ್ತಿವೆ ಎನ್ನುವ ಕೊರಗು ದೇವಿಂದ್ರ ಹೆಗಡೆಯರ ಮನತುಡಿತವಾಗಿತ್ತು. ಎಂದ ಅವರು ಹುಟ್ಟು ಸಾವು ನಡುವೆ ಬದುಕಿಗೆ ಹೆಗಡೆಯವರು ಮಾದರಿಯಾಗಿದ್ದಾರೆ.ಅವರು ಸರ್ಕಾರಿ ನೌಕರಸ್ಥರಾಗಿದ್ದರೂ ಸಮಾಜದ ಕುರಿತು ಆತ್ಮ ವಿಶ್ವಾಸದ ಕಳಕಳಿ ಮಾತ್ರ ಮಾಸಿರಲಿಲ್ಲ ಎಂದು ಡಾ, ಸಾಗರವರು ಹೆಗಡೆಯವರ ಮತ್ತು ತಮ್ಮ ನಡುವಿನ ಬಾಂಧ್ಯವ್ಯ ಕುರಿತು ಮಾರ್ಮಿಕವಾಗಿ ಮಾತನಾಡಿದರು,ಪ್ರತಿ ದಿನ ಪ್ರತಿ ಕ್ಷಣ ಬುದ್ದ ತತ್ವಗಳು ಆಚರಣೆಯಾಗಬೇಕು ಎನ್ನುವ ಭಯಕೆಯಲ್ಲಿ ಹೆಗಡೆಯವರು ದೃಡ ಸಂಕಲ್ಪ ಹೊಂದಿದ್ದರು, ಎಪ್ಪತ್ತರ ದಶಕಗಳಲ್ಲಿ ಹುಟ್ಟಿದ ದಲಿತ ಚಳುವಳಿಯಲ್ಲಿ ಜಾತಿ ಕುಲ ಗೊತ್ರ ಎನ್ನದೆ ಶೋಷಿತ ಸಮಾಜದ ಮುಖಂಡರಿಂದ ಸ್ಥಾಪನೆಗೊಂಡತ್ತು.

ಈ ಡಿ,ಎಸ್,ಎಸ್, ಇಂದು ಡಾ, ಬಾಬಾಸಾಹೇಬ್ ಅಂಬೇಡ್ಕರವರ ಸಂವಿಧಾನಿಕ ಸಿದ್ದಾಂತಗಳ ಮೇಲೆ ಹೋರಾಟ ಮಾಡಿಕೊಂಡು ಇಂದು ರಾಜಕೀಯ ಶೈಕ್ಷಣಿಕ ಶಕ್ತಿಯಾಗಿ ಬೆಳಿಸಿದೆ ಎಂದರು, ಮುಂದಿನ ದಿನಗಳಲ್ಲಿ ಅಹಿಂದ ಶಕ್ತಿ ಒಂದಾಗಿ ಸಂವಿಧಾನ ರಕ್ಷಣೆಗೆ ಮುಂದಾಗಬೇಕಿದೆ ಎಂದು ಅವರು ಕರೆ ನೀಡಿದರು, ಅಗಲಿದ ಬೌದ್ದ ದಮ್ಮ ಅನುಯಾಯಿ ಬುದ್ದಘೋಷ ದೇವಿಂದ್ರ ಹೆಗಡೆಯವರಿಗೆ ಆತ್ಮಕ್ಕೆ ಶಾಂತಿ ಸಿಗಲೆಂದು ಪ್ರಾರ್ಥಿಸಿದರು, ಎಸ್,ಪಿ,ಸುಳ್ಳೆದಸುರೇಶಹಾದಿಮನಿ,ಅಹಿಂದ ಮುಖಂಡರಾದ ತಿಮ್ಮಯ್ಯ ಪುರ್ಲೆ, ಆರ್,ಚೆನ್ನಬಸ್ಸು,,ಡಾ,ಭೀಮಣ್ಣಮೇಟಿ, ಮರೆಪ್ಪ ಪ್ಯಾಟಿ, ಸಣ್ಣ ನಿಂಗಣ್ಣ ನಾಯ್ಕೊಡಿ, ಮರೆಪ್ಪ ಚೆಟ್ಟೆರಕರ್, ಹನುಮೇಗೌಡ ಮರ್ಕಲ್,ಶಿವುಪುತ್ರ ಜವಳಿ,ಭೀಮರಾಯ ಹೋಸಮನಿ, ವೆಂಕಟೇಶ ಹೋಸಮನಿ, ಶರಣು ದೋರನಳ್ಳಿ ಸೈ ಕಾಲಿದ ಡಾ,ಗಾಳೆಪ್ಪ ಪೂಜಾರಿ, ಮಾತನಾಡಿದರು, ದಲಿತ ನೌಕರರ ಸಂಘದ ಜಿಲ್ಲಾ ಅಧ್ಯಕ್ಷರಾದ ಶ್ರೀಶೈಲ್ ಹೋಸಮನಿಯವರು ಪ್ರಾಸ್ತಾವಿಕವಾಗಿ ಮಾತನಾಡಿದರು, ದಲಿತ ಹಿರಿಯ ಮುಖಂಡರಾದ ಮಲ್ಲಿಕಾರ್ಜುನ ಪೂಜಾರಿ ಅಧ್ಯಕ್ಷತೆ ವಹಿಸಿದ್ದರು,ಡಾ,ಭಗವಂತ ಅನುವಾರ, ರಾಹುಲ್ ಹುಲಿಮನಿಯವರು ಮಾಹಾ ಬೋದಿ ಸತ್ವ ಪಂಚ ಶೀಲ ಚರಣ ಮಂತ್ರ ಪಠಣ ಮಾಡಿದರು, ದಲಿತ ಮುಖಂಡರಾದ ನಾಗಣ್ಣ ಬಡಿಗೇರ ಸ್ವಾಗತಿಸಿದರು, ಹೊನ್ನಪ್ಪ ಗಂಗನಾಳರವರು ಕಾರ್ಯಕ್ರಮ ನೀರೂಪಿಸಿದರು, ಮುಖಂಡರಾದ ಮಾಹಾದೇವಪ್ಪ ಸಾಲಿಮನಿ, ಬಸವರಾಜ ತಳವಾರ, ಶುಭಾಶ ತಳವಾರ, ಶೇಖರ ದೋರೆ, ಚಂದ್ರಶೇಖರ ಜಾದವ್, ಅಂಬಣ್ಣ ಜೀವಣಿಗಿ, ಶಿವಲಿಂಗ ಹಸನಾಪುರ, ಭೀಮರಾಯ ಅಂಚೆಸೂಗೂರ, ಸಿದ್ರಾಮಪ್ಪ ಅನುವಾರ, ಗುರುನಾಥ ದೊಡ್ಮನಿ, ಮರೆಪ್ಪ ಕನ್ಯಾಕೊಳೂರ, ಜಯರಡ್ಡಿ ಹೊಸಮನಿ, ಮಾಪಣ್ಣ ಮದ್ದರ್ಕಿ, ಮಾನಪ್ಪ ಹತ್ತಿಗೂಡೂರ, ರಾಮಣ್ಣ ಸಾಧ್ಯಾಪುರ, ಮರೆಪ್ಪ ಜಾಲಿಮೆಂಚಿ, ಮರೆಪ್ಪ ಕ್ರಾಂತಿ, ರಾಮಣ್ಣ ಕಲದೇವನಳ್ಳಿ, ಹೊನ್ನಪ್ಪ ರಸ್ತಾಪುರ, ನಿಜಗುಣ ದೋರನಳ್ಳಿ, ಬಸವರಾಜ ಗುಡಿಮನಿ, ಬಸವರಾಜ ಬಳಬಟ್ಟಿ, ಸೇರಿದಂತೆ ನೂರಾರು ಜನ ಅಭಿಮಾನಿಗಳು ,ಡಿಎಸ್,ಎಸ್, ಕಾರ್ಯಕರ್ತರು ಪಧಾಧಿಕಾರಿಗಳು ಪಾಲ್ಗೊಂಡಿದ್ದರು, ಕೊನೆಯಲ್ಲಿ ಅಯ್ಯಾಳಪ್ಪ ರಸ್ತಾಪುರ ವಂದಿಸಿದರು,

# ಅ.7 ರಂದು ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವ

ಯಾದಗಿರಿ : ಅ 04 : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ನಗರಸಭೆ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಯಾದಗಿರಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವ ಸಮಿತಿ ಸಂಯುಕ್ತಾಶ್ರಯದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವ ಕಾರ್ಯಕ್ರಮವನ್ನು ಯಾದಗಿರಿ ನಗರದ ಶ್ರೀ ಮಹರ್ಷಿ ವಾಲ್ಮೀಕಿ ಭವನದಲ್ಲಿ 2025ರ ಅಕ್ಟೋಬರ್ 7ರ ಮಂಗಳವಾರ ರಂದು ಮಧ್ಯಾಹ್ನ 12.30 ಗಂಟೆಗೆ ಹಮ್ಮಿಕೊಳ್ಳಲಾಗಿದೆ. ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರು ಶ್ರೀ ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸುವರು. ಕರ್ನಾಟಕ ವಿಧಾನ ಪರಿಷತ್ತು ವಿರೋಧ ಪಕ್ಷದ ನಾಯಕ ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ, ಹಾಗೂ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀ ಬಾಬುರಾವ್ ಚಿಂಚನಸೂರು ಅವರ ಘನ ಉಪಸ್ಥಿತಿಯಲ್ಲಿ ನೆರವೇರಲಿದೆ.ಯಾದಗಿರಿ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅವರು ಕಾರ್ಯಕ್ರಮ ಅಧ್ಯಕ್ಷತೆ ವಹಿಸುವರು. ರಾಯಚೂರು ಲೋಕಸಭಾ ಸದಸ್ಯರು ಶ್ರೀ ಜಿ.ಕುಮಾರ ನಾಯಕ ಹಾಗೂ ಕಲಬುರಗಿ ಲೋಕಸಭಾ ಸದಸ್ಯರು ಶ್ರೀ ರಾಧಾಕೃಷ್ಣ ದೊಡ್ಡಮನಿ ಮುಖ್ಯ ಅತಿಥಿಗಳಾಗಿ ಆಗಮಿಸುವರು. ವಿಧಾನ ಪರಿಷತ್ತು ಸದಸ್ಯರು ಶ್ರೀ ಬಿ.ಜಿ.ಪಾಟೀಲ್,ಡಾ. ಚಂದ್ರಶೇಖರ ಬಿ.ಪಾಟೀಲ್,ಶ್ರೀ ಶಶೀಲ್ ಜಿ.ನಮೋಶಿ,ಗುರುಮಠಕಲ್ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಶರಣಗೌಡ ಕಂದಕೂರ,ಸುರಪುರ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ರಾಜಾ ವೇಣುಗೋಪಾಲ ನಾಯಕ, ಯಾದಗಿರಿ ನಗರಸಭೆ ಅಧ್ಯಕ್ಷರು ಕು.ಲಲಿತಾ ಅನಪೂರ, ಯಾದಗಿರಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರು ಶ್ರೀ ಬಾಬುರಾವ್ ಕಾಡ್ಲೂರ ಅತಿಥಿಗಳಾಗಿ ಪಾಲ್ಗೊಳ್ಳುವರು.

ಯಾದಗಿರಿ ವಾಲ್ಮೀಕಿ ನಾಯಕ ಸಂಘ (ರಿ) ಜಿಲ್ಲಾಧ್ಯಕ್ಷರಾದ ಶ್ರೀ ಗೌಡಪ್ಪಗೌಡ ಆಲ್ದಾಳ ವಿಶೇಷ ಆಹ್ವಾನಿತರಾಗಿ ಆಗಮಿಸುವರು.

# ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ಸಾರ್ವಜನಿಕರು ಸ್ವಯಂ ಮಾಹಿತಿ ದಾಖಲಿಸಲು ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಅ 04:ರಾಜ್ಯದ ಎಲ್ಲಾ ನಾಗರಿಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಕುರಿತು ನಿಖರವಾದ ಮಾಹಿತಿ ಸಂಗ್ರಹಿಸಲು ಈಗಾಗಲೇ ರಾಜ್ಯಾದ್ಯಂತ ಸಮೀಕ್ಷೆ ಕಾರ್ಯ ಆರಂಭಗೊಂಡಿದ್ದು, ಈ ಸಮೀಕ್ಷೆಯು ಅಕ್ಟೊಬರ್ 7 ರ ವರೆಗೂ ನಡೆಯಲಿದೆ.

ಈಗಾಗಲೇ ಗುರುತಿಸಲಾಗಿರುವ ಎಲ್ಲಾ ಮನೆಗಳಿಗೆ ಗಣತಿದಾರರು ಭೇಟಿ ನೀಡಿ, ಗಣತಿ ಕಾರ್ಯ ನಡೆಸುತ್ತಿದ್ದು, ಸಾರ್ವಜನಿಕರೂ ಕೂಡಾ ಸ್ವಯಂ ಆಗಿ ತಮ್ಮ ಮನೆಯ ಗಣತಿ ಮಾಡಿಕೊಳ್ಳಲು ಅನುಕೂಲವಾಗುವಂತೆ ಸೌಲಭ್ಯವನ್ನು ಸಿದ್ದಪಡಿಸಲಾಗಿದೆ.

ಸಾರ್ವಜನಿಕರು https://kscbc-selfdeclaration.karnataka.gov.in/ ನಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು, ಜಟಜಿ ಜಜಭಿಟಚಿಡಿಚಿಣುಟಿ ಮೂಲಕ ಮಾಡಲು ಅವಕಾಶ ಕಲ್ಪಿಸಲಾಗಿದೆ.

ಸಾರ್ವಜನಿಕರು ಈ ಲಿಂಕ್ ನ್ನು ಕ್ಲಿಕ್ ಮಾಡಿದಾಗ ತೆರೆದುಕೊಳ್ಳುವ ಪುಟದಲ್ಲಿ ನಾಗರಿಕ ಎಂಬುದನ್ನು ಆಯ್ಕೆ ಮಾಡಿದಲ್ಲಿ ಲಾಗಿನ್ ನಲ್ಲಿ ಮುಂದುವರೆಯಲು ಕೋರಲಾಗುತ್ತದೆ. ನಂತರದಲ್ಲಿ ತಮ್ಮ ಮೊಬೈಲ್ ಸಂಖ್ಯೆಯನ್ನು ನೀಡಿದಲ್ಲಿ, ಮೊಬೈಲ್ ಗೆ ಓಟಿಪಿ ಬರಲಿದ್ದು ಅದನ್ನು ದಾಖಲು ಮಾಡಬೇಕಾಗುತ್ತದೆ.

ನಂತರ ತೆರೆಯುವ ಪುಟದಲ್ಲಿ ತಮ್ಮ ಸಮೀಕ್ಷೇಯ ಸ್ಥಿತಿಗತಿ ಕುರಿತಂತೆ ನಿಮ್ಮ ಸಮೀಕ್ಷೆ ಪೂರ್ಣಗೊಂಡಿದೆ ಅಥವಾ ಬಾಕಿ ಎಂದು ಕಾಣಬಹುದಾಗಿದ್ದು, ಇದುವರೆಗೆ ಸಮೀಕ್ಷೆ ನಡೆಯದೇ ಬಾಕಿ ಇದ್ದಲ್ಲಿ, ಇನ್ನೂ ಯಾವುದೇ ಕುಟುಂಬ ಸದಸ್ಯರನ್ನು ಸೇರಿಸಿಲ್ಲ ಫಾರ್ಮ್ ಭರ್ತಿ ಮಾಡಲು ಆರಂಭಿಸಿ ಎಂಬ ಸಂದೇಶ ಕಾಣಲಿದ್ದು, ಹೊಸ ಸಮೀಕ್ಷೆ ಆರಂಭಿಸಿ ಎಂಬುದನ್ನು ಕ್ಲಿಕ್ ಮಾಡಬೇಕಾಗುತ್ತದೆ.

ನಂತರದ ಪುಟದಲ್ಲಿ ಈಗಾಗಲೇ ತಮ್ಮ ಮನೆಗೆ ಅಂಟಿಸಲಾಗಿರುವ ಸ್ಟಿಕರ್ ನಲ್ಲಿರುವ ಗಿಊಖಆ ಸಂ–ಖ್ಯೆ ಯನ್ನು ದಾಖಲಿಸಿ ಸ್ಕ್ರೀನ್ ನಲ್ಲಿ ಕೋರುವ ಮಾಹಿತಿಗಳನ್ನು ದಾಖಲು ಮಾಡಬೇಕಾಗುತ್ತದೆ.

ಸದರಿ ಸಮೀಕ್ಷೆಗೆ ದಾಖಲೆಗಳ ಮಾಹಿತಿ ನೀಡುವ ಅವಶ್ಯಕತೆ ಇರುವುದರಿಂದ ತಮ್ಮ ಕುಟುಂಬದ ಸದಸ್ಯರ ರೇಷನ್ ಕಾರ್ಡ್, ಆಧಾರ್ ಕಾರ್ಡ್ ಮತದಾರರ ಗುರುತಿನ ಚೀಟಿ, ವಿಕಲಚೇತರನರಾಗಿದ್ದರೆ ಗಿಖಆ ಅಚಿಡಿಜ ಅಥವಾ ಅಂಗವಿಕಲ ಪ್ರಮಾಣ ಪತ್ರದ ದಾಖಲೆಗಳನ್ನು ತೆಗೆದಿರಿಸಿಕೊಂಡು ಸುಲಭವಾಗಿ ಈ ಸಮೀಕ್ಷೆ ಕಾರ್ಯದಲ್ಲಿ ತಾವೇ ಸ್ವಯಂ ಆಗಿ ಭಾಗವಹಿಸಬಹುದುದಾಗಿದ್ದು, ಸಮೀಕ್ಷೆ ಯಶಸ್ವಿಯಾದ ನಂತರ ಈ ಬಗ್ಗೆ ಮೊಬೈಲ್ ಗೆ ಸಂದೇಶ ಬರಲಿದೆ.

ಗಣತಿದಾರರು ತಮ್ಮ ಮನೆಗೆ ಬರುವವರೆಗೆ ಕಾಯದೇ ಸಾರ್ವಜನಿಕರು ತಮಗೆ ಅನುಕೂಲವಾದ ಅವಧಿಯಲ್ಲಿ ಯಾವುದೇ ಪ್ರದೇಶದಿಂದ ಸಮೀಕ್ಷೆಯಲ್ಲಿ ಭಾಗವಹಿಸಲು ಅನುಕೂಲವಾಗಲಿದ್ದು, ತಾವೇ ತಮ್ಮ ಮಾಹಿತಿಯನ್ನು ದಾಖಲು ಮಾಡುವುದರಿಂದ, ಯಾವುದೇ ಗೊಂದಲಗಳಿಲ್ಲದೆ ನಿಖರವಾಗಿ ತಮ್ಮ ಆರ್ಥಿಕ ಮತ್ತು ಸಾಮಾಜಿಕ ಸ್ಥಿತಿಗತಿಯನ್ನು ಸಮೀಕ್ಷೆ ಯಲ್ಲಿ ತಿಳಿಸಲು ಸಾಧ್ಯವಾಗಲಿದೆ.

# ನಿರಾಶ್ರಿತರ ಬಾಳಲ್ಲಿ ಬೆಳಕು ಮೂಡಿಸಿದ ರಾಜೀವ್ ಗಾಂಧಿ ಪ್ರಧಾನಮಂತ್ರಿ ಆವಾಸ್ ಯೋಜನೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಅ 04:ರಾಜ್ಯ ಸರ್ಕಾರವು ರಾಜೀವ್ ಗಾಂಧಿ ಅಭಿವೃದ್ಧಿ ನಿಗಮವು ಮುಖಾಂತರ ನಗರ ಪ್ರದೇಶದಲ್ಲಿರುವ ವಸತಿ ರಹಿತರಿಗೆ ವಸತಿ ಸೌಕರ್ಯ ಕಲ್ಪಿಸಲು ವಾಜಪೇಯಿ ವಸತಿ ಯೋಜನೆ, ಡಾ. ಬಿಆರ್ ಅಂಬೇಡ್ಕರ್ ನಿವಾಸ್ ಯೋಜನೆ, ದೇವರಾಜ್ ಅರಸು ವಸತಿ ಯೋಜನೆ ಹಾಗೂ ಕೇಂದ್ರ ಸರ್ಕಾರವು ಪ್ರಧಾಮಂತ್ರಿ ಆವಾಸ್ ಯೋಜನೆ ಜಾರಿಗೆ ತಂದಿದೆ.

ಆರ್ಥಿಕವಾಗಿ ಹಿಂದುಳಿದ ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳಿಗೆ ಸೂರು ಒದಗಿಸಲು ಪ್ರಧಾನ ಮಂತ್ರಿ ಆವಾಸ್ ಯೋಜನೆಯನ್ನು ಜೂನ್ 2015 ರಂದು ಜಾರಿಗೊಳಿಸಿದೆ. ಪ್ರಸ್ತುತ ಕೇಂದ್ರ ಮತ್ತು ರಾಜ್ಯ ಸರ್ಕಾರ ಪ್ರತಿ ಫಲಾನುಭವಿಗಳಿಗೆ ಮನೆ ನಿರ್ಮಾಣ ಮಾಡಿಕೊಳ್ಳಲು ಪರಿಶಿಷ್ಟ ಜಾತಿ ಮತ್ತು ಪಂಗಡದ ಪಲಾನುಭವಿಗಳಿಗೆ ರೂ 3,50,000 ಹಾಗೂ ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ರೂ. 2,75,000 ಸಹಾಯಧನ ನೀಡುತ್ತಿದೆ ಇದುವರೆಗೆ ಈ ಯೋಜನೆಯಲ್ಲಿ ರಾಜ್ಯದಲ್ಲಿ ಒಟ್ಟು 4.48 ಲಕ್ಷ ಮನೆಗಳ ನಿರ್ಮಾಣವಾಗಿದೆ.

ಈ ಯೋಜನೆ ಸೌಲಭ್ಯ ಪಡೆದುಕೊಂಡ ಚಿಕ್ಕಮಂಗಳೂರು ಜಿಲ್ಲೆಯ ಕಡೂರು ಪುರಸಭೆಯ ವಾರ್ಡ್ 19ರಲ್ಲಿ ವಾಸವಿರುವ ಬಿ ಎಲ್ ರೇಣುಕಾ ಎಂಬ ಫಲಾನುಭವಿ ಮಾತನಾಡಿ ನಾನು ಒಬ್ಬ ರೈತರಾಗಿದ್ದು ತಮ್ಮ ಹೆಂಡತಿ ಮತ್ತು ಇಬ್ಬರು ಮಕ್ಕಳೊಂದಿಗೆ ಕಚ್ಚಾ ಮನೆಯಲ್ಲಿ ವಾಸಿಸುತ್ತಿದ್ದೇನೆ. ಮನೆಯ ಛಾವಣಿ ಸೋರುತಿತ್ತು ಇದರಿಂದಾಗಿ ಮಲಗುವುದು ಕಷ್ಟವಾಗುತ್ತಿತ್ತು ಹಾಗೂ ಮಕ್ಕಳ ಉನ್ನತ ವ್ಯಾಸಂಗಕ್ಕೆ ಸ್ಥಳಾವಕಾಶ ವಿಲ್ಲದ ಕಾರಣ ನಾನು ಸ್ವಂತ ಮನೆ ನಿರ್ಮಾಣ ಮಾಡಬೇಕೆಂದು ಕನಸು ಕಾಣುತ್ತಿದ್ದ ಸಂದರ್ಭದಲ್ಲಿ ಕಡೂರು ಪುರಸಭೆಯ ಸಿಬ್ಬಂದಿಯೊಬ್ಬರು ಪ್ರಧಾನ ಮಂತ್ರಿ ಆವಾಸ್ ಯೋಜನೆಯ ಮಾಹಿತಿಯನ್ನು ತಿಳಿಸಿದರು. ನಂತರ ರಾಜೀವ್ ಗಾಂಧಿ ಅಭಿವೃದ್ಧಿ ನಿಗಮಕ್ಕೆ ಅರ್ಜಿ ಸಲ್ಲಿಸಿ ಸಹಾಯಧನ ಪಡೆದು ಸ್ವಂತ ಮನೆಯ ಕನಸನ್ನು ನನಸಾಗಿಸಿತು ಎಂದು ತಮ್ಮ ಅನಿಸಿಕೆ ಹಂಚಿಕೊಂಡರು.

ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆಯ ಪಟ್ಟಣದ ವೆಂಕಟೇಶ್ವರ ನಗರದ ನಿವಾಸಿಯಾದ ಪಂಕಜ ಅವರು ಹಲವಾರು ವರ್ಷಗಳಿಂದ ಮೂಲಭೂತ ಸೌಕರ್ಯಗಳಿಲ್ಲದ ಬಾಡಿಗೆ ಮನೆಯಲ್ಲಿ ವಾಸಿಸುತ್ತಿದ್ದರು ಇವರು ಸಣ್ಣದೊಂದು ಮೊಬೈಲ್ ಪರಿಕರಗಳ ಅಂಗಡಿಯನ್ನು ಇಟ್ಟು–ಕೊಂಡು ವ್ಯಾಪಾರ ಮಾಡಿ ಜೀವನ ಸಾಗಿಸುತ್ತಿದ್ದರು. ಬಾಡಿಗೆ ಮನೆಯಲ್ಲಿ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರಿನ ಸಮಸ್ಯೆ ವಿದ್ಯುತ್ ಸಂಪರ್ಕದಲ್ಲಿ ತೆ–ಊಂದರೆ ಎದುರಾಗುತ್ತಿದ್ದರಿಂದ ಪಂಕಜ ಅವರು ಸ್ವಂತ ಮನೆಯಲ್ಲಿ ನಿರ್ಮಾಣಬೇಕೆಂದು ಚಳ್ಳಕೆರೆ ಪುರಸಭೆ ಕಚೇರಿಗೆ ಸಂಪರ್ಕಿಸಿ ಪ್ರಧಾನಮಂತ್ರಿ ರಾಜೀವ್ ಗಾಂಧಿ ಆವಾಸ್ ಯೋಜನೆ ಸಹಾಯಧನ ಪಡೆದು ಸ್ವಂತ ಮನೆಯ ನಿರ್ಮಾಣ ಮಾಡಿಕೊಂಡರು.

ಚಾಮರಾಜನಗರದ ರಾಮಸಮುದ್ರ ಪಟ್ಟಣದಲ್ಲಿ ಸುಮಾರು 40 ವರ್ಷಗಳಿಂದ ಕುಟುಂಬದೊಂದಿಗೆ ಹಳೆಯ ಗುಡಿಸಿಲಿನಲ್ಲಿ ವಾಸವಿದ್ದ ರಾಚಯ್ಯ ಮತ್ತು ರಾಜಮ್ಮ ದಂಪತಿಗಳು ಕೃಷಿ ಕಾರ್ಮಿಕರಾಗಿದ್ದು ದಿನಗೂಲಿ ಮಾಡುತ್ತಿದ್ದರು, ಇವರು ವಾಸುವಿದ್ದ ಮನೆಯ ಮೇಲ್ಛಾವಣಿ ಸೋರುತ್ತಿತ್ತು ಹಾಗೂ ಶೌಚಾಲಯ ಲಭ್ಯವಿರುವುದಿಲ್ಲ. ಮಕ್ಕಳು ವಿದ್ಯಾಭ್ಯಾಸಕ್ಕೂ ಕೂಡ ಸ್ಥಳಾವಕಾಶ ವಿರಲಿಲ್ಲ. ಈ ಸಮಸ್ಯೆಯನ್ನು ಪರಿಹಾರ ಹುಡುಕಿಸಬೇಕೆಂದು ಅವರು ಚಾಮರಾಜನಗರ ಜಿಲ್ಲೆಯ ಪುರಸಭೆಯ ಭೇಟಿ ನೀಡಿ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ವಸತಿ ಯೋಜನೆಗಳ ಬಗ್ಗೆ ಮಾಹಿತಿ ಸಂಗ್ರಹಿಸಿ ಪ್ರಧಾನ ಮಂತ್ರಿ ಆವಾಸ್ ಯೋಜನೆಗೆ ಅರ್ಜಿ ಸಲ್ಲಿಸಿ ಸರ್ಕಾರದಿಂದ ಬಂದ ಸಹಾಯಧನವನ್ನು ಉಪಯೋಗಿಸಿಕೊಂಡು ತಮ್ಮದೇ ಆದ ಸ್ವಂತ ಸೂರನ್ನು ನಿರ್ಮಿಸಿಕೊಂಡು ನೆಮ್ಮದಿಯ ಜೀವನ ನಡೆಸುತ್ತಿದ್ದೇವೆ ಎಂದು ತಿಳಿಸಿದರು.

ಕೊಪ್ಪಳ ಜಿಲ್ಲೆಯ ತಾವರಗೇರಾ ಪಟ್ಟಣದಲ್ಲಿ ಅವಿಭಕ್ತ ಕುಟುಂಬದಿಂದ ಹೊರಬಂದ ಶಕುಂತಲಾ ಮತ್ತು ಅವರ ಪತಿ ಸಣ್ಣದಾದ ಬಾಡಿಗೆ ಮನೆಯಲ್ಲಿ ವಾಸಿಸುತ್ತಿದ್ದರು. ಕೆಇಬಿ ಲೈನ್‌ಮ್ಯಾನ್‌ಗೆ ದಿನಗೂಲಿಯಲ್ಲಿ ಸಹಾಯಕರಾಗಿ ಕೆಲಸ ನಿರ್ವಹಿಸುತ್ತಿದ್ದ ಇವರು ಸುಮಾರು 10 ರಿಂದ 12 ವರ್ಷಗಳ ಕಾಲ ಒಂಟಿ ಕೋಣೆಯಲ್ಲಿ ಜೀವನ ನಡೆಸುತ್ತಿದ್ದರು. ದಂಪತಿಗಳು ಪಟ್ಟಣ ಪಂಚಾಯಿತಿ ಮೂಲಕ ವಸತಿ ಯೋಜನೆ ಬಗ್ಗೆ ತಿಳಿದುಕೊಂಡು ಯೋಜನೆಗೆ ಅರ್ಜಿ ಸಲ್ಲಿಸಿ ಯೋಜನೆಯ ಸಹಾಯಧನವನ್ನು ಪಡೆದುಕೊಂಡು ಸ್ವಂತ ಮನೆ ನಿರ್ಮಿಸಿಕೊಳ್ಳಲು ಸಹಕಾರಿ ಆಯಿತು ಎಂದು ಅವರು ತಿಳಿಸಿದರು.

## ಸೌಹಾರ್ದತೆಯ ಸಾಕಾರಮೂರ್ತಿ ರುಕ್ಮೋದ್ದಿನ್ ಇಸ್ಲಾಂಪುರ: ಡಾ. ಜಗನ್ನಾಥ ಹೆಬ್ಬಾಳೆ




ಮಲ್ಲಮ್ಮ ನುಡಿ ವಾರ್ತೆ ಬೀದರ:ಅ.4: ಹಿರಿಯ ಸಾಹಿತಿ, ಜಾತ್ಯಾತೀತತೆಯ ಸರದಾರ, ಸೌಹಾರ್ದತೆಯ ಸಾಕಾರಮೂರ್ತಿ ರುಕ್ಮೋದ್ದಿನ್ ಇಸ್ಲಾಂಪುರ ಅವರ ಅಕಾಲಿಕ ಮರಣದಿಂದ ಕನ್ನಡ ಸಾಹಿತ್ಯ ಲೋಕಕ್ಕೆ ಅಪಾರವಾದ ನಷ್ಟವಾಗಿದೆ ಎಂದು ಕರ್ನಾಟಕ ಸಾಹಿತ್ಯ ಸಂಘದ ಅಧ್ಯಕ್ಷ ಡಾ. ಜಗನ್ನಾಥ ಹೆಬ್ಬಾಳೆ ತಿಳಿಸಿದರು. ನಗರದ ಕರ್ನಾಟಕ ಸಾಹಿತ್ಯ ಸಂಘದ ಸಭಾಂಗಣದಲ್ಲಿ ಸಂಘದ ವತಿಯಿಂದ ಜರುಗಿದ ಹಿರಿಯ ಸಾಹಿತಿ ರುಕ್ಮೋದ್ದಿನ್ ಇಸ್ಲಾಂಪುರ ಅವರ ನುಡಿನಮನ ಕಾರ್ಯಕ್ರಮದಲ್ಲಿ ಶೃದ್ಧಾಂಜಲಿ ಸಲ್ಲಿಸಿ ಮಾತನಾಡಿದರು. ಕೆಕೆಆರ್‌ಟಿಸಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಇಸ್ಲಾಂಪುರ ಅವರು ಸರಳ ಸಜ್ಜನಿಕೆಗೆ ಹೆಸರಾಗಿ ಮುಗ್ಧ ಸ್ವಭಾವದವರಾಗಿದ್ದರು. ಕಥಾ ಸಂಕಲನ, ಕವನ ಸಂಕಲನ, ಕಾದಂಬರಿ, ಜೀವನ ಚರಿತ್ರೆ, ಲೇಖನಗಳ ಸಂಚಯನ ಸೇರಿದಂತೆ ಸುಮಾರು 10ಕ್ಕೂ ಹೆಚ್ಚು ಕೃತಿಗಳನ್ನು ಕನ್ನಡ ಸಾರಸ್ವತ ಲೋಕಕ್ಕೆ ಸಮರ್ಪಣೆ ಮಾಡಿದ್ದಾರೆ. ಅವರು ಶಿಕ್ಷಣದಲ್ಲಿ ಸುಮಾರು 10ಕ್ಕೂ ಹೆಚ್ಚು ಪದವಿಗಳನ್ನು ಪಡೆದುಕೊಂಡು ಪ್ರತಿಭಾವಂತ ಸೃಜನಶೀಲ ಬರಹಗಾರರಾಗಿದ್ದರು ಎಂದು ಹೆಬ್ಬಾಳೆ ತಿಳಿಸಿದರು.

ಬಡತನದ ಬೇಗೆಯಲ್ಲಿ ಜನಿಸಿದ ಇಸ್ಲಾಂಪುರ ಅವರು ಉನ್ನತ ಮಟ್ಟಕ್ಕೆ ಬೆಳೆದು ಸಾಹಿತ್ಯ ಲೋಕದಲ್ಲಿ ಅಚ್ಚಳಿಯದೆ ಉಳಿದಿದ್ದಾರೆ. ಹಿರಿಯರಿಗೆ ಗೌರವ, ಕಿರಿಯರಿಗೆ ಹುರಿದುಂಬಿಸುವ ಮನೋಭಾವ ಬೆಳೆಸಿಕೊಂಡಿದ್ದ ಅವರು ದೇಶದ ಬಗ್ಗೆ ಅಪಾರ ಭಕ್ತಿ ಹೊಂದಿದ್ದರು. ಗಟ್ಟಿ ಬರಹಗಾರರು, ಪ್ರತಿಭಾವಂತ ಸಾಹಿತಿ, ಸೌಹಾರ್ದತೆಯಿಂದ ಎಲ್ಲಾ ಧರ್ಮಿಯರೊಂದಿಗೆ ಬದುಕಿದ ಮಹಾನುಭಾವರಾಗಿದ್ದರು. ಭಗವಂತ ಅವರ ಆತ್ಮಕ್ಕೆ ಶಾಂತಿ ನೀಡಲಿ. ಅವರ ಮೌಲ್ಯಯುತ ಸಾಹಿತ್ಯದ ಅಂಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳೋಣ ಎಂದರು.

ಹಿರಿಯ ಸಾಹಿತಿ ಪಂಚಾಕ್ಷರಿ ಪುಣ್ಯಶೆಟ್ಟಿ ಮಾತನಾಡಿ ರುಕ್ಮೋದ್ದಿನ್ ಇಸ್ಲಾಂಪೂರ ಅವರು ಜಿಲ್ಲೆ ಕಂಡ ಅಪರೂಪದ ಸಾಹಿತಿಯಾಗಿದ್ದರು. ಸದಾ ಧನಾತ್ಮಕ ವಿಚಾರಗಳನ್ನು ಮೈಗೂಡಿಸಿಕೊಂಡು ಹಿರಿಯರನ್ನು ಮತ್ತು ಕಿರಿಯ ಸಾಹಿತಿಗಳನ್ನು ಹುರಿದುಂಬಿಸುತ್ತಿದ್ದರು. ಬಹುಶಃ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ತಾಲೂಕಾ ಅಥವಾ ಜಿಲ್ಲಾ ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ಅವರಿಗೆ ಆಯ್ಕೆ ಮಾಡಬಹುದಾಗಿತ್ತು. ಅದೊಂದು ಹಾಗೇ ಉಳಿಯಿತು ಎಂದು ಕಳವಳ ವ್ಯಕ್ತಪಡಿಸಿದರು. ಸಾಹಿತಿ ಓಂಪ್ರಕಾಶ ಧಡ್ಡೆ ಮಾತನಾಡಿ ಅವರಲ್ಲಿ ಕಪಟ, ಮೋಸ, ಸಿಟ್ಟು ಎನ್ನುವುದೇ ಇರಲಿಲ್ಲ. ಅಂತಹ ಸೌಮ್ಯ ಸ್ವಭಾವದವರಾಗಿದ್ದರು. ನಾವು ಕಬೀರದಾಸ, ಶಿಶುನಾಳಶರೀಫರನ್ನು ನೋಡಲಿಲ್ಲ. ಆ ಗುಣಗಳನ್ನು ನಾವು ರುಕ್ಮೋದ್ದಿನ್ ಅವರಲ್ಲಿ ಕಾಣುತ್ತೇವೆ ಎಂದರು. ಇದೇವೇಳೆ ಇಸ್ಲಾಂಪುರ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ, ಒಂದು ನಿಮಿಷ ಮೌನಾಚರಣೆ ಮಾಡಿ, ನುಡಿನಮನ ಸಲ್ಲಿಸಲಾಯಿತು. ಹಲವಾರು ಹಿರಿಯ ಸಾಹಿತಿಗಳನ್ನು ತಮ್ಮ ಅಭಿಪ್ರಾಯಗಳನ್ನು ಹಾಗೂ ಇಸ್ಲಾಂಪುರ ಅವರೊಂದಿಗಿನ ಒಡನಾಟದ ಅನುಭವಗಳನ್ನು ಹಂಚಿಕೊಂಡರು. ಇದೇ ವೇಳೆ ಪ್ರಮುಖರಾದ ಶಂಕ್ರೆಪ್ಪ ಹೊನ್ನಾ, ಶಿವಕುಮಾರ ನಾಗವಾರ, ಗುರುರಾಜ ಕುಲಕರ್ಣಿ, ಪ್ರೊ. ಎಸ್.ವಿ.ಕಲ್ಮಠ, ಪ್ರಭಾಕರ ಎ.ಎಸ್. ರಮೇಶ ಬಿರಾದಾರ, ಸತ್ಯಮೂರ್ತಿ, ನಿಜಲಿಂಗಪ್ಪ ತಗಾರೆ, ವೈಜಿನಾಥ ಪಾಟೀಲ, ಎಸ್.ಬಿ.ಕುಚಬಾಳ, ಡಾ. ಸುನಿತಾ ಕೂಡ್ಲಿಕರ್, ಮಹಾರುದ್ರ ಡಾಕುಳಗಿ, ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಪ್ರವಾಹದ ನಂತರದ ಜನಜೀವನ: ಪೀಡಿತ ಪ್ರದೇಶಗಳ ಒಂದು ಅವಲೋಕನ

ಕಲಬುರಗಿ: ಪ್ರವಾಹಗಳು ಮಾನವಕುಲಕ್ಕೆ ತಿಳಿದಿರುವ ಅತ್ಯಂತ ವಿನಾಶಕಾರಿ ನೈಸರ್ಗಿಕ ವಿಕೋಪಗಳಲ್ಲಿ ಸೇರಿವೆ. ಅವು ಯಾವುದೇ ಎಚ್ಚರಿಕೆಯಿಲ್ಲದೆ ಅಪ್ಪಳಿಸುತ್ತವೆ. ಮನೆಗಳು, ಜೀವನೋಪಾಯಗಳು, ಮೂಲಸೌಕರ್ಯ ಮತ್ತು ಜೀವನದ ಮೇಲೆ ಪರಿಣಾಮ ಬೀರುವ ವಿನಾಶದ ಹಾದಿಗೆ ಕೊಂಡೊಯ್ಯುತ್ತವೆ. ಇತ್ತೀಚಿನ ವರ್ಷಗಳಲ್ಲಿ ಬದಲಾಗುತ್ತಿರುವ ಹವಾಮಾನ, ಕಳಪೆ ಯೋಜನೆಗಳು ಮತ್ತು ಪರಿಸರ ನಾಶವು ಜಾಗತಿಕವಾಗಿ ಪ್ರವಾಹದ ಆವರ್ತನ ಮತ್ತು ತೀವ್ರತೆಯನ್ನು ಹೆಚ್ಚಿಸಿದೆ.

ಇತ್ತೀಚೆಗೆ ಉತ್ತರ ಕರ್ನಾಟಕದಲ್ಲಿ ವಿಪರೀತ ಮಳೆಯಾಗಿ ಈ ಭಾಗದ ಜನರ ಜೀವನ ಬುಡಮೇಲಾಯಿತು. ಪ್ರವಾಹವು ತನ್ನ ರುದ್ರನರ್ತನದಿಂದ ಕೆಲ ಊರುಗಳು ಸೇರಿದಂತೆ ಹೊಲಗದ್ದೆಯಲ್ಲಿ ನುಗ್ಗಿ ಜನರ ಬದುಕು ಮೂರಾಬಟ್ಟೆಯಾಗಿಸಿದ್ದು ನಮಗೆಲ್ಲಾ ತಿಳಿದೇ ಇದೆ. ಪ್ರವಾಹದಿಂದ ಜನಜೀವನ ತತ್ತರಿಸಿ ಹೋಗಿದ್ದು ತಿಳಿದು, ಕರ್ನಾಟಕ ಸರ್ಕಾರದ ಮಾನ್ಯ ಮುಖ್ಯಮಂತ್ರಿಗಳಾದ, ಶ್ರೀಯುತ ಸಿದ್ಧರಾಮಯ್ಯನವರು ವೈಮಾನಿಕ ಸಮೀಕ್ಷೆ ನಡೆಸಿ ರೈತರಿಗೆ ಪರಿಹಾರ ಘೋಷಣೆ ಮಾಡಿದರು. ಅದೇ ರೀತಿ ಕಲಬುರಗಿಯ ಶರಣಬಸವೇಶ್ವರ ಸಂಸ್ಥಾನದಿಂದ 10 ಲಕ್ಷ ರೂಪಾಯಿಗಳ ಪರಿಹಾರ ಸಾಮಗ್ರಿಗಳನ್ನು ಪ್ರವಾಹ ಪೀಡಿತರಿಗೆ ರವಾನಿಸಿದ್ದು ಶ್ಲಾಘನೀಯ ಕೆಲಸವಾಗಿದೆ ಮತ್ತು ಮಾದನ ಹಿಪ್ಪರಗಿಯ ಶ್ರೀ ಶಿವಲಿಂಗೇಶ್ವರ ವಿರಕ್ತ ಮಠದಲ್ಲಿ ಭಕ್ತರ ಕಾಳಜಿ ಕೇಂದ್ರವನ್ನು ಊಟ ವಸತಿ ಮತ್ತು ಆರೋಗ್ಯ ಸೇವೆಯೊಂದಿಗೆ ತೆರೆಯಲಾಗಿದೆ. ಹೀಗೆ ಎಲ್ಲಾ ಸಂಘ ಸಂಸ್ಥೆಗಳು ಮಠಮಾನ್ಯರು ಹಾಗೂ ಉಳ್ಳವರು ಪ್ರವಾಹ ಪೀಡಿತರಿಗೆ ನೆರವಾಗಲು ಧಾವಿಸಬೇಕೆಂಬುದು ಜನರ ಅಂಬೋಣ.

ಇತ್ತೀಚಿನ ಪ್ರವಾಹದ ನಂತರದ ಪರಿಣಾಮಗಳು ತೀವ್ರವಾಗಿ ಪೀಡಿತ ಪ್ರದೇಶದಲ್ಲಿ ಇಂದು ಕಾಣಸಿಗುತ್ತವೆ. ಜನರ ಜೀವನವು ಹೇಗೆ ದುಸ್ಥಿತಿಯಲ್ಲಿದೆ, ಯಾವ ಸವಾಲುಗಳು ಅವರ ಮುಂದಿವೆ ಮತ್ತು ಪ್ರವಾಹ ಪೀಡಿತ ಪ್ರದೇಶದ ಜನರನ್ನು ಬೆಂಬಲಿಸಲು ಯಾವ ತುರ್ತು ಮತ್ತು ದೀರ್ಘಕಾಲೀನ ಕೆಲಸದ ಅಗತ್ಯವಿದೆ ಎಂಬುದನ್ನು ಮನಗಾಣಬಹುದು. ಅವರ ಜೀವನ ಸುಧಾರಿಸಲು ಪುನರ್ವಸತಿ ಮತ್ತು ಚೇತರಿಕೆಯ ಮೇಲೆ ಗಮನ ಹರಿಸುವುದು ಪ್ರಮುಖವಾಗಿದೆ.

ಈ ನಮ್ಮ ಉತ್ತರ ಕರ್ನಾಟಕ ಪ್ರದೇಶದಲ್ಲಿ ಹಲವಾರು ದಿನಗಳಿಂದ ತೀವ್ರವಾದ ಮಳೆಯಿಂದ ಪ್ರವಾಹ ಉಂಟಾಗಿ ನದಿಗಳು ಮತ್ತು ಅಣೆಕಟ್ಟುಗಳು ಉಕ್ಕಿ ಹರಿದಿವೆ. ರಸ್ತೆಗಳು, ಮನೆಗಳು ಮತ್ತು ಕೃಷಿಭೂಮಿಗಳು ಕೊಚ್ಚಿ ಹೋಗಿವೆ. ಸಾವಿರಾರು ಜನರು ಊಟವಿಲ್ಲದೇ ಪರದಾಡುವಂತಹ ಪರಿಸ್ಥಿತಿ ಉಂಟಾಗಿದೆ. ಜಿಲ್ಲಾಡಳಿತದ ಅಧಿಕಾರಿಗಳು ಸ್ಥಳದಲ್ಲಿಯೇ ಬೀಡುಬಿಟ್ಟು ಅನೇಕ ಕುಟುಂಬಗಳನ್ನು ಸ್ಥಳಾಂತರಗೊಳಿಸಿದ್ದಾರೆ. ಶಾಲೆಗಳಲ್ಲಿ, ಸಮುದಾಯ ಕೇಂದ್ರಗಳಂತಹ ತಾತ್ಕಾಲಿಕ ಆಶ್ರಯಗಳಲ್ಲಿ ಆಶ್ರಯ ಪಡೆದಿದ್ದಾರೆ. ತುರ್ತು ಸೇವೆಗಳು, ಆಹಾರ, ಕುಡಿಯುವ ನೀರು ಮತ್ತು ವೈದ್ಯಕೀಯ ಆರೈಕೆಗಳಿಗೆ ಹೆಚ್ಚಿನ ಒತ್ತು ಕೊಡಬೇಕಾಗಿದೆ.

ಮಹಾರಾಷ್ಟ್ರದಲ್ಲಿ ವರುಣನ ಅಬ್ಬರದಿಂದ ಎಲ್ಲಾ ಜಲಾಶಯಗಳು ತುಂಬಿ ಹೆಚ್ಚಾದ ನೀರನ್ನು ಮುಂದಕ್ಕೆ ಬಿಡಲಾಯಿತು. ಆಗ ನಮ್ಮ ಕಲ್ಯಾಣ ಕರ್ನಾಟಕ ಭಾಗದ ಭೀಮಾ ನದಿ ಉಕ್ಕಿ ಹರಿಯಿತು. ಅದರ ಮೇಲೆ ಈ ಭಾಗದಲ್ಲಿ ವರುಣನ ಅಟ್ಟಹಾಸ, ಜನರಿಗೆ ದಿಕ್ಕೇ ತೋಚದಾಯಿತು. ಆಗ ಇದ್ದಕ್ಕಿದ್ದಂತೆ ನೀರಿನ ಮಟ್ಟ ವೇಗವಾಗಿ ಏರಿತು, ಕೆಲವು ಪ್ರದೇಶಗಳಲ್ಲಿ, ಜನರನ್ನು ಮೇಲ್ಛಾವಣಿಗಳಿಂದ ಮತ್ತು ಮರಗಳಿಂದ ರಕ್ಷಿಸಲಾಯಿತು. ಈ ಭಾಗದ ಕೆಲ ಹಳ್ಳಿಗಳು ನೀರಿನಲ್ಲಿ ಮುಳುಗಿಹೋದವು, ಮನೆಗಳು ಕುಸಿದು ಬಿದ್ದು ಹಾನಿಗೊಳಗಾದವು. ಮಣ್ಣು ಮತ್ತು ಭಗ್ನಾವಶೇಷಗಳು ಎಲ್ಲವನ್ನೂ ಆವರಿಸಿದ್ದವು. ಊರಿಂದೂರಿಗೆ ಸಂಪರ್ಕ ಕಲ್ಪಿಸುವ ಸೇತುವೆಗಳ ಮೇಲೆ ನೀರು ರಭಸದಿಂದ ಓಡುತ್ತಿದ್ದವು, ರಸ್ತೆಗಳು ಸಂಪೂರ್ಣ ಹಾಳಾಗಿ ಹೋದವು.

ಪ್ರವಾಹಗಳು ಸ್ಥಳೀಯ ಆರ್ಥಿಕತೆಗಳ ಮೇಲೆ ವಿನಾಶಕಾರಿ ಪರಿಣಾಮವನ್ನು ಬೀರುತ್ತವೆ. ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಹೆಚ್ಚಾಗಿ ಆದಾಯದ ಪ್ರಾಥಮಿಕ ಮೂಲವಾಗಿರುವ ಕೃಷಿಯು ಪ್ರವಾಹದ ನಂತರ ದುರ್ಬಲವಾಗುತ್ತದೆ. ಕೆಲವರು ತಮ್ಮ ಜಾನುವಾರುಗಳುನ್ನು ಕಳೆದುಕೊಂಡಿದ್ದಾರೆ. ಹೊಲಗದ್ದೆಗಳಲ್ಲಿ ಫಲವತ್ತಾದ ಮೇಲ್ಮಣ್ಣು ನೀರಿನಲ್ಲಿ ಕೊಚ್ಚಿಹೋಗಿದೆ. ರೈತನು ಬೆಳೆದಿರುವ ಎಲ್ಲಾ ಬೆಳೆಗಳು ನಾಶವಾಗಿ ಸಂಪೂರ್ಣವಾಗಿ ನಷ್ಟವಾಗಿದೆ.

ರೈತರ ಆದಾಯದ ನಷ್ಟ ಎಂದರೆ ಕುಟುಂಬಗಳಿಗೆ ಆಹಾರ, ಶಿಕ್ಷಣ ಮತ್ತು ಆರೋಗ್ಯ ರಕ್ಷಣೆಯನ್ನು ಪಡೆಯಲು ಸಾಧ್ಯವಿಲ್ಲ. ಜೀವನೋಪಾಯವನ್ನು ಪುನರ್ನಿರ್ಮಿಸಲು ರೈತ ಒಂದು ವರ್ಷ ಕಾಯಬೇಕಾಗುತ್ತದೆ. ಸರಕಾರ ಕೊಡುವ ಪರಿಹಾರದಿಂದ ಸ್ವಲ್ಪ ಸಹಾಯವಾಗಬಹುದೇ ಹೊರತು, ಜೀವನ ಕಟ್ಟಿಕೊಳ್ಳಲು ಸಾಧ್ಯವಿಲ್ಲ. ಕಲುಷಿತವಾದ ನೀರಿನಿಂದ ಕಾಲರಾ, ಟೈಫಾಯಿಡ್ ಮತ್ತು ಭೇದಿ ಹರಡುವ ರೋಗಗಳ ಅಪಾಯ ಹೆಚ್ಚಾಗಿರುತ್ತದೆ. ಆಶ್ರಯಗಳಲ್ಲಿ ಜನದಟ್ಟಣೆ ಮತ್ತು ನೈರ್ಮಲ್ಯದ ಕೊರತೆಯಿಂದಾಗಿ ಸಾಂಕ್ರಾಮಿಕ ರೋಗಗಳ ಅಪಾಯ ಹೆಚ್ಚಾಗುತ್ತದೆ. ಆದ್ದರಿಂದ ಚಿಕಿತ್ಸಾಲಯಗಳು, ಆರೋಗ್ಯ ಮೂಲಸೌಕರ್ಯ ಮತ್ತು ವೈದ್ಯಕೀಯ ಸರಬರಾಜುಗಳು ಇಂದಿನ ಅವಶ್ಯಕತೆಗಳಾಗಿವೆ.

ಮಾನಸಿಕ ಆರೋಗ್ಯವು ಮತ್ತೊಂದು ನಿರ್ಣಾಯಕ, ಆದರೆ ಹೆಚ್ಚಾಗಿ ಕಡೆಗಣಿಸಲ್ಪಡುವ ಸಮಸ್ಯೆಯಾಗಿದೆ. ಕೆಲವರು ಖಿನ್ನತೆ ಮತ್ತು ನಂತರದ ಆಘಾತಕಾರಿ ಒತ್ತಡದ ಅಸ್ವಸ್ಥತೆಯನ್ನು ಅನುಭವಿಸುತ್ತಾರೆ. ಇವರಿಗೆ ಮಾನಸಿಕ ಬೆಂಬಲವಿಲ್ಲದೆ, ಚೇತರಿಕೆ ಇನ್ನಷ್ಟು ಕಷ್ಟಕರವಾಗುತ್ತದೆ. ಪ್ರವಾಹವು ಮಕ್ಕಳ ಶಿಕ್ಷಣವನ್ನು ಹಲವು ವಿಧಗಳಲ್ಲಿ ಅಡ್ಡಿಪಡಿಸುತ್ತದೆ. ಶಾಲೆಗಳನ್ನು ಹೆಚ್ಚಾಗಿ ಪ್ರವಾಹ ಪೀಡಿತರಿಗೆ ತಾತ್ಕಾಲಿಕ ಆಶ್ರಯ ತಾಣಗಳನ್ನಾಗಿ ಬಳಸಲಾಗುತ್ತದೆ. ಪುಸ್ತಕಗಳು, ಸಮವಸ್ತ್ರಗಳು ಮತ್ತು ಶಾಲಾ ಸಾಮಗ್ರಿಗಳು ನೀರಿನಲ್ಲಿ ಕೊಚ್ಚಿಹೋಗುತ್ತವೆ. ಇದರಿಂದ ಮಕ್ಕಳು ಅನೇಕ ತಿಂಗಳುಗಳ ಶಾಲಾ ಶಿಕ್ಷಣದಿಂದ ವಂಚಿತರಾಗುತ್ತಾರೆ.

## ನಾಡಿಗೆ ಹುಯಿಲಗೋಳ್ ನಾರಾಯಣರಾಯರ ಕೊಡುಗೆ ಅಪಾರ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಅ.4:ಹುಯಿಲಗೋಳ್ ನಾರಾಯಣರಾಯರು ಆಧುನಿಕ ಕನ್ನಡ ಸಾಹಿತ್ಯದ ನಾಟಕಕಾರ ಮತ್ತು ಸ್ವಾತಂತ್ರ್ಯ ಹೋರಾಟಗಾರ. ರಾಜ್ಯದ ಉದಯಕ್ಕೆ ಸ್ಫೂರ್ತಿ ನೀಡಿದ "ಉದಯವಾಗಲಿ ನಮ್ಮ ಚೆಲುವ ಕನ್ನಡ ನಾಡ" ಅಂದಿನ ರಾಜ್ಯಗೀತೆಯನ್ನು ರಚಿಸಿದ ಪ್ರಸಿದ್ಧ ಕವಿಯಾಗಿದ್ದಾರೆ. ನಾಡಿಗೆ ಅವರು ನೀಡಿದ ಕೊಡುಗೆ ಅಪಾರವಾಗಿದೆ ಎಂದು ಉಪನ್ಯಾಸಕ ಎಚ್.ಬಿ.ಪಾಟೀಲ್ ಹೇಳಿದರು. ನಗರದ ಆಳಂದ ರಸ್ತೆಯ ಜೆ.ಆರ್ ನಗರದ ಖಾದ್ರಿ ಚೌಕ್ ನ 'ಸಕ್ಸಸ್ ಕಂಪ್ಯೂಟರ್ ತರಬೇತಿ ಕೇಂದ್ರ'ದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ ಹುಯಿಲಗೋಳ ನಾರಾಯಣ–ರಾಯರ್ 140ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.

ಉದಯವಾಗಲಿ ಚೆಲುವ ಕನ್ನಡ ನಾಡು ಹಾಡು ಕೇಳಿದ ಕೂಡಲೇ ಕನ್ನಡಿಗರ ಕಿವಿ ನೆಟ್ಟಗಾಗುತ್ತೆ. ಮನಸ್ಸು ಆ ಹಾಡಿನ ಸಾಲುಗಳನ್ನು ಪುನರುಚ್ಚರಿಸತೊಡಗುತ್ತೆ.. ಹೌದು ಆ ಹಾಡಿನಲ್ಲೊಂದು ಆಪ್ತಭಾವ ಇದೆ. ನಮ್ಮ ನಾಡು, ನುಡಿಯ ಪ್ರೀತಿಯ ಪ್ರತೀಕ ಅದು. ಕರ್ನಾಟಕದ ನಾಡಗೀತೆಯೆಂದೇ ಅಂದು ಜನಪ್ರಿಯವಾಗಿದ್ದ ಹಾಡು ಇದು. ಈ ಗೀತೆ ರಚನೆಕಾರ ಸದಾ ಸ್ಮರಣೀಯರು. ಅವರಿಗೆ ಅನೇಕ ಪ್ರಶಸ್ತಿ–ಗೌರವಗಳು ದೊರೆತಿವೆ. ಇಂತಹ ಮಹನೀಯರ ಬಗ್ಗೆ ವಿದ್ಯಾರ್ಥಿಗಳು ಅರಿತುಕೊಳ್ಳುವುದು ಅಗತ್ಯವಾಗಿದೆ ಎಂದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಅಸ್ಲಾಂ ಶೇಖ್, ಕಸಾಪ ಉತ್ತರ ವಲಯದ ಗೌರವ ಅಧ್ಯಕ್ಷ ಶಿವಯೋಗೆಪ್ಪಾ ಎಸ್. ಬಿರಾದಾರ, ಸಂಸ್ಥೆಯ ಶಿಕ್ಷಕಿಯರಾದ ಪೂಜಾ ಹೂಗಾರ, ಕಾವೇರಿ ಹೌದೆ, ಮುಸ್ಕಾನ್ ಶೇಖ್, ಸ್ನೇಹಾ ಚೌಹಾಣ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಬರಹಗಾರರಿಗೆ ಮಾರ್ಗದರ್ಶಕರಾಗಿದ್ದ ರುಕ್ಮೋದ್ದಿನ್ ಇಸ್ಲಾಂಪುರ



ಮಲ್ಲಮ್ಮ ನುಡಿ ವಾರ್ತೆ

ಬೀದರ್:ಅ.4:ಸಾಹಿತಿ ರುಕ್ಮೊದ್ದಿನ್ ಇಸ್ಲಾಂಪುರ ಯುವ ಬರಹಗಾರರು, ಕವಿಗಳು ಹಾಗೂ ಸಾಹಿತಿಗಳಿಗೆ ಮಾರ್ಗದರ್ಶಕರಾಗಿದ್ದರು ಎಂದು ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಸುರೇಶ ಚನಶೆಟ್ಟಿ ಹೇಳಿದರು.

ಬಸವಕಲ್ಯಾಣ ತಾಲ್ಲೂಕಿನ ಇಸ್ಲಾಂಪುರ ಗ್ರಾಮದಲ್ಲಿ ಶುಕ್ರವಾರ ನಡೆದ ಶ್ರದ್ಧಾಂಜಲಿ ಸಭೆಯಲ್ಲಿ ಅವರು ಮಾತನಾಡಿದರು.

ರುಕ್ಮೊದ್ದಿನ್ ಅವರು ಎರಡು ಕಾದಂಬರಿ ಸೇರಿ ಏಳು ಕೃತಿಗಳನ್ನು ರಚಿಸಿ, ಕನ್ನಡ ಸಾಹಿತ್ಯ ಲೋಕಕ್ಕೆ ಅರ್ಪಿಸಿದ್ದರು. ಅನೇಕ ಚಿಂತಕರು, ಸಾಧಕರ ಮನೆಗೆ ತೆರಳಿ, ಸಂದರ್ಶಿಸಿ, ಲೇಖನ ಬರೆಯುತ್ತಿದ್ದರು. ಅವರ ನಿಧನದಿಂದ ಜಿಲ್ಲೆಯ ಸಾಹಿತ್ಯ ಕ್ಷೇತ್ರಕ್ಕೆ ತುಂಬಲಾರದ ನಷ್ಟವಾಗಿದೆ ಎಂದರು.

ಹಿರಿಯ ಸಾಹಿತಿ ಶಿವಶಂಕರ ತರನಳ್ಳಿ, ಭಾರತೀಯ ಇತಿಹಾಸ ಸಂಕಲನ ಸಮಿತಿಯ ಜಿಲ್ಲಾ ಸಂಚಾಲಕ ಪ್ರೊ. ಶಿವಕುಮಾರ ಉಪ್ಪೆ, ಕಥೆಗಾರ ಗುರುನಾಥ ಅಕ್ಕಣ್ಣ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬೀದರ್ ವಿಭಾಗೀಯ ಕಚೇರಿಯ ಡಿಟಿಒ ಎಸ್.ಐ.ಬಿರಾದಾರ, ಕರ್ನಾಟಕ ಪದವಿಪೂರ್ವ ಕಾಲೇಜು ಪ್ರಾಚಾರ್ಯ ಡಾ. ಬಸವರಾಜ ಬಲ್ಲೂರ, ಮಾಣಿಕ ರೆಡ್ಡಿ ಅವರು ರುಕ್ಮೊದ್ದೀನ್ ಇಸ್ಲಾಂಪುರ ಅವರ ಸರಳ ಬದುಕು ಹಾಗೂ ಬರಹದ ಮೇಲೆ ಬೆಳಕು ಚೆಲ್ಲಿದರು.

ಕಸಾಪ ಜಿಲ್ಲಾ ಘಟಕದ ಕೋಶಾಧ್ಯಕ್ಷ ಶಿವಶಂಕರ ಟೋಕರೆ ರುಕ್ಮೊದ್ದಿನ್ ಅವರ ಕುರಿತು ಕವನ ವಾಚಿಸಿದರು.

ಪ್ರಮುಖರಾದ ನಾಗರಾಜ ಕರ್ಪೂರ, ಶಕೀಲ್ ಅಹಮ್ಮದ್, ಜಗನ್ನಾಥ ಶಿವಯೋಗಿ ಮೊದಲಾದವರು ಭಾಗವಹಿಸಿದ್ದರು.

# ಸ್ಯಾಂಡಲ್‌ವುಡ್‌ಗೂ ತಲುಪಿದ ಏಕ್ ಲಾಖ್ ಪೇಡ್ ಅಭಿಯಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ್: ಅ.4: ಬೀದರನಿಂದ ಆರಂಭವಾದ ಏಕ್ ಲಾಖ್ ಪೇಡ್ ಮಾ ಕೇ ನಾಮ್ ಅಭಿಯಾನ ಸ್ಯಾಂಡಲ್‌ವುಡ್‌ಗೂ ತಲುಪಿದೆ.

ಕೇಂದ್ರ ಸರ್ಕಾರದ ರಾಜ್ಯ ಅಭಿವೃದ್ಧಿ, ಸಮನ್ವಯ ಹಾಗೂ ಮೇಲುಸ್ತುವಾರಿ ಸಮಿತಿ ಸದಸ್ಯ ಶಿವಯ್ಯ ಸ್ವಾಮಿ ಅವರು ಅಭಿಯಾನ ನಿಮಿತ್ತ ಬೆಂಗಳೂರಿನಲ್ಲಿ ಖ್ಯಾತ ಚಿತ್ರ ನಟ, ನಿರ್ದೇಶಕ ಹಾಗೂ ನಿರ್ಮಾಪಕ ಎಸ್. ನಾರಾಯಣ್ ಅವರಿಗೆ ಬಿಲ್ವಪತ್ರಿ ಸಸಿ ವಿತರಿಸಿದರು. ಬಿಲ್ವಪತ್ರಿಗೆ ಆಧ್ಯಾತ್ಮದಲ್ಲಿ ಬಹಳ ಮಹತ್ವ ಇದೆ. ಇದು, ಶಿವನಿಗೆ ಬಹಳ ಪ್ರಿಯವಾದದ್ದು. ಪರಿಸರ ಕಾಳಜಿಯ ಅಭಿಯಾನ ಅಂಗವಾಗಿ ಶಿವಯ್ಯ ಸ್ವಾಮಿ ಅವರು ಬಿಲ್ವಪತ್ರಿ ಸಸಿ ವಿತರಿಸುತ್ತಿರುವುದು ಪ್ರಶಂಸನೀಯ. ಈ ರೀತಿಯ ಅಭಿಯಾನಗಳು ಹೆಚ್ಚೆಚ್ಚು ನಡೆಯಬೇಕು ಎಂದು ಎಸ್. ನಾರಾಯಣ್ ಹೇಳಿದರು.

ಶ್ರೀಶೈಲದ ಅಕ್ಕ ಮಹಾದೇವಿ ಚೈತನ್ಯ ಪೀಠದ ಮಾತೆ ಕರುಣಾದೇವಿ ಅವರ ಹೆಸರಲ್ಲಿ ಹಮ್ಮಿಕೊಳ್ಳಲಾದ ಅಭಿಯಾನ ಅಂಗವಾಗಿ ರಾಜಕೀಯ, ಧಾರ್ಮಿಕ, ಸಾಮಾಜಿಕ, ಶೈಕ್ಷಣಿಕ, ಸಾಂಸ್ಕೃತಿಕ ಸೇರಿದಂತೆ ವಿವಿಧ ಕ್ಷೇತ್ರಗಳ ಗಣ್ಯರಿಗೆ ಈಗಾಗಲೇ ಬಿಲ್ವಪತ್ರಿ ಸಸಿ ವಿತರಿಸಲಾಗಿದೆ. ಇದೀಗ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಕಚೇರಿಗೆ 1,008 ಬಿಲ್ವಪತ್ರಿ ಸಸಿ ಕೊಡಲಾಗಿದೆ ಎಂದು ಅಭಿಯಾನದ ರೂವಾರಿಯೂ ಆದ ಶಿವಯ್ಯ ಸ್ವಾಮಿ ತಿಳಿಸಿದರು.

ಅಭಿಯಾನ ನಿಮಿತ್ತ 93 ಸಾವಿರ ಸಸಿಗಳನ್ನು ವಿತರಿಸಲಾಗಿದೆ. ಕೆಲವೇ ದಿನಗಳಲ್ಲಿ ಅಭಿಯಾನ ಪೂರ್ಣಗೊಳ್ಳಲಿದೆ ಎಂದು ಹೇಳಿದರು.

ಉದಯೋನ್ಮುಖ ನಟ ಶ್ರೀಹರಿ ಪರಾಕ್ರಮ್ ಇದ್ದರು.

# ಕೆಯುಡಬ್ಲ್ಯೂಜೆ ಗ್ರಂಥಾಲಯ ಅ.6ರಂದು ಉದ್ಘಾಟನೆ

ಬೆಂಗಳೂರು:ಅ.4:ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘವು(ಕೆಯುಡಬ್ಲೂಟಿಜಜಿಟಿಜಜಜೆ) ತನ್ನ ಕೇಂದ್ರ ಕಾರ್ಯಾಲಯದಲ್ಲಿ ಗ್ರಂಥಾಲಯವನ್ನು ಪ್ರಾರಂಭಿಸಲು ಮುಂದಾಗಿದೆ.

ಮಂಕುತಿಮ್ಮನ ಕಗ್ಗದ ಖ್ಯಾತಿಯ ಡಿವಿಜಿ ಅವರು 1932ರಲ್ಲಿ ಹುಟ್ಟು ಹಾಕಿದ ಪತ್ರಕರ್ತರ ಸಂಘಕ್ಕೆ 94 ವಸಂತಗಳು ತುಂಬುತ್ತಿರುವ ಹೊತ್ತಿನಲ್ಲಿ ಕೆಯುಡಬ್ಲೂಜೆ ಸಭಾಂಗಣದ ಹೊರಾಂಗಣದಲ್ಲಿ ಗ್ರಂಥಾಲಯ ಪ್ರಾರಂಭಿಸಲು ಸಿದ್ಧತೆ ನಡೆದಿದೆ.

ಹಿರಿಯ ಪತ್ರಕರ್ತರು ಬರೆದಿರುವ ಪುಸ್ತಕಗಳಿಂದ ಹಿಡಿದು ಇತ್ತೀಚಿನ ತಲೆಮಾರಿನ ತನಕ ಪುಸ್ತಕಗಳನ್ನು ಗ್ರಂಥಾಲಯದಲ್ಲಿ ಇಡಲು ಉದ್ದೇಶಿಸಲಾಗಿದೆ.

ಅ.6ರಂದು ಬೆಳಿಗ್ಗೆ 10.45ಕ್ಕೆ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರ ಅಧ್ಯಕ್ಷತೆಯಲ್ಲಿ ಸರಳ ಕಾರ್ಯಕ್ರಮ ನಡೆಯಲಿದ್ದು, ಸಂಘದ ಪದಾಧಿಕಾರಿಗಳು ಮತ್ತು ಸದಸ್ಯರು ಭಾಗವಹಿಸಲಿದ್ದಾರೆ ಎಂದು ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮತಗಳ್ಳತನ ತಡೆಯಲು ಕೋರ್ಟಗೆ ಮೊರೆ ಹೊರತು ರೈತರಿಗೆ ತೊಂದರೆ ಕೊಡಲಿಕ್ಕಲ್ಲ: ಪಾಟೀಲ




ಮಲ್ಲಮ ನುಡಿ ವಾರ್ತೆ

ಬೀದರ:ಕಾರ್ಖಾನೆಯಲ್ಲಿನಅಕ್ರಮ ಚುನಾವಣೆ ತಡೆಯುವುದಕ್ಕಾಗಿ ಮಾತ್ರ ಕೋರ್ಟ್ಗೆ ಮೊರೆ ಹೋಗಿದ್ದೇವೆ ಹೊರತು ರೈತರಿಗೆ ತೊಂದರೆ ಕೊಡುವುದಕ್ಕಿಲ್ಲ ಎಂದು ಭಾರತೀಯ ಜನತಾ ಪಕ್ಷದ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ ತಿಳಿಸಿದರು.

ಶನಿವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆ ಹಾಗೂ ಮಹಾತ್ಮ ಗಾಂಧಿ ಸಹಕಾರಿ ಸಕ್ಕರೆ ಕಾರ್ಖಾನೆಗಳನ್ನು ಒಂದೆ ಕುಟುಂಬ ನಡೆಸಿಕೊಂಡು ಬರುತ್ತಲಿದ್ದು, ಸಹಕಾರ ಕ್ಷೇತ್ರದಲ್ಲಿ ಬೀದರ್ ಜಿಲ್ಲೆಯಲ್ಲಿ ಮಾತ್ರ ಸಾಮ್ರಾಜ್ಯ ಶಾಹಿಯಾಗಿ ಮುಂದುವರೆದಿದೆ ಎಂದು ಕುಟುಕಿದರು.

ಉಭಯ ಕಾರ್ಖಾನೆಯವರು ರೈತರಿಗೆ ದಾರಿ ತಪ್ಪಿಸಿ ನಮ್ಮ ವಿರುದ್ಧ ಎತ್ತಿಕಟ್ಟುತ್ತಿದ್ದಾರೆ, ಕಾರ್ಖಾನೆಯಲ್ಲಿನ ಭ್ರಷ್ಟಾಚಾರ ಹಾಗೂ ಅಕ್ರಮ ಮತದಾನ ಹತ್ತಿಕ್ಕಲು ಮಾತ್ರ ಕೋರ್ಟ್ಗೆ ಹೋಗಿದ್ದೇವೆ. ಮತದಾನ ಮುಂದೆ ಹೋದರೆ ಕಾರ್ಖಾನೆ ಕೆಲಸ ನಿಲ್ಲುವುದಿಲ್ಲ. ಜಿಲ್ಲಾಡಳಿತ ಇಂಥ ಸಂದರ್ಭದಲ್ಲಿ ಕಾರ್ಖಾನೆ ನಡೆಸುತ್ತದೆ. ಹಾಗಾಗಿ ರೈತರು ಯಾರ ಮಾತಿಗೆ ಬೆಲೆ ಕೊಡದೇ ತಪ್ಪು ಗ್ರಹಿಕೆಯಿಂದ ದೂರ ಸರಿದು ನಿರಾಳರಾಗಿರಬೇಕೆಂದು ಮನವಿ ಮಾಡಿದರು.

ಈಗಾಗಲೇ ಎನ್.ಎಸ್.ಎಸ್.ಕೆ ಚುನಾವಣೆ ಕೋರ್ಟಗೆ ಕಲಬುರಗಿ ಉಚ್ಚ ನ್ಯಾಯಾಲಯ ತಡೆ ನೀಡಿದೆ. ಎಮ್.ಜಿ.ಎಸ್.ಎಸ್.ಕೆ ಕಾರ್ಖಾನೆಯಲ್ಲಿನ ಅಕ್ರಮ ಚುನಾವಣೆ ತಡೆಯಲು ಸಹ ಕೋರ್ಟ್ಗೆ ಮೊರೆ ಹೋಗಿದ್ದೇವು. ಆದರೆ ಕೋರ್ಟ್ಗಳು ರಜೆ ಇದ್ದ ಕಾರಣ ಈ ಕಾರ್ಖಾನೆಯ ಚುನಾವಣೆಗೆ ತಡೆ ನೀಡದೇ ಚುನಾವಣೆ ನಡೆದರೂ ಫಲಿತಾಂಶ ಮೇಲೆ ರಿಟ್ ಪಿಟಿಶನ್‌ಗೆ ಅನುಮತಿ ನೀಡುವ ಮೂಲಕ ಅಕ್ರಮ ಮತದಾನ ಹತ್ತಿಕ್ಕಲು ಪ್ರಯತ್ನಿಸಿರುವುದು ಸಂತೋಷ ಎಂದರು. ಉಭಯ ಕಾರ್ಖಾನೆಗಳಲ್ಲಿ ಸುಮಾರು 24,000 ವರೆಗೆ ಮತದಾರರಿದ್ದರೂ ಕೇವಲ 4300 ಮತದಾರರ ಯಾದಿ ತೋರಿಸುತ್ತಿದೆ.

ಎನ್.ಎಸ್.ಎಸ್.ಕೆ ಕಾರ್ಖಾನೆ ಮಾದರಿಯಂತೆ ಇಲ್ಲಿಯೂ ಸಹ ಭಾಲ್ಕಿ ತಾಲೂಕಿನ ನೇಳಗಿಯ ಅಮೃತ ಶಾಮರಾವ ಜನವಾಡೆ ಅವರು ಯಾವುದೇ ಕಬ್ಬು ಸಾಗಿಸದಿದ್ದರೂ ಅಥವಾ ಕಾರ್ಖಾನೆಯ ಸಾಮಾನ್ಯ ಸಭೆಗಳಿಗೆ ತೆರಳದಿದ್ದರೂ ಅವರ ಹೆಸರು ಮತದಾನ ಪಟ್ಟಿಯಲ್ಲಿದೆ. ಹಾಗೇ ಕಣಜಿ ಗ್ರಾಮದ ಕಮಳಮ್ಮ ಗಂಡ ಸಂಗಪ್ಪ ಅವರು ತೀರಿ ಹೋಗಿ ಐದು ವರ್ಷ ಆದರೂ ಅವರ ಹೆಸರು ಮತದಾನ ಯಾದಿಯಲ್ಲಿ ಇಟ್ಟಿರುವುದು ದೊಡ್ಡ ದುರಂತ ಎಂದರು. ಎನ್.ಎಸ್.ಎಸ್.ಕೆ ಮಾದರಿಯಲ್ಲಿ ಮಹಾತ್ಮ ಗಾಂಧಿ ಸಹಕಾರಿ ಸಕ್ಕರೆ ಕಾರ್ಖಾನೆಯಲ್ಲಿ ನಮ್ಮ ಪಕ್ಷದ ಅಭ್ಯರ್ಥಿಗಳಿಗೆ ಸ್ಪರ್ಧೆಗಿಳಿಸಲಾಗಿದ್ದು, ಸಾಮಾನ್ಯ ಕ್ಷೇತ್ರದಿಂದ ಭೀಮರಾವ ಮಂಡೋಳೆ, ರಾಜೇಂದ್ರ ಮಾಲಿ ಹಾಗೂ ಜ್ಞಾನೋಬಾ ನಿರ್ಗುಡೆ, ಸಾಮಾನ್ಯ ಮಹಿಳಾ ಕ್ಷೇತ್ರದಿಂದ ದಾಕ್ಷಾಯಣಿ ಪೋಲಿಸ್ ಪಾಟೀಲ ಹಾಗೂ ಸರೋಜನಿ ಹಿರಣಾ, ಪರಿಶಿಷ್ಟ ಜಾತಿ ಕ್ಷೇತ್ರದಿಂದ ಧನರಾಜ ಒಡೆಯರ್ ಅವರನ್ನು ಕಣಕ್ಕಿಳಿಸಲಾಗಿದ್ದು, ಎಮ್.ಜಿ.ಎಸ್.ಎಸ್.ಕೆ ಕಾರ್ಖಾನೆಯ ಮತದಾರರು ಕಾರ್ಖಾನೆಯಲ್ಲಿನ ಭ್ರಷ್ಟಾಚಾರ ತಡೆಯಲು ನಮ್ಮ ಈ ಆರು ಜನ ಅಭ್ಯರ್ಥಿಗಳಿಗೆ ಮತ ನೀಡಿ ಗೆಲ್ಲಿಸಬೇಕೆಂದು ಪಾಟೀಲ ಮನವಿ ಮಾಡಿದರು.

ಪಕ್ಷದ ಹಿರಿಯ ಮುಖಂಡರಾದ ಗುರುನಾಥ ಜ್ಯಾಂತಿಕರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪೀರಪ್ಪ ಔರಾದೆ,

ನಗರ ಸಭೆ ಸದಸ್ಯ ಶಶಿ ಹೊಸಳ್ಳಿ, ಜಿಲ್ಲಾ ಕಾರ್ಯದರ್ಶಿ ರಾಜಕುಮಾರ ನೆಮತಾಬಾದ, ಪ್ರಮುಖರಾದ ವೀರು ದಿಗ್ವಾಲ್, ಮಾಧ್ಯಮ ಪ್ರಮುಖ ಶ್ರೀನಿವಾಸ ಚೌಧರಿ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

## ಮನುಷ್ಯ ಕಾಣೆ: ಪತ್ತೆಗಾಗಿ ಮನವಿ



ಮಲ್ಲಮ ನುಡಿ ವಾರ್ತೆ

ಬೀದರ, : ಬಸವಕಲ್ಯಾಣ ತಾಲ್ಲೂಕಿನ ಹತ್ತರ್ಗಾ (ಎಸ್) ಗ್ರಾಮದ ನಿವಾಸಿಯಾದ ನಿಂಗಪ್ಪಾ ತಂದೆ ಅಮೃತಪ್ಪಾ ಗೊಬ್ಬೆಗೋಳ (45) ಇವರು ಮನೆಯಿಂದ ಹೊರಗಡೆ ಹೋಗಿ ಕಾಣೆ-ಯಾಗಿರುತ್ತಾರೆ.

ಕಾಣೆಯಾದ ಮನುಷ್ಯ 5 ಅಡಿ 3 ಇಂಚ ಎತ್ತರ ಇದ್ದು, ಗುಂಡು ಮುಖ ಸಾಧಾರಣಾ ಮೈಕಟ್ಟು,

ಕಪ್ಪು ಮೈಬಣ್ಣ, ನೇರ ಮೂಗು ಇದ್ದು, ಮೈಮೇಲೆ ಕಪ್ಪು ಬಣ್ಣದ ಸ್ವೇಟರ್,

ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುವ ಇತನು ಹಿಂದಿ ಹಾಗೂ ಕನ್ನಡ ಭಾಷೆಯಲ್ಲಿ ಮಾತನಾಡುತ್ತಾನೆ.

ಈ ಕಾಣೆಯಾದ ಮನುಷ್ಯನ ಬಗ್ಗೆ ಯಾರಿಗಾದರೂ ಮಾಹಿತಿ ಅಥವಾ ಸುಳಿವು ಸಿಕ್ಕರೆ ಮಂಠಾಳ ಪೊಲೀಸ್ ಠಾಣೆಗೆ ಅಥವಾ ದೂರವಾಣಿ ಸಂಖ್ಯೆ: 257433, 257433,

226700, 08742-263601 ಗೆ ಮಾಹಿತಿ ನೀಡಲು ಮಂಠಾಳ ಪೊಲೀಸ್ ಠಾಣೆಯ ಪಿ.ಎಸ್.ಐ. ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ

## ಅರ್ಜಿ ಆಹ್ವಾನ

ಮಲ್ಲಮ ನುಡಿ ವಾರ್ತೆ

ಬೀದರ, : ಪುರಸಭೆ ಚಿಟಗುಪ್ಪಾ ವತಿಯಿಂದ ವರ್ಷ 2024-25ನೇ ಸಾಲಿನ ಎಸ್.ಎಫ್.ಸಿ.

ಶೇ.24.10% ಯೋಜನೆಯಡಿಯಲ್ಲಿ ಪರಿಶಿಷ್ಟ ಪಂಗಡದ ಮಹಿಳೆಯರಿಗೆ ಹೊಲಿಗೆ ಯಂತ್ರ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಚಿಟಗುಪ್ಪಾ ಪುರಸಭೆ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದಾಖಲಾತಿಗಳ ವಿವರ: ಅರ್ಜಿ ನಮೂನೆ,

ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಿದ್ಯಾರ್ಹತೆ ಪ್ರಮಾಣ ಪತ್ರ (7ನ ೀ ಉತ್ತೀರ್ಣ ಅಥವಾ ಎಸ್.ಎಸ್.ಎಲ್.ಸಿ.), ರೇಷನ್ ಕಾರ್ಡ (ಬಿ.ಪಿ.ಎಲ್. ಹೊಂದಿರುವವರು), ಆಧಾರ ಕಾರ್ಡ, ಐ.ಡಿ. ಕಾರ್ಡ, ಪಾಸ್‌ಪೋರ್ಟ್ ಫೋ-ಟೋ -02, ಅರ್ಜಿದಾರರು ಕಡ್ಡಾಯವಾಗಿ ಚಿಟಗುಪ್ಪಾ ಪಟ್ಟಣದ ನಿವಾಸಿಯಾಗಿರತಕ್ಕದ್ದು, ಶಪಥ ಪತ್ರ ( ಈ ಹಿಂದೆ ಹೊಲಿಗೆ ಯಂತ್ರ ತರಬೇತಿ ಪಡೆದಿಲ್ಲದಿರುವ ಬಗ್ಗೆ ಶಪಥ ತ್ರ ನೀಡುವುದು

ಅರ್ಹರು ಅರ್ಜಿಯನ್ನು ದಿನಾಂಕ: 15-10-2025 ರೊಳಗಾಗಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಹಾಗೂ ಅರ್ಜಿಯ ನಮೂನೆಯನ್ನು ವೆಬ್‌ಸೈಟ್ (WWW.Chittagup-patown.mrc.gov.in) ನಲ್ಲಿ ಡೌನ್‌ಲೋಡ್ ಮಾಡಿಕೊಂಡು ವಿಕ್ಷೀಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

## ವೈದ್ಯಕೀಯ ಶಿಕ್ಷಣ ಸಚಿವರು ಡಾ.ಶರಣಪ್ರಕಾಶ ಆರ್.ಪಾಟೀಲ ಬಳ್ಳಾರಿಗೆ



ಮಲ್ಲಮ ನುಡಿ ವಾರ್ತೆ

ಬಳ್ಳಾರಿ: ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ ಆರ್.ಪಾಟೀಲ ಅವರು ಅ.05 ರಂದು ಹೊಸಪೇಟೆಯಿಂದ ಬಳ್ಳಾರಿಗೆ ಆಗಮಿಸಲಿದ್ದಾರೆ. ಅಂದು ಬೆಳಿಗ್ಗೆ 11 ಗಂಟೆಗೆ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ವತಿಯಿಂದ ಚೇಂಬರ್ ಆಫ್ ಕಾಮರ್ಸ್ ನ ಆವರಣದಲ್ಲಿ ಏರ್ಪಡಿಸಿರುವ ಇಂಕ್ಯುಬೇಶನ್ ಕೇಂದ್ರ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಬಳಿಕ ಮಧ್ಯಾಹ್ನ 12.30 ಕ್ಕೆ ನಗರದ ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನಾ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸುವರು.

ನಂತರ ಹೊಸಪೇಟೆಗೆ ತೆರಳಿ ವಾಸ್ತವ್ಯ ಮಾಡುವರು ಎಂದು ಸಚಿವರ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ.

## ಮತದಾರರ ಪಟ್ಟಿ ಪರಿಷ್ಕರಣೆ: ನೋಂದಾಯಿಸಿಕೊಳ್ಳಲು ಅರ್ಜಿ ಆಹ್ವಾನ

ಮಲ್ಲಮ ನುಡಿ ವಾರ್ತೆ

ಬಳ್ಳಾರಿ :ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯನ್ನು ಹೊಸದಾಗಿ ಸಿದ್ಧಪಡಿಸಬೇಕಾಗಿರುವುದರಿಂದ ಅರ್ಹ ಶಿಕ್ಷಕರಿಂದ ನೋಂದಾಯಿಸಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಸಹಾಯಕ ಮತದಾರರ ನೋಂದಣಾಧಿಕಾರಿಯೂ ಆಗಿರುವ ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್.ಮಂಜುನಾಥ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅರ್ಹತಾ ದಿನಾಂಕ 01.11.2025 ಕ್ಕೆ ಅನ್ವಯಿಸುವಂತೆ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯು ನೂತನವಾಗಿ ಸಿದ್ಧಪಡಿಸುವ ಕಾರ್ಯವು ಈಗಾಗಲೇ ಪ್ರಾರಂಭವಾಗಿದೆ. ಈ ಹಿಂದಿನ ಮತದಾರರ ಪಟ್ಟಿಯಲ್ಲಿ ಹೆಸರು ಇರುವ ಮತದಾರರು ಸಹ ನಮೂನೆ 19 ರಲ್ಲಿ ಹೊಸದಾಗಿ ಅರ್ಜಿ ಸಲ್ಲಿಸಬೇಕು ಎಂದು ತಿಳಿಸಿದ್ದಾರೆ.

***ವೇಳಾಪಟ್ಟಿ:***

06.11.2025 (ಗುರುವಾರ): ಅರ್ಜಿ ನಮೂನೆ 19 ರಲ್ಲಿ ಅರ್ಜಿಯನ್ನು ಸ್ವೀಕರಿಸುವ ಕೊನೆಯ ದಿನ. 25.11.2025 (ಮಂಗಳವಾರ): ಕರಡು ಮತದಾರರ ಪಟ್ಟಿ ಪ್ರಕಟಿಸುವ ದಿನ.

25.11.2025 (ಮಂಗಳವಾರ) ರಿಂದ 10.12.2025 (ಬುಧವಾರ) ರ ವರೆಗೆ ಹಕ್ಕು ಮತ್ತು ಆಕ್ಷೇಪಣೆಗಳಿಗಾಗಿ ನಿಗಧಿಪಡಿಸಿದ ಅವಧಿ.

30.12.2025 (ಮಂಗಳವಾರ): ಅಂತಿಮ ಮತದಾರರ ಪಟ್ಟಿ ಪ್ರಕಟಿಸುವ ದಿನ.

**ಹೆಸರು ನೋಂದಾಯಿಸಲು ಮಾರ್ಗಸೂಚಿ:**

ಭಾರತದ ಪ್ರಜೆಯಾಗಿರುವ, ಆಯಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸಾಮಾನ್ಯ ನಿವಾಸಿಯಾಗಿರುವ ಹಾಗೂ 1ನೇ ನವೆಂಬರ್ 2025 ಕ್ಕೆ ಮೊದಲ 6 ವರ್ಷಗಳ ಅವಧಿಯಲ್ಲಿ ಸೆಕೆಂಡರಿ ದರ್ಜೆಯಲ್ಲಿ ಪ್ರೌಢಶಾಲೆಗಿಂತ ಕಡಿಮೆ ಇಲ್ಲದ ನಿರ್ದಿಷ್ಟಪಡಿಸಿದಂತಹ ರಾಜ್ಯದೊಳಗಿನ ಯಾವುದೇ ಸರ್ಕಾರದಿಂದ ಮಾನ್ಯತೆ ಪಡೆದ ಶೈಕ್ಷಣಿಕ ಸಂಸ್ಥೆಗಳಲ್ಲಿ ಒಟ್ಟು ಕನಿಷ್ಠ 3 ವರ್ಷ ಬೋಧನಾ ವೃತಿಯಲ್ಲಿ ನಿರತವಾಗಿರುವ ಪ್ರತಿಯೊಬ್ಬ ವ್ಯಕ್ತಿಯು ಮತದಾರರ ಪಟ್ಟಿಯಲ್ಲಿ ತನ್ನ ಹೆಸರನ್ನು ಸೇರಿಸಲು ಅರ್ಹನಾಗಿರುತ್ತಾನೆ.

ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಿದ ಅರ್ಜಿಗಳನ್ನು ಮತದಾರರ ನೋಂದಣಾಧಿಕಾರಿಯು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗಾಗಿ ಪರಿಗಣಿಸತಕ್ಕದ್ದಲ್ಲ. ಸಂಸ್ಥೆಯ ಮುಖ್ಯಸ್ಥರು ಅವರ ಸಿಬ್ಬಂದಿಯವರ ಎಲ್ಲಾ ಅರ್ಜಿಗಳನ್ನು ಒಟ್ಟಾಗಿ ಮತದಾರರ ನೋಂದಣಾಧಿಕಾರಿಗಳಿಗೆ ಕಳುಹಿಸಬಹುದು. ಒಂದೇ ಕುಟಂಬದ ಎಲ್ಲಾ ಸದಸ್ಯರು ನಮೂನೆ 19 ರಲ್ಲಿ ಅರ್ಜಿಗಳನ್ನು ಕುಟುಂಬ ಯಾವುದಾದರೂ ಸದಸ್ಯರು ಸಲ್ಲಿಸಬಹುದು ಹಾಗೂ ಪ್ರತಿ ಸದಸ್ಯನಿಗೆ ಸಂಬಂಧಿಸಿದಂತೆ ಮೂಲ ಪ್ರಮಾಣ ಪತ್ರಗಳನ್ನು ಒದಗಿಸಿ, ಪ್ರಮಾಣ ಪತ್ರವನ್ನು ಪರಿಶೀಲಿಸಿಕೊಳ್ಳಬಹುದು.

ಅರ್ಜಿಯಲ್ಲಿನ ತಪ್ಪು ಅಥವಾ ತಪ್ಪೆಂದು ಅವನು ತಿಳಿದಿರುವ ಅಥವಾ ನಂಬುವಂತಹ ಅಥವಾ ಸತ್ಯವೆಂದು ನಂಬಲಾಗದಿರುವಂತಹ ಹೇಳಿಕೆಗಳನ್ನು ಅಥವಾ ಘೋಷಣೆಗಳನ್ನು ಮಾಡುವ ಯಾವುದೇ ವ್ಯಕ್ತಿಯನ್ನು ಪ್ರಜಾಪ್ರಾತಿನಿಧ್ಯ ಅಧಿನಿಯಮ 1950 ರ 31 ನೇ ಪ್ರಕರಣದ ಮೇರೆಗೆ ಶಿಕ್ಷೆಗೆ ಗುರಿಪಡಿಸಲಾಗುವುದು.

ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಯಾಗ ಬಯಸುವ ಪ್ರತಿಯೊಬ್ಬರು ಅರ್ಜಿ ನಮೂನೆ 19 ನ್ನು ಭರ್ತಿಮಾಡಿ ಅದರೊಂದಿಗೆ ಶೈಕ್ಷಣಿಕ ಸಂಸ್ಥೆಗಳಲ್ಲಿ 1 ನೇ ನವೆಂಬರ್ 2025 ಕ್ಕೆ ಮೊದಲು 6 ವರ್ಷಗಳ ಅವಧಿಯಲ್ಲಿ ಒಟ್ಟು ಕನಿಷ್ಟ 3 ವರ್ಷ ಭೋದನಾ ವೃತಿಯಲ್ಲಿ ನಿರತವಾಗಿರುವ ಬಗ್ಗೆ ಶೈಕ್ಷಣಿಕ ಸಂಸ್ಥೆಗಳಿಂದ ಅನುಬಂಧ 2 ರಲ್ಲಿ ಪ್ರಮಾಣ ಪತ್ರ ಸಲ್ಲಿಸಬೇಕು. ಯಾವುದೇ ವ್ಯಕ್ತಿ ಅಂಚೆ ಮೂಲಕ ಮತದಾರರ ನೋಂದಣಾಧಿಕಾರಿಗಳು, ಸಹಾಯಕ ಮತದಾರರ ನೋಂದಣಾಧಿಕಾರಿಗಳು, ಗೊತ್ತುಪಡಿಸಿದ ಅಧಿಕಾರಿಗೆ ಸಲ್ಲಿಸಿದಲ್ಲಿ ಅಂತಹ ಅರ್ಜಿದಾರರಿಗೆ ಗೊತ್ತು ಪಡಿಸಿದ ಅಧಿಕಾರಿಯು ವಿಚಾರಣೆಗೆ ಹಾಜರಾಗಲು ನೋಟಿಸ್ ನೀಡುತ್ತಾರೆ.

ವಿಚಾರಣೆಗೆ ಹಾಜರಾಗದೇ ಅಥವಾ ದಾಖಲೆಗಳನ್ನು ಹಾಜರುಪಡಿಸದಿದ್ದಲ್ಲಿ ಅರ್ಜಿಗಳು ತಿರಸ್ಕೃತಗೊಳ್ಳುತ್ತವೆ. ಬಲ್ಕ (ಗುಚ್ಚಗಳಲ್ಲಿ) ಅರ್ಜಿಗಳನ್ನು ಸ್ವೀಕರಿಸುವುದಿಲ್ಲ. ಆಯೋಗವು ಮುಂಬರುವ ದಿನಗಳಲ್ಲಿ ನಮೂನೆ 19 ರ ಅರ್ಜಿಗಳನ್ನು ಇಆರ್‌ಎಂಎಸ್ (ERMS) ನಲ್ಲಿ ಅಳವಡಿಸಲು ಉದ್ದೇಶಿಸಿರುತ್ತಾರೆ. ಕರ್ನಾಟಕ ಈಶಾನ್ಯ ಶಿಕ್ಷಕರ ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳು ಇದ್ದಲ್ಲಿ ಮತದಾರರ ನೋಂದಣಾಧಿಕಾರಿಗಳು ಹಾಗೂ ಸಹಾಯಕ ಮತದಾರರ ನೋಂದಣಾಧಿಕಾರಿಗಳ ಕಚೇರಿಯಲ್ಲಿ ಮತ್ತು ಸಂಬಂಧಪಟ್ಟ ವಿಧಾನಸಭಾ ಮತಕ್ಷೇತ್ರದ ಸಹಾಯಕ ಮತದಾರರ ನೋಂದಣಾಧಿಕಾರಿಗಳ ಕಾರ್ಯಾಲಯದಲ್ಲಿ (ಮಹಾನಗರ ಪಾಲಿಕೆ ಹಾಗೂ ತಹಸೀಲ್ ಕಾರ್ಯಾಲಯದಲ್ಲಿ) ನಿಗದಿಪಡಿಸಿದ ಕಾಲಮಿತಿಯೊಳಗೆ ಸಲ್ಲಿಸಬಹುದಾಗಿದೆ.

ಅರ್ಹ ಶಿಕ್ಷಕರು ಹೆಚ್ಚಿನ ಆಸಕ್ತಿ ವಹಿಸಿ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಂಡು ಸುಭದ್ರ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಸಕ್ರೀಯವಾಗಿ ಪಾಲ್ಗೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಶೇಷ ರೈಲು ಸೇವೆಗೆ ಸಂಸದ ಸಾಗರ ಖಂಡ್ರೆ ಚಾಲನೆ



ಮಲ್ಲಮ ನುಡಿ ವಾರ್ತೆ

ಬೀದರ: ಬೆಂಗಳೂರನಲ್ಲಿ ನಾಳೆ ನಡೆಯಲಿರುವ "ಬಸವ ಸಂಸ್ಕೃತಿ ಅಭಿಯಾನ" ಸಮಾರೋಪ ಸಮಾರಂಭಕ್ಕೆ ಬೀದರ ಲೋಕಸಭಾ ಕ್ಷೇತ್ರದಿಂದ ಬಸವ ಭಕ್ತರಿಗೆ ತೆರಳಲು ಸಂಸದರಾದ ಸಾಗರ ಖಂಡ್ರೆ ಅವರು ವಿಶೇಷ ರೈಲು ಸೇವೆಯ

ವ್ಯವಸ್ಥೆಯನ್ನು ಮಾಡಿದ್ದರು, ಆ ರೈಲ್ವೆಗೆ ಇಂದು ಹಸಿರು ನಿಶಾನೆ ತೋರುವ ಮೂಲಕ ಚಾಲನೆಯನ್ನು ನೀಡಿ, ಬಸವಭಕ್ತರ ಪ್ರಯಾಣ ಆರಾಮದಾಯಕವಾಗಲಿ ಎಂದು ಶುಭ ಹಾರೈಸಿದರು.

ಮಾಧ್ಯಮ ಮಿತ್ರರನ್ನು ಮಾತಾಡುತ್ತಾ, ಗುರು ಬಸವಣ್ಣನವರ ಜನ್ಮ ಸ್ಥಳ ಬಸವನ ಬಾಗೇವಾಡಿಯಿಂದ ಪ್ರಾರಂಭವಾಗಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಸಂಚರಿಸಿ, ಅಕ್ಟೋಬರ್ 5 ರಂದು ಬೆಂಗಳೂರಿನಲ್ಲಿ ಸಮಾರೋಪಗೊಳ್ಳಲಿರುವ "ಬಸವ ಸಂಸ್ಕೃತಿ ಅಭಿಯಾನಕ್ಕೆ" ಬಸವಣ್ಣನವರ ಕರ್ಮ ಭೂಮಿಯಾಗಿರುವ ನಮ್ಮ ಬೀದರ ಲೋಕಸಭಾ ಕ್ಷೇತ್ರದಿಂದ ಸಾವಿರಾರು ಬಸವಭಕ್ತ ಭಗವಾಹಿಸಲಿರುವ ನಮ್ಮ ಜನರ ಅರಾಮದಾಯಕ ಪ್ರಯಾಣದ ಸಲುವಾಗಿ ನಾನು ವಿಶೇಷ ರೈಲು ಸೇವೆಯನ್ನು ಮಾಡಿ ಇಂದು ಅದಕ್ಕೆ ಚಾಲನೆಯನ್ನು ನೀಡಿದ್ದೇನೆ ಎಂದು ತಿಳಿಸಿದರು.

12ನೇ ಶತಮಾನದಲ್ಲಿ ವಿಶ್ವದ ಮೊದಲನೇ ಪಾರ್ಲಿಮೆಂಟ್ "ಅನುಭವ ಮಂಟಪವನ್ನು" ಸ್ಥಾಪಿಸಿ, ಜಾತಿ ಪದ್ಧತಿ ನಿರ್ಮೂಲನೆಯನ್ನು ಮಾಡಿ, ಸಮಾಜದ ನಿರ್ಮಾಣ ಮಾಡಿದ ಮಹಾನ ಮಾನವತಾವಾದಿ ವಿಶ್ವಗುರು ಬಸವಣ್ಣನವರನ್ನು ರಾಜ್ಯದ ಮುಖ್ಯ

ಮಂತ್ರಿಗಳಾದ ಸನ್ಮಾನ್ಯ ಶ್ರೀ ಸಿದ್ದರಾಮಯ್ಯ ಅವರು ಗುರು ಬಸವಣ್ಣನವರನ್ನು ಕರ್ನಾಟಕ ರಾಜ್ಯದ ಸಂಸ್ಕೃತಿಕ ನಾಯಕ ಎಂದು ಘೋಷಣೆಯನ್ನು ಮಾಡಿ ಒಂದು ವರ್ಷ ಪೂರೈಸಿದ ಹಿನ್ನಲೆಯಲ್ಲಿ ರಾಜ್ಯದ

ಎಲ್ಲಾ ಮಠಾಧೀಶರು "ಬಸವ ಸಂಸ್ಕೃತಿಕ ಅಭಿಯಾನ" ವನ್ನು ಹಮ್ಮಿಕೊಂಡಿದ್ದು ಬಹಳ ಸಂತೋಷದ ವಿಷಯವಾಗಿದೆ ಎಂದು ಸಂಸದರು ತಿಳಿಸಿದ್ದಾರೆ.

ಸಮಾರಂಭ ಮುಗಿದ ಮೇಲೆ ಬಸವ ಭಕ್ತರು ಇದೇ ರೈಲ್ವೆಯಿಂದ ಬೆಂಗಳೂರಿನಿಂದ ಬೀದರಗೆ

ಬರಬಹುದು. ರೈಲ್ವೆ ಸಂಖ್ಯೆ: 07064, ಸ್ಥಳ ಬೆಂಗಳೂರು-ಬೀದರ್

ಹೊರಡುವ ದಿನಾಂಕ ಹಾಗೂ ಸಮಯ: 5ನೇ ಅಕ್ಟೋಬರ್ 2025 ರಾತ್ರಿ: 10.30 ಗಂಟೆ,

ಮುಟ್ಟುವ ದಿನಾಂಕ ಹಾಗೂ ಸಮಯ: 6ನೇ ಅಕ್ಟೋಬರ್ 2025 ಮಧ್ಯಾಹ್ನ : 02.40 ಗಂಟೆ.

## ಸಿನಿಮಾ ಟಿಕೆಟ್‌ಗಳ ಮಿತಿ ಕರ್ನಾಟಕ ಉಚ್ಚ ನ್ಯಾಯಾಲಯದಿಂದ ತಡೆಯಾಜ್ಞೆ ಮುಂದುವರಿಕೆ

ಮಲ್ಲಮ ನುಡಿ ವಾರ್ತೆ

ಬಳ್ಳಾರಿ : ರಾಜ್ಯದ ಎಲ್ಲಾ ಮಲ್ಟಿಪ್ಲೆಕ್ಸ್ ಗಳಲ್ಲಿ ಸಿನಿಮಾ ಟಿಕೆಟ್‌ಗಳ ಮೇಲೆ ವಿಧಿಸಿದ್ದ 200 ರೂ. ಗಳ ದರ ಮಿತಿಗೆ ಕರ್ನಾಟಕ ಉಚ್ಚ ನ್ಯಾಯಾಲಯವು ತಡೆಯಾಜ್ಞೆಯನ್ನು ಮುಂದುವರಿಸಿದೆ.

ಕರ್ನಾಟಕ ಉಚ್ಚ ನ್ಯಾಯಾಲಯದ ಪ್ರಧಾನ ಪೀಠದಲ್ಲಿ ದಾಖಲಾಗಿದ್ದ, ರಿಟ್ ಅಪೀಲು ಸಂಖ್ಯೆ: 1623/2025ರ (ಕರ್ನಾಟಕ ರಾಜ್ಯ ಚಲನಚಿತ್ರ ವಾಣಿಜ್ಯ ಮಂಡಳಿ ವಿರುದ್ಧ, ಮಲ್ಟಿಪ್ಲೆಕ್ಸ್ ಅಸೋಸಿಯೇಷನ್ ಇಂಡಿಯಾ) ಪ್ರಕರಣದಲ್ಲಿ ದಿನಾಂಕ:30.09.2025 ರಂದು ಮಾನ್ಯ ನ್ಯಾಯಾಲಯವು ಸಿನಿಮಾ ಟಿಕೆಟ್‌ಗಳ ಮೇಲೆ ವಿಧಿಸಿದ್ದ ರೂ.200/-ಗಳ ಮಿತಿಗೆ ದಿನಾಂಕ:23.09.2025ರಂದು ನೀಡಿದ ತಡೆಯಾಜ್ಞೆಯನ್ನು ಮುಂದುವರೆಸುವ ಜೊತೆಗೆ, ಈ ಕೆಳಕಂಡಂತೆ ಆದೇಶಿಸಿರುತ್ತದೆ.

***ದಾಖಲೆಗಳ ನಿರ್ವಹಣೆ:***

ಪ್ರತಿವಾದಿ ಸಂಖ್ಯೆ 1 ಮತ್ತು ಅದರ ಅಡಿಯಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಮಲ್ಟಿಪ್ಲೆಕ್ಸ್ ಗಳು, ಮಾರಾಟವಾದ ಪ್ರತಿಯೊಂದು ಟಿಕೆಟ್ ಗೆ ಸಮಗ್ರ ಮತ್ತು ಲೆಕ್ಕಪರಿಶೋಧಿಸಬಹುದಾದ ದಾಖಲೆಗಳನ್ನು ನಿರ್ವಹಿಸಲು ನಿರ್ದೇಶಿಸಲಾಗಿದೆ. ದಾಖಲೆಗಳು ಈ ಕೆಳಗಿನವುಗಳನ್ನು ಒಳಗೊಂಡಿರಬೇಕು.

ಮಾರಾಟದ ದಿನಾಂಕ ಮತ್ತು ಸಮಯ, ಆನ್‌ಲೈನ್ ಅಥವಾ ಭೌತಿಕ ಕೌಂಟರ್ ಗಳಲ್ಲಿ ಬುಕಿಂಗ್ ಮಾಡಿರುವ ವಿವರ, ಕ್ರೆಡಿಟ್/ಡೆಬಿಟ್ ಕಾರ್ಡ್, ಯುಪಿಐ ನೆಟ್ ಬ್ಯಾಂಕಿಂಗ್ ಅಥವಾ ನಗದು ಪಾವತಿ ಮಾಡಿರುವ ವಿವರ, ಸಂಗ್ರಹಿಸಿದ ಮೊತ್ತ, ಜಿಎಸ್‌ಟಿ ಘಟಕ.

ಎಲ್ಲಾ ನಗದು ವಹಿವಾಟುಗಳಿಗೆ ಡಿಜಿಟಲ್ ಆಗಿ ಪತ್ತೆಹಚ್ಚಬಹುದಾದ ರಸೀದಿಗಳನ್ನು ನೀಡಬೇಕು ಮತ್ತು ಪ್ರತಿದಿನ ಕ್ಯಾಶ್ ರಿಜಿಸ್ಟರ್ ಗಳನ್ನು ಮಲ್ಟಿಪ್ಲೆಕ್ಸ್ ನ ವ್ಯವಸ್ಥಾಪಕರು ಪ್ರತಿ ಸಹಿ ಮಾಡಬೇಕು.

**ಎಲೆಕ್ಟ್ರಾನಿಕ್ ವಹಿವಾಟುಗಳು**

ಅರ್ಜಿದಾರರು ಈ ಮೇಲ್ಮನವಿ/ಅರ್ಜಿಯ ಅಂತಿಮ ತೀರ್ಪಿನಲ್ಲಿ ಸಿಲುಕಿದರೆ, ಈ ನಿಬರ್ಂಧದ ಬಾಕಿ ಇರುವ ಸಮಯದಲ್ಲಿ ಎಲೆಕ್ಟ್ರಾನಿಕ್ ವಿಧಾನಗಳ ಮೂಲಕ (ಅನ್ವಯವಾಗುವ ಜಿಎಸ್‌ಟಿ ಹೊರತುಪಡಿಸಿ) ಸಂಗ್ರಹಿಸಿದ ಎಲ್ಲಾ ಮೊತ್ತವನ್ನು ಟಿಕೆಟ್ ಗಳನ್ನು ಬುಕ್ ಮಾಡಿದ ವೈಯಕ್ತಿಕ ಗ್ರಾಹಕರಿಗೆ ಬುಕಿಂಗ್ ಗೆ ಬಳಸುವ ಅದೇ ಪಾವತಿ ವಿಧಾನದ ಮೂಲಕ ಮರುಪಾವತಿಸಬೇಕು.

ಪ್ರತಿವಾದಿ ಸಂಖ್ಯೆ 1 ಇಂದಿನಿಂದ 45 ದಿನಗಳಲ್ಲಿ ಪರವಾನಗಿ ಪ್ರಾಧಿಕಾರಕ್ಕೆ ಮರುಪಾವತಿ ಪ್ರಕ್ರಿಯೆ ಯೋಜನೆಯನ್ನು ಅನುಮೋದನೆಗಾಗಿ ಸಲ್ಲಿಸಬೇಕು, ಇದು ಗ್ರಾಹಕರಿಗೆ ಮರುಪಾವತಿ ಮಾಡುವ ಕಾರ್ಯವಿಧಾನವನ್ನು ವಿವರಿಸುತ್ತದೆ. ಪರವಾನಗಿ ಪ್ರಾಧಿಕಾರದಿಂದ ಅನುಮೋದನೆಯ ನಂತರ ಅದನ್ನು ಅಂತಿಮ ಅನುಮೋದನೆಗಾಗಿ ಈ ನ್ಯಾಯಾಲಯದ ಮುಂದೆ ಇಡಬೇಕಾಗುತ್ತದೆ. ಈ ಹಿನ್ನೆಲೆಯಲ್ಲಿ, ಸಾರ್ವಜನಿಕರು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ತೀರ್ಪಿನನ್ವಯ, ಹಾಲಿ ಚಲನಚಿತ್ರ ಪ್ರದರ್ಶನಕ್ಕೆ ನೀಡಿರುವ ದರಕ್ಕೆ ಸಂಬಂಧಿಸಿದಂತೆ ಭೌತಿಕವಾಗಿ ಅಥವಾ ಎಲೆಕ್ಟ್ರಾನಿಕ್ ಮಾಧ್ಯಮದಲ್ಲಿ ಪಡೆದ ಟಿಕೆಟ್ ಗಳನ್ನು ಭದ್ರವಾಗಿ ಕಾಯ್ದಿರಿಸಿಕೊಳ್ಳತಕ್ಕದ್ದು,

ಹಾಗೆಯೇ, ಮಲ್ಟಿಪ್ಲೆಕ್ಸ್ ಚಿತ್ರಮಂದಿರಗಳ ಮಾಲೀಕರು ಎಲ್ಲಾ ರೀತಿಯಾ ಸಿನಿಮಾ ಟಿಕೆಟ್ ಗಳ ಮಾರಾಟದ ಸಂಪೂರ್ಣ ದಾಖಲೆಗಳನ್ನು ನಿರ್ವಹಿಸಬೇಕಾಗಿರುತ್ತದೆ.

ಈ ಪ್ರಕರಣದಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ / ಅಪೀಲು ಸಂಬಂಧದಲ್ಲಿ ನೀಡುವ ಅಂತಿಮ ಆದೇಶದಲ್ಲಿ ಅರ್ಜಿದಾರರಿಗೆ ಹಿನ್ನಡೆಯಾದಲ್ಲಿ ಗ್ರಾಹಕರಿಂದ ಸಂಗ್ರಹವಾದ ಹೆಚ್ಚುವರಿ ಮೊಬಲಗನ್ನು ಅವರುಗಳು ಪಾವತಿಸಿದ ವಿಧಾನದಲ್ಲಿಯೇ ಹಿಂದಿರುಗಿಸಲು ಅನುಕೂಲವಾಗುವಂತೆ ಅರ್ಜಿದಾರರು,

ರಾಜ್ಯ ಹಾಗೂ ಗ್ರಾಹಕರ ಹಿತಾಸಕ್ತಿಯನ್ನು ಗಮನದಲ್ಲಿರಿಸಿಕೊಂಡು ಮೇಲಿನ ನಿರ್ದೇಶನಗಳನ್ನು ನೀಡಿರುತ್ತದೆ ಎಂದು ಒಳಾಡಳಿತ ಇಲಾಖೆಯ (ಸೆರೆಮನೆ ಮತ್ತು ಸಿನಿಮಾ) ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಹಾಗೂ ಸರ್ಕಾರದ ಅಧೀನ ಕಾರ್ಯದರ್ಶಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗುರುನಾನಕ ಶಾಲೆಯಲ್ಲಿ ಹಳೆಯ ವಿದ್ಯಾರ್ಥಿಗಳ ಸಮ್ಮಿಲನ




ಮಲ್ಲಮ ನುಡಿ ವಾರ್ತೆ

ಬೀದರ : ಗುರುನಾನಕ ಪಬ್ಲಿಕ್ ಶಾಲೆಯ ಸುವರ್ಣ ಮಹೋತ್ಸವ ಅಂಗವಾಗಿ ನಗರದ ನೆಹರೂ ಕ್ರೀಡಾಂಗಣ ಸಮೀಪದ ಶಾಲೆಯಲ್ಲಿ ಶನಿವಾರ ಹಳೆಯ ವಿದ್ಯಾರ್ಥಿಗಳ ಸಮ್ಮಿಲನ ಸಡಗರ, ಸಂಭ್ರಮದಿಂದ ನಡೆಯಿತು.

1975 ರಿಂದ 2025 ರ ವರೆಗಿನ ಅವಧಿಯಲ್ಲಿ ಶಾಲೆಯಲ್ಲಿ 1ನೇ ತರಗತಿಯಿಂದ 10ನೇ ತರಗತಿ ವರೆಗೆ ವ್ಯಾಸಂಗ ಮಾಡಿದ ವಿವಿಧೆಡೆಯ 1,500 ವಿದ್ಯಾರ್ಥಿಗಳು ಸಮ್ಮಿಲನದಲ್ಲಿ ಉತ್ಸಾಹದಿಂದ ಪಾಲ್ಗೊಂಡರು.

ಶಾಲೆ ಆವರಣದಲ್ಲಿ ಶಾಲೆ ಆರಂಭದ ದಿನಗಳಿಂದ ಈವರೆಗಿನ ವಿವಿಧ ಕಾರ್ಯಕ್ರಮಗಳು, ಗಣ್ಯರ ಭೇಟಿ, ಕ್ರೀಡೆ, ಸ್ಪರ್ಧೆ, ಗುಂಪು ಚಿತ್ರ ಮೊದಲಾದ ಛಾಯಾಚಿತ್ರಗಳ ಪ್ರದರ್ಶನ ಏರ್ಪಡಿಸಲಾಗಿತ್ತು.

ವಿದ್ಯಾರ್ಥಿಗಳು ಛಾಯಾಚಿತ್ರಗಳನ್ನು ವೀಕ್ಷಿಸಿ ಸಂತಸ ಪಟ್ಟರು. ತಮ್ಮ ಹಳೆಯ ಶಾಲಾ ದಿನಗಳ ಮೆಲುಕು ಹಾಕಿದರು. ಹಳೆಯ ಸಹಪಾಠಿಗಳೊಂದಿಗೆ ಮುಕ್ತವಾಗಿ ಬೆರೆತರು. ಬಹು ದಿನಗಳ ನಂತರ ಭೇಟಿಯಾಗಿದ್ದಕ್ಕೆ ಆಯಾ ಬ್ಯಾಗ್‌ಗಳ ವಿದ್ಯಾರ್ಥಿಗಳಲ್ಲಿ ಸಂಭ್ರಮದ ಭಾವ ಮನೆ ಮಾಡಿತ್ತು.

ಹಳೆಯ ವಿದ್ಯಾರ್ಥಿಗಳಿಂದ ನಡೆದ ಭಾಂಗಡಾ ನೃತ್ಯ, ಸಮೂಹ ನೃತ್ಯ, ಗಾಯನ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಕಾರ್ಯಕ್ರಮಕ್ಕೆ ವಿಶೇಷ ಕಳೆ ತಂದುಕೊಟ್ಟವು.

ಶಾಲೆಯಲ್ಲಿ ಸೇವೆ ಸಲ್ಲಿಸಿದ ನಿವೃತ್ತ ಶಿಕ್ಷಕರನ್ನು ಗುರುನಾನಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ. ಎಸ್.ಬಲಬೀರ್‌ಸಿಂಗ್ ಅವರು ಶಾಲು ಹೊದಿಸಿ, ಪುಷ್ಪಗುಚ್ಛ ನೀಡಿ, ಗೌರವಿಸಿದರು.

ಸಮಾರಂಭದಲ್ಲಿ ಮಾತನಾಡಿದ ಗುರುನಾನಕ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷೆ ಡಾ. ರೇಷ್ಮಾ ಕೌರ್ ಅವರು, ಸರ್ದಾರ್ ಜೋಗಾಸಿಂಗ್ ಅವರು ಸ್ಥಾಪಿಸಿದ ಗುರುನಾನಕ ಪಬ್ಲಿಕ್ ಶಾಲೆ ಜಿಲ್ಲೆಯ ಹಳೆಯ ಶಾಲೆಗಳಲ್ಲಿ ಒಂದಾಗಿದೆ. ಗುಣಮಟ್ಟದ ಶಿಕ್ಷಣದ ಮೂಲಕ ಜಿಲ್ಲೆಯಲ್ಲಿ ಮನೆ ಮಾತಾಗಿದೆ. ಆರಂಭದಲ್ಲಿ ಸಣ್ಣದಾಗಿ ಶುರುವಾದ ಶಾಲೆ ಈಗ ಹೆಮ್ಮರವಾಗಿದೆ. ಶಾಲೆಯ ಸುವರ್ಣ ಮಹೋತ್ಸವದ ಸಂಭ್ರಮದಲ್ಲಿರುವುದು ಅತ್ಯಂತ ಸಂತಸ ಉಂಟು ಮಾಡಿದೆ ಎಂದು ಹೇಳಿದರು.

ಶಾಲೆಯಲ್ಲಿ ಓದಿದ ಅನೇಕ ವಿದ್ಯಾರ್ಥಿಗಳು ಜನಪ್ರತಿನಿಧಿ, ಐಎಎಸ್, ಐಪಿಎಸ್, ಐಎಫ್‌ಎಸ್ ಸೇರಿ ವಿವಿಧ ಉನ್ನತ ಹುದ್ದೆಗಳಲ್ಲಿ ಇದ್ದಾರೆ. ಬಹಳಷ್ಟು ಮಂದಿ ವಿವಿಧ ಕ್ಷೇತ್ರಗಳಲ್ಲಿ ಯಶಸ್ಸು ಕಂಡು ಉಜ್ವಲ ಬದುಕು ಕಟ್ಟಿಕೊಂಡಿದ್ದಾರೆ. ದೇಶ, ವಿದೇಶಗಳಲ್ಲಿ ನೆಲೆಸಿದ್ದಾರೆ ಎಂದು ಹೆಮ್ಮೆಯಿಂದ ನುಡಿದರು.

ಜೋಗಾಸಿಂಗ್ ಅವರು ಹಾಕಿಕೊಟ್ಟ ಮಾರ್ಗದಲ್ಲೇ ಈಗಲೂ ಶಾಲೆಯನ್ನು ಯಶಸ್ವಿಯಾಗಿ ಮುನ್ನಡೆಸಿಕೊಂಡು ಹೋಗುತ್ತಿದ್ದು, ವಿದ್ಯಾರ್ಥಿಗಳಿಗೆ ಗುಣಮಟ್ಟದ, ಸ್ಪರ್ಧಾತ್ಮಕ ಶಿಕ್ಷಣದ ಜತೆಗೆ ಉತ್ತಮ ಸಂಸ್ಕಾರ ಸಹ ಕಲಿಸಲಾಗುತ್ತಿದೆ ಎಂದು ತಿಳಿಸಿದರು.

ಗುರುನಾನಕ ಪಬ್ಲಿಕ್ ಶಾಲೆ ಜಿಲ್ಲೆಯ ಪ್ರತಿಷ್ಠಿತ ಶಾಲೆಯಾಗಿದೆ. ಈ ಶಾಲೆಯಲ್ಲಿ ಓದಿದ್ದು ನನ್ನ ಸುದೈವ. ಶಾಲಾ ಆಡಳಿತ ಮಂಡಳಿ, ಶಿಕ್ಷಕರ ಮಾರ್ಗದರ್ಶನ, ಪಾಲಕರ ಆಶೀರ್ವಾದದಿಂದ ನಾನು ಕನಸು ಕಂಡಿದ್ದು ನೆನಸು ಮಾಡಲು ಸಾಧ್ಯವಾಯಿತು ಎಂದು ಶಾಲೆಯ ಹಳೆಯ ವಿದ್ಯಾರ್ಥಿ ಶಿವಕುಮಾರ ತಿಳಿಸಿದರು.

ಗುರುನಾನಕ ಶಾಲೆಯಲ್ಲಿ ಸಾರ್ಥಕ ಸೇವೆ ಸಲ್ಲಿಸಿದ ಖುಷಿ ನನಗಿದೆ. ಸೇವಾ ನಿವೃತ್ತಿ ನಂತರವೂ ಸಂಸ್ಥೆಯವರು ನಮ್ಮನ್ನು ಕರೆಸಿ, ಸನ್ಮಾನಿಸಿರುವುದು ಬಹಳ ಸಂತಸ ತಂದಿದೆ.

ಗುರು- ಶಿಷ್ಯ ಸಂಬಂಧ ಬಹಳ ಪವಿತ್ರವಾದದ್ದು, ಹಳೆಯ ವಿದ್ಯಾರ್ಥಿಗಳು ಹಲವು ವರ್ಷಗಳ ನಂತರ ಭೇಟಿ ಮಾಡಿ ಗೌರವಿಸಿರುವುದರಿಂದ ಹೃದಯ ತುಂಬಿ ಬಂದಿದೆ ಎಂದು ನಿವೃತ್ತ ಶಿಕ್ಷಕ ಮನೋಹರ ಮುಳೆ ಹೇಳಿದರು.

ಶಾಲೆಯ ಮುಖ್ಯೋಪಾಧ್ಯಾಯ ಆರೀಫ್ ಹಾದಿ, ಪ್ರಾಚಾರ್ಯ ನಳಿನಿ ಡಿ.ಜಿ. ಡೀನರಾದ ಹನುಮಾನ, ಅಮಜದ ಅಲಿ ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಅ. 6 ರಂದು ಮುಖ್ಯಮಂತ್ರಿಗಳ ಕೊಪ್ಪಳ ಜಿಲ್ಲಾ ಪ್ರವಾಸ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಅಕ್ಟೋಬರ್ 6ರಂದು ಕೊಪ್ಪಳ ಜಿಲ್ಲೆಯಲ್ಲಿ ಪ್ರವಾಸ ಕಾರ್ಯಕ್ರಮವನ್ನು ಕೈಗೊಂಡಿದ್ದಾರೆ.

ಅಂದು ಬೆಳಗ್ಗೆ 10.30 ಗಂಟೆಗೆ ಬೆಂಗಳೂರಿನ ಹೆಚ್‌ಎಎಲ್ ವಿಮಾನ ನಿಲ್ದಾಣದಿಂದ ವಿಶೇಷ ವಿಮಾನದ ಮೂಲಕ ಹೊರಟು ಬೆಳಗ್ಗೆ 11.40ಕ್ಕೆ ಕೊಪ್ಪಳದ ಗಿಣಿಗೇರಾ ಏರ್‌ಸ್ಟ್ರಿಪ್‌ಗೆ ಆಗಮಿಸುವರು. ಅಲ್ಲಿಂದ 11.50ಕ್ಕೆ ನಿರ್ಗಮಿಸಿ ರಸ್ತೆಯ ಮೂಲಕ ಮಧ್ಯಾಹ್ನ 12 ಗಂಟೆಗೆ ಕೊಪ್ಪಳ ನಗರದ ಗಂಗಾವತಿ ರಸ್ತೆಯ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಕಿಮ್ಸ್) ಭೋಧಕ ಆಸ್ಪತ್ರೆಗೆ ಆಗಮಿಸಿ ವೈದ್ಯಕೀಯ ಶಿಕ್ಷಣ ಇಲಾಖೆ, ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಕಿಮ್ಸ್) ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್, ಕೊಪ್ಪಳ ವತಿಯಿಂದ ಆಯೋಜಿಸಲಾದ 450 ಹಾಸಿಗೆಯ ಸಾಮರ್ಥ್ಯದ ಬೋಧಕ ಆಸ್ಪತ್ರೆಯ ನೂತನ ಕಟ್ಟಡ ಮತ್ತು ಧರ್ಮಶಾಲಾ ಕಟ್ಟಡದ ಉದ್ಘಾಟನಾ ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯ ಶಂಕುಸ್ಥಾಪನೆ ನೆರವೇರಿಸುವರು. ನಂತರ ಮಧ್ಯಾಹ್ನ 12.45ಕ್ಕೆ ಕೊಪ್ಪಳ ಸಮೀಪದ ಭಾಗ್ಯನಗರದಲ್ಲಿ ಇಂದಿರಾ ಕ್ಯಾಂಟೀನ್ ಉದ್ಘಾಟನೆ ನೆರವೇರಿಸುವರು. 1ಗಂಟೆಗೆ ಕೊಪ್ಪಳ ಬಸ್ ನಿಲ್ದಾಣ ಎದುರುಗಡೆ ಭಕ್ತ ಕನಕದಾಸರ ಪುತ್ಥಳಿ ಅನಾವರಣಗೊಳಿಸುವರು. ಬಳಿಕ ಮಧ್ಯಾಹ್ನ 1.15ಕ್ಕೆ ಕೊಪ್ಪಳ ನಗರದ ಹೊಸಪೇಟೆ ರಸ್ತೆಯ ಮಾರುತಿ ಸುಜೂಕಿ ಕಾರ್ ಶೋ ರೂಂ ಎದುರುಗಡೆಯ ಅಗಡಿ ಲೇಔಟನಲ್ಲಿ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕೊಪ್ಪಳ ವತಿಯಿಂದ ಕೊಪ್ಪಳ ಜಿಲ್ಲಾ ವ್ಯಾಪ್ತಿಯ ರೂ. 2000 ಕೋಟಿ ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ, ಶಂಕುಸ್ಥಾಪನೆ ಹಾಗೂ ವಿವಿಧ ಇಲಾಖಾ ಯೋಜನೆಗಳ ಫಲಾನುಭವಿಗಳ ಸವಲತ್ತು ವಿತರಣಾ ಕಾರ್ಯಕ್ರಮದಲ್ಲಿ ಭಾಗವಹಿಸುವರು. ನಂತರ ಕಾರ್ಯಕ್ರಮ ಜಿಲ್ಲಾಡಳಿತ ಭವನದಲ್ಲಿ ಕಾಯ್ದಿರಿಸಲಾಗಿದೆ. ಅಂ-ದು ಸಂಜೆ 4 ಗಂಟೆಗೆ ಅಗಡಿ ಬಡಾವಣೆಯಿಂದ ನಿರ್ಗಮಿಸಿ, 4.15ಕ್ಕೆ ಗಿಣಿಗೇರಾ ಏರ್‌ಸ್ಟ್ರಿಪ್‌ಗೆ ಆಗಮಿಸಿ, ಅಲ್ಲಿಂದ 4.25ಕ್ಕೆ ವಿಶೇಷ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಮುಖ್ಯಮಂತ್ರಿಯವರ ವಿಶೇಷ ಕರ್ತವ್ಯಾಧಿಕಾರಿಗಳು ಹಾಗೂ ಹಾಗೂ ಪದನಿಮಿತ್ತ ಸರ್ಕಾರದ ವಿಶೇಷ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಶ್ನೆ ಸಿಂಪಲ್ ಇರಬೇಕು ಜಾತಿಗಣತಿ ವೇಳೆ ಡಿ.ಕೆ ಶಿವಕುಮಾರ್ ಅಸಮಾಧಾನ

ಮಲ್ಲಮ್ಮ ನುಡಿವಾರ್ತೆ

ಬೆಂಗಳೂರು: ನಗರದಲ್ಲಿ ಇಂದಿನಿಂದ (ಅ.4) ಜಾತಿಗಣತಿ ಸಮೀಕ್ಷೆ ಆರಂಭವಾಗಿದ್ದು, ಡಿಸಿಎಂ ಡಿ.ಕೆ ಶಿವಕುಮಾರ್ ಅವರ ಸದಾಶಿವನಗರ ನಿವಾಸದಲ್ಲೂ ಸಮೀಕ್ಷೆ ನಡೆಯಿತು. ಈ ವೇಳೆ ಗಣತಿದಾರರ ಬಳಿ ಪ್ರಶ್ನೆಗಳ ವಿಚಾರಕ್ಕೆ ಡಿಸಿಎಂ ಅಸಮಾಧಾನ ಹೊರಹಾಕಿದ್ದಾರೆ. ಸಿಎಂ ಪತ್ನಿ ಉಷಾ ಜೊತೆ ಕುಳಿತು ಅಧಿಕಾರಿಗಳಿಗೆ ಎಲ್ಲಾ ಮಾಹಿತಿ ನೀಡಿದರು. ಈ ವೇಳೆ, ಗಣತಿಯ ಓಟಿಪಿ ಯಾವ ಮೊಬೈಲ್‌ಗೆ ಬಂದಿದೆ ಎಂದು ಹುಡುಕಾಟ ನಡೆಸಿದರು. ಕೊನೆಗೆ ಓಟಿಪಿ ಬಂದಿರುವ ಮೊಬೈಲನ್ನು ಸಿಬ್ಬಂದಿಯೇ ಹುಡುಕಿ ತಂದುಕೊಟ್ಟರು. ಬಳಿಕ ಓಟಿಪಿ ಹೇಳಿ ಗಣತಿಗೆ ಎಲ್ಲಾ ಮಾಹಿತಿ ನೀಡಿದರು. ಗಣತಿಯಲ್ಲಿ ಮಾಹಿತಿ ಸಂಗ್ರಹದ ದಾಖಲೆ ನೋಡಿ ಇಷ್ಟೊಂದು ಪ್ರಶ್ನೆಗಳು ಇದಾವಾ? ನಾನು ಫಾರಂ ನೋಡಿರಲಿಲ್ಲ,

# ಬಸವ ಸಂಸ್ಕೃತಿ ಯಾತ್ರೆ ಕಾರ್ಯಕ್ರಮ ಕಾಂಗ್ರೆಸ್ ಅವನತಿಗೆ ನಾಂದಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.4-ಪ್ರತ್ಯೇಕ ಲಿಂಗಾಯತವಾದಿಗಳಿಂದರವಿವಾರ ಬೆಂಗಳೂರಿನಲ್ಲಿ ನಡೆಯಲಿರುವ ಬಸವ ಸಂಸ್ಕೃತಿ ಯಾತ್ರೆಯ ಮುಕ್ತಾಯ ಕಾರ್ಯಕ್ರಮ ಕಾಂಗ್ರೆಸ್ ಪಕ್ಷದ ಅವನತಿಗೆ ನಾಂದಿ ಹಾಡಲಿದೆ ಎಂದು ಶಿರಹಟ್ಟಿಯ ಫಕೀರ ದಿಂಗಾಲೇಶ್ವರ ಸ್ವಾಮೀಜಿ ಅಭಿಪ್ರಾಯಪಟ್ಟಿದ್ದಾರೆ.

ನಗರದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಪೂಜ್ಯರು, ಸಮಾಜವನ್ನು ಒಡೆಯುವ ಗುಂಪಿನಿಂದ ಮುಖ್ಯಮಂತ್ರಿಗಳು ದೂರವಿರಬೇಕು. ಸಮಾಜವನ್ನು ಅಡ್ಡ ದಾರಿಗೆ ತರುವ ಪ್ರಯತ್ನಕ್ಕೆ ನಡೆಸಿರುವ ಪ್ರತ್ಯೇಕ ಲಿಂಗಾಯತವಾದಿಗಳಿಂದ ಅಂತರ ಕಾಯ್ದುಕೊಳ್ಳಬೇಕು ಎಂದು ಹೇಳಿದರು.

2018 ರಲ್ಲಿ ಪ್ರತ್ಯೇಕ ಲಿಂಗಾಯತವಾದಿಗಳ ಪರವಾಗಿ ನಿಂತಿದ್ದರಿಂದಾಗಿ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಯಾವ ಸ್ಥಿತಿ ಬಂತು ಎಂಬುದನ್ನು ಆ ಪಕ್ಷದ ನಾಯಕರು ತಿಳಿದುಕೊಳ್ಳಬೇಕು ಎಂದ ದಿಂಗಾಲೇಶ್ವರ ಸ್ವಾಮೀಜಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಬಗ್ಗೆ ನಮಗೆ ಗೌರವವಿದೆ. ಅವರ ಕಾರ್ಯದಕ್ಷತೆಯ ಬಗೆಗೆ ನಮಗೆ ಪ್ರೇಮವಿದೆ. ಆದರೆ ಸಮಾಜವನ್ನು ಒಡೆಯುವ ಗುಂಪಿನಲ್ಲಿ ರಾಜ್ಯದ ಮುಖ್ಯಮಂತ್ರಿಗಳು ಪಾಲ್ಗೊಳ್ಳುವುದು ಸೂಕ್ತವಲ್ಲ ಎಂದರು.

ಈ ಹಿಂದೆ ಅನೇಕ ದೊಡ್ಡ ದೊಡ್ಡ ಸ್ವಾಮಿಗಳು, ದೊಡ್ಡ ನಾಯಕರು ಪ್ರತ್ಯೇಕ ಲಿಂಗಾಯತ ಧರ್ಮ ಸ್ಥಾಪನೆಗೆ ಮುಂದಾಗಿ ಹಿನ್ನಡೆ ಅನುಭವಿಸಿದ್ದಾರೆ. ಈಗ ಮತ್ತೆ ವ್ಯರ್ಥ ಪ್ರಯತ್ನಕ್ಕೆ ಕೆಲವರು ಮುಂದಾಗಿದ್ದಾರೆ. ಹೀಗಾಗಿ ಪ್ರತಿ ಜಿಲ್ಲೆಯಲ್ಲಿ ಮಠಾಧೀಶರು ಹಾಗೂ ಜನರಿಗೆ ಮನವಿ ಮಾಡಿಕೊಂಡು ಬಹುಸಂಖ್ಯೆಯಲ್ಲಿ ಕಾರ್ಯಕ್ರಮಕ್ಕೆ ಬರುವಂತೆ ಕೋರಿದ್ದಾರೆ.

ಪ್ರತ್ಯೇಕ ಲಿಂಗಾಯತ ಅಂತ ಹೆಸರನ್ನು ಮಾಡುವುದು ಅಖಂಡ ವೀರಶೈವ ಲಿಂಗಾಯತ ಸಮಾಜಕ್ಕೆ ಮಾಡುವ ದ್ರೋಹವಾಗಿದ್ದು, ಇದು ಸಮಾಜ ವಿಘಟನೆಯ ಕಾರ್ಯವಾಗಿದೆ ಎಂಬುದನ್ನು ಮುಖ್ಯಮಂತ್ರಿಗಳು ಗಮನಿಸಬೇಕು ಎಂದು ಅವರು ಹೇಳಿದರು.

ರಾಜ್ಯದ ಮಠಾಧಿಪತಿಗಳು ಸೇರಿದಂತೆ ಕರ್ನಾಟಕ, ಆಂಧ್ರ, ಮಹಾರಾಷ್ಟ್ರ, ಕೇರಳ, ತೆಲಂಗಾಣದಲ್ಲಿರುವ ಜನರ ಒಲವು ವೀರಶೈವ ಲಿಂಗಾಯತ ಒಂದೇ ಎಂಬುದಾಗಿದೆ. ಸಮಾಜಕ್ಕೆ ಬೇಡವಾಗಿರುವ ಕೆಲವು ಮಠಾಧಿಪತಿಗಳ ಬೇಡಿಕೆಯನ್ನು ತಾವು ಮನ್ನಿಸುವುದರಿಂದ ತಮ್ಮ ವ್ಯಕ್ತಿತ್ವ ಹಾಗೂ ತಮ್ಮ ಪಕ್ಷ-ಕ್ಕೆ ಹಾನಿ ಉಂಟುಮಾಡುತ್ತದೆ ಎಂಬುದನ್ನು ಮುಖ್ಯಮಂತ್ರಿಗಳು ಅರಿತುಕೊಳ್ಳಬೇಕು ಎಂದ ದಿಂಗಾಲೇಶ್ವರ ಸ್ವಾಮೀಜಿ, ಹಿಂದೆ ಉಂಡಿರುವ ಕಹಿಯನ್ನು ಮತ್ತೆ ಮುಂದೆ ಅನುಭವಿಸಬಾರದು ಎಂಬುದನ್ನು ಅವರ ಗಮನಕ್ಕೆ ತರುತ್ತಿದ್ದೇವೆ ಎಂದರು.

ಬ್ರಿಟಿಷ ಸರ್ಕಾರದ ಆಡಳಿತದಲ್ಲಾಗಲಿ, ಮುಸ್ಲಿಂ ಆಳ್ವಿಕೆ ಮತ್ತು ದೇಶವನ್ನಾಳಿದವರು ಮಠಗಳು ಹಾಗೂ ಸಮಾಜಗಳ ವಿಚಾರದಲ್ಲಿ ಯಾರೂ ಹಸ್ತಕ್ಷೇಪ ಮಾಡಿಲ್ಲ. ಈಗಲೂ ಅದು ಮುಂದುವರೆಯಬೇಕು ಎಂಬುದು ನಮ್ಮ ಆಶಯ ಎಂದ ಶ್ರೀಗಳು, ಸಮಾಜವನ್ನು ಒಡೆಯುವ ಪ್ರಯತ್ನವಾದಿಗಳಿಗೆ ಮನ್ನಣೆ ಕೊಡಬಾರದು ಎಂದು ಹೇಳಿದರು.

ಅಮೀನಗಡದ ಪ್ರಭುಶಂಕರ ಸ್ವಾಮೀಜಿ, ಕಮತಗಿಯ ಹೊಳೆ ಹುಚ್ಚೇಶ್ವರ ಶ್ರೀಗಳು, ಗುಳೇದಗುಡ್ಡದ ನೀಲಕಂಠ ಶಿವಾಚಾರ್ಯ ಸ್ವಾಮೀಜಿ, ಪುರತಗೇರಿಯ ಕೈಲಾಸಲಿಂಗ ಶಿವಾಚಾರ್ಯ ಸ್ವಾಮೀಜಿ, ಬಿಲ್ ಕೆರೂರಿನ ಸಿದ್ಧಲಿಂಗ ಶಿವಾಚಾರ್ಯ ಸ್ವಾಮೀಜಿ ಇದ್ದರು.

**ಸರ್ಕಾರದ ತಪ್ಪು ನಿರ್ಧಾರ**

ಜಾತಿ ಗಣತಿ ಸರ್ಕಾರದ ತಪ್ಪು ನಿರ್ಧಾರವಾಗಿದೆ. ಕೇವಲ 15 ದಿನಗಳಲ್ಲಿ ಗಣತಿ ಮಾಡುವುದು ವ್ಯರ್ಥ ಪ್ರಯತ್ನವಾಗಿದೆ.

ತೆಲಂಗಾಣದಲ್ಲಿ 3.50 ಕೋಟಿ ಜನರ ಗಣತಿಗೆ 2 ತಿಂಗಳ ಅವಧಿ ಬೇಕಾಯಿತು ಎನ್ನುವುದಾದರೆ 7 ಕೋಟಿ ಜನರಿರುವ ಕರ್ನಾಟಕದಲ್ಲಿ 15 ದಿನಗಳ ಕಾಲಾವಧಿ ನೀಡಿರುವುದು ಸರಿಯೇ ಎಂದು ಪ್ರಶ್ನಿಸಿದ ದಿಂಗಾಲೇಶ್ವರ ಸ್ವಾಮೀಜಿ, ಗಣತಿದಾರರ ಸಮಸ್ಯೆಗಳು ಬಹಳಷ್ಟಿವೆ. ಇದನ್ನು ಸರ್ಕಾರ ಗಮನಿಸಬೇಕಿತ್ತು ಎಂದರು.

# ಸಿದ್ದರಾಮಯ್ಯಗೆ ಅಸ್ಥಿರತೆಯ ಭಾವನೆ ಕಾಡುತ್ತಿದೆ: ಕೇಂದ್ರ ಸಚಿವ ಜೋಶಿ

ಮಲ್ಲಮ್ಮ ನುಡಿವಾರ್ತೆ



ಹುಬ್ಬಳ್ಳಿ: :ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಅಸ್ಥಿರತೆಯ ಭಾವನೆ ಕಾಡುತ್ತಿದ್ದು, ಹೀಗಾಗಿಯೇ ಇನ್ನೂ ಎರಡು ವರ್ಷಗಳ ಕಾಲ ನಾನೇ ಮುಖ್ಯಮಂತ್ರಿ ಎಂದು ಪದೇ ಪದೇ ಹೇಳುತ್ತಿದ್ದಾರೆಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿಯವರು ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಸ್ಥಿರತೆಯ ಕಾರಣದಿಂದ ಸಿದ್ದರಾಮಯ್ಯ ನಾನೇ ಸಿಎಂ ಎಂದು ಪದೇ ಪದೇ ಹೇಳುತ್ತಿದ್ದಾರೆ. ನಾನೇ ಸಿಎಂ ಇರುತ್ತೇನೆಂದು ಹೇಳುವುದು ಅಸ್ಥಿರತೆಯ ಮೊದಲ ಲಕ್ಷಣ ಎಂದಿದ್ದಾರೆ. ಯಾಕೆ ಅವರಿಗೆ ವಿಶ್ವಾಸವಿಲ್ಲವಾ? ಬದುಕಿದ್ದವನು, ನಾನು ಬದುಕಿದ್ದೇನೆ ಬದುಕಿದ್ದೇನೆ ಎಂದು ಯಾಕೆ ಹೇಳುತ್ತಾನೆ.

ನಾನು ಸತ್ತಿಲ್ಲ, ಬದುಕಿದ್ದೇನೆ ಅಂತ ಹೇಳುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ವ್ಯಂಗ್ಯವಾಡಿದರು. ಜಾತಿ ಗಣತಿ ಕುರಿತು ಮಾತನಾಡಿ, ಕ್ರಾಂತಿ ಸ್ವಲ್ಪ ಆ ಕಡೆ, ಈ ಕಡೆ ಆಗಬಹುದು. ಕ್ರಾಂತಿ ಬಗ್ಗೆ ಕಾಂಗ್ರೆಸ್‌ನವರೇ ಹೇಳಿದ್ದಾರೆ. ಅದನ್ನು ತಪ್ಪಿಸಲು ಜಾತಿ ಗಣತಿ ಆರಂಭಿಸಿದ್ದಾರೆ.

ಮುಜಾವರ್ ಮುಸ್ಲಿಂ ಬ್ರಾಹ್ಮಣ ಎಂದು ಸೇರಿಸಿದ್ದಾರೆ. ಅದನ್ನು ಎಲ್ಲಿಂದ ತಂದಿದ್ದಾರೆಂದು ಪ್ರಶ್ನಿಸಿದರು. ಇದೇ ವೇಳೆ ಜಿಎಸ್‌ಟಿ ಹಂಚಿಕೆಯಲ್ಲಿ ಕರ್ನಾಟಕಕ್ಕೆ ಅನ್ಯಾಯವಾಗಿದೆ ಎಂದು ದೂರುವ ಕಾಂಗ್ರೆಸ್ ನಾಯಕರಿಗೆ ಸವಾಲು ಹಾಕಿದ ಅವರು, ಯುಪಿಎ ಮತ್ತು ಹಿಂದಿನ ಕಾಂಗ್ರೆಸ್ ಸರ್ಕಾರಗಳ ಅವಧಿಯಲ್ಲಿ ರಾಜ್ಯಕ್ಕೆ ಎಷ್ಟು ಪಾಲು ಸಿಕ್ಕಿತು ಎಂಬುದನ್ನು ಅವರು ವಿವರಿಸಬೇಕು ಎಂದು ಹೇಳಿದರು.

ರಾಜ್ಯ ಸರ್ಕಾರಗಳು ಕೇಳುವ ಮೊದಲೇ ಕೇಂದ್ರ ಸರ್ಕಾರ ಹಣವನ್ನು ಒದಗಿಸುತ್ತದೆ, ಆದರೆ ಕಾಂಗ್ರೆಸ್ ಪಕ್ಷ ಆಳ್ವಿಕೆಯಲ್ಲಿದ್ದ ಸಂದರ್ಭದಲ್ಲಿ, ರಾಜ್ಯಗಳು ಕೇಂದ್ರದಿಂದ ತಮ್ಮ ಪಾಲನ್ನು ಪದೇ ಪದೇ ಕೇಳಬೇಕಾಗಿತ್ತು. ಪ್ರಸ್ತುತ ರಾಜ್ಯ ಸರ್ಕಾರವು ಹಣಕಾಸಿನ ದುರುಪಯೋಗದ ಆರೋಪ ಮಾಡಿದೆ. ಅದು ಕೇಂದ್ರ ಸರ್ಕಾರವನ್ನು ಅನ್ಯಾಯವಾಗಿ ದೂಷಿಸುತ್ತಿದೆ ಎಂದು ತಿಳಿಸಿದರು.


ಕರ್ನಾಟಕ ಸರ್ಕಾರ

**ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭೀವೃದ್ಧಿ ಇಲಾಖೆ**

**ಕಾರ್ಯನಿರ್ವಾಹಕ ಅಭಿಯಂತರವರ ಕಛೇರಿ, ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭೀವೃದ್ಧಿ ವಿಭಾಗ, ಬೀದರ.**

ನಂ: ಇಇ/ಎಂಐಡಿ/ಬೀದರ/ತಾ.ಶಾ-1,2&3/ಟೆಂಡರ್/2025-26/ 1785 ದಿನಾಂಕ: 03-10-2025

**ಕೆಪಿಪಿ-ಪ್ರೋಕ್ಯೂರಮೆಂಟ್ಸ ಟೆಂಡರ್ ಪ್ರಕಟಣೆ ಕರೆ-3**

1) ಕಾಮಗಾರಿಗಳ ವಿವರ. KPP -Portal ನಲ್ಲಿ ನಮೂದಿಸಿದಂತೆ. 2) ಕಾಮಗಾರಿಗಳ ಅಂದಾಜು ಮೊತ್ತ. KPP -Portal ನಲ್ಲಿ ನಮೂದಿಸಿದಂತೆ. 3) ಗುತ್ತಿಗೆದಾರರ ಅರ್ಹತೆ ವಿವರ.KPP -Portal ನಲ್ಲಿ ನಮೂದಿಸಿದಂತೆ 4) ಕಾಮಗಾರಿಗಳ ಟೆಂಡರ ಮೊತ್ತದ ವಿವರ.KPP -Portal ನಲ್ಲಿ ನಮೂದಿಸಿದಂತೆ, 5) ಟೆಂಡರ್ ಅರ್ಜಿಯ ಬೆಲೆ ಮತ್ತು ಇ.ಎಂ.ಡಿ. ಮೊತ್ತದ ವಿವರ.KPP -Portal ನಲ್ಲಿ ನಮೂದಿಸಿದಂತೆ. 6) ಟೆಂಡರ ಬಗ್ಗೆ ಮಾಹಿತಿ ಹಾಗೂ ಕ್ಲಾರಿಫಿಕೇಶನ್ ಕೊನೆಯ ದಿನಾಂಕ: ಕೆ.ಡಬ್ಲ್ಯೂ -2 ಮಾತ್ರ :**09-10-2025 ರಂದು 17.00 ಗಂಟೆವರೆಗೆ** 7) ಟೆಂಡರ ಸ್ವೀಕರಿಸುವ ಕೊನೆಯ ದಿನಾಂಕ ಕೆ.ಡಬ್ಲ್ಯೂ -2 ಮಾತ್ರ :**11-10-2025 ರಂದು 16.00 ಗಂಟೆ ವರೆಗೆ,** 8) ಟೆಂಡರ ತಾಂತ್ರಿಕ ಬಿಡ್ ತೆರೆಯುವ ದಿನಾಂಕ. ಕೆ.ಡಬ್ಲ್ಯೂ -2 ಮಾತ್ರ :**14-10-2025 ರಂದು 11.00 ಗಂಟೆಗೆ ಸಾಧ್ಯವಾದಲ್ಲಿ,** 9) ಟೆಂಡರ ಆರ್ಥಿಕ ಬಿಡ್ ತೆರೆಯುವ ದಿನಾಂಕ. ಕೆ.ಡಬ್ಲ್ಯೂ -2 ಮಾತ್ರ **16-10-2025 ರಂದು 11.00 ಗಂಟೆಗೆ ಸಾಧ್ಯವಾದಲ್ಲಿ,** 10) ಹೆಚ್ಚಿನ ವಿವರಗಳಿಗೆ ಸಂಪರ್ಕಿಸಬೇಕಾದ ವಿಳಾಸ, ಕಛೇರಿ ವಿಳಾಸ, ದೂರವಾಣಿ ಸಂಖ್ಯೆ. :ಕಾರ್ಯನಿರ್ವಾಹಕ ಇಂಜಿನೀಯರರು, ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭೀವೃದ್ಧಿ ಇಲಾಖೆ.ವಿಭಾಗ, ಬೀದರ. ದೂರವಾಣಿ ಸಂ: 08482 232080, 11) ಅಂತರ್ಜಾಲ ತಾಣದ ವಿಳಾಸ. KPP portal https://kppp.karnataka.gov.in

**ಸಹಿ/- ಕಾರ್ಯ ನಿರ್ವಾಹಕ ಅಭಿಯಂತರರು,**
**ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭೀವೃದ್ಧಿ ವಿಭಾಗ, ಬೀದರ.**

ವಾ.ಸಾ.ಸಂ.ಇ/ಬೀದರ/191/ಕೆ.ಎಸ್.ಎಂ.ಸಿ.&ಎ/2025-26







Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.